ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 136
7–11–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 136

## ಕೊಪ್ಪಳ: ಅಪ್ರಾಪ್ತ ತಂಗಿಯನ್ನು ಗರ್ಭಿಣಿ ಮಾಡಿ ಜೈಲು ಸೇರಿದ ಅಣ್ಣ; ಗಂಡು ಮಗುವಿಗೆ ಜನ್ಮ ನೀಡಿದ ಅಪ್ರಾಪ್ತೆ

**ಕೊಪ್ಪಳ:** ಮನೆಯಲ್ಲಿ ಯಾರೂ ಇಲ್ಲದಾಗ ತನ್ನ ಅಪ್ರಾಪ್ತ ತಂಗಿಯನ್ನೇ ನಿರಂತರವಾಗಿ ಅತ್ಯಾಚಾರ ಮಾಡುತ್ತಿದ್ದ ಆರೋಪಿ ಇದೀಗ ಪೋಕ್ಸೋ ಪ್ರಕರಣದಲ್ಲಿ ಜೈಲು ಸೇರಿದ್ದಾನೆ. ಇನ್ನು ಗರ್ಭವತಿಯಾಗಿದ್ದ ಬಾಲಕಿ ವಾರದ ಹಿಂದೆ ಗಂಡು ಮಗುವಿಗೆ ಜನ್ಮ ನೀಡಿದ್ದಾಳೆ. ಸದ್ಯ ಆರೋಪಿಯನ್ನ ಪೊಲೀಸರು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಕಳೆದ ಅಕ್ಟೋಬರ್? 26ರ ಬೆಳಿಗ್ಗೆ ಮನೆ ಕೆಲಸ ಮಾಡುವಾಗ ಬಾಲಕಿ ಜಾರಿ ಬಿದ್ದಿದ್ದಳು. ಹೀಗಾಗಿ ಬಾಲಕಿಯನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಬಾಲಕಿಯನ್ನು ಪರೀಕ್ಷಿಸಿದ ವೈದ್ಯರು ಬಾಲಕಿಯ ಬೆನ್ನಿಗೆ ಗಾಯವಾಗಿದ್ದು ಸ್ಕ್ಯಾನಿಂಗ್ ಮಾಡುವಂತೆ ಸೂಚಿಸಿದರು. ನಂತರ ಅಕ್ಟೋಬರ್ 30ರಂದು ಬಾಲಕಿಗೆ ಕೊಪ್ಪಳ ಜಿಲ್ಲಾಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಮಾಡಿಸಿದಾಗ ಹೊಟ್ಟೆಯಲ್ಲಿ ಮಗುವಿರುವುದು ಪತ್ತೆಯಾಗಿತ್ತು. ಅದೇ ದಿನ ರಾತ್ರಿ ಗಂಡು ಮಗುವಿಗೆ ಆಕೆ ಜನ್ಮ ನೀಡಿದ್ದಳು.

### ರಾಜ್ಯ ಸಚಿವ ಸಂಪುಟ ಸಭೆ:

# 518.27 ಕೋಟಿ ರೂ. ವೆಚ್ಚದ 'ಕರ್ನಾಟಕ ನವೋದ್ಯಮ ನೀತಿ 2025 –2030'ಕ್ಕೆ ಅನುಮೋದನೆ : ಸಚಿವ ಹೆಚ್‌ಕೆಪಿ

**ಬೆಂಗಳೂರು:** ರಾಜ್ಯವನ್ನು ಜಾಗತಿಕ ನಾವೀನ್ಯತೆ ಕೇಂದ್ರವನ್ನಾಗಿಸುವ ಗುರಿಯೊಂದಿಗೆ ಐದು ವರ್ಷಗಳಲ್ಲಿ ಒಟ್ಟು ರೂ. 518. 27 ಕೋಟಿ ವೆಚ್ಚದ ಕರ್ನಾಟಕ ನಾವೀನ್ಯತೆ ನೀತಿ 2025 –2030ಕ್ಕೆ ರಾಜ್ಯ ಸಚಿವ ಸಂಪುಟ ಸಭೆ ಗುರುವಾರ ಅನುಮೋದನೆ ನೀಡಿದೆ.

ಸಂಪುಟ ಸಭೆಯ ನಂತರ ಸುದ್ದಿಗಾರರಿಗೆ ಮಾಹಿತಿ ನೀಡಿದ ರಾಜ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್. ಕೆ. ಪಾಟೀಲ್, 25,000 ಹೆಚ್ಚುವರಿ ನವೋದ್ಯಮಗಳನ್ನು ಸ್ಥಾಪಿಸುವ ಗುರಿಯನ್ನು ಸರ್ಕಾರ ಹೊಂದಿದೆ. ಅವುಗಳಲ್ಲಿ 10,000 ಸ್ಟಾರ್ಟ್ ಅಪ್ ಗಳನ್ನು ಬೆಂಗಳೂರಿನ ಹೊರಗೆ ಸ್ಥಾಪಿಸಲಾಗುವುದು ಎಂದು ತಿಳಿಸಿದರು.

ಸುಸ್ಥಿರ ಬೆಳವಣಿಗೆ ಮತ್ತು ತಾಂತ್ರಿಕ ಪ್ರಗತಿಗೆ ಅಗತ್ಯವಾದ ಸಂಪನ್ಮೂಲಗಳು, ಮಾರ್ಗದರ್ಶನ ಮತ್ತು ಮೂಲಸೌಕರ್ಯಗಳನ್ನು ಒದಗಿಸುವ ಮೂಲಕ ರಾಜ್ಯವನ್ನು ಜಾಗತಿಕ ನಾವೀನ್ಯತೆ ಕೇಂದ್ರವನ್ನಾಗಿಸಲು ಪೂರಕ ಪರಿಸರ ವ್ಯವಸ್ಥೆ



ಅಭಿವೃದ್ಧಿಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸುವಂತೆ ನೀತಿಯನ್ನು ರೂಪಿಸಲಾಗಿದೆ ಎಂದು ಹೇಳಿದರು.

ವ್ಯಕ್ತಿ ಬಂಧನಕ್ಕೆ ಸಂಬಂಧಿಸಿದ ಮಾಹಿತಿಯ ದಾಖಲೆ ನಿರ್ವಹಣೆ ನಿಯಮಗಳು, 2025, ಕರ್ನಾಟಕ ಪೊಲೀಸ್ ಅಧಿಕಾರಿಯಿಂದ ಅಂತಿಮ ನಮೂನೆ ಸಲ್ಲಿಕೆ ನಿಯಮಗಳು, 2025 ಮತ್ತು ಕರ್ನಾಟಕ ನಮೂನೆ ಮತ್ತು ಮಾಹಿತಿ ವಿಧಾನ ನಿಯಮಗಳೆಂಬ ಪ್ರಮುಖ ಮೂರು ನಿಯಮಗಳಿಗೆ ಸಂಪುಟದ ಅನುಮೋದನೆ ದೊರೆತಿದೆ.

ಬೆಂಗಳೂರಿನ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ಸಹಯೋಗದೊಂದಿಗೆ ಮೈಸೂರಿನ ರಾಣಿ ಕೃಷ್ಣಜಮ್ಮಣ್ಣಿ ಕ್ಷಯ ಮತ್ತು ಎದೆ ರೋಗಗಳ ಆಸ್ಪತ್ರೆ ಆವರಣದಲ್ಲಿ ಪೆರಿಫೆರಲ್ ಕ್ಯಾನ್ಸರ್ ಕೇಂದ್ರ ಸ್ಥಾಪನೆಗೆ ರೂ. 94.50 ಕೋಟಿ ವೆಚ್ಚದಲ್ಲಿ ಉಪಕರಣಗಳನ್ನು ಖರೀದಿಸಲು ಸಚಿವ ಸಂಪುಟವು ಆಡಳಿತಾತ್ಮಕ ಅನುಮೋದನೆ ನೀಡಿದೆ. ಇದರಿಂದ ಮೈಸೂರು, ಸುತ್ತಮುತ್ತಲಿನ ಜಿಲ್ಲೆಗಳು ಮತ್ತು ನೆರೆಯ ರಾಜ್ಯಗಳಲ್ಲಿನ ಕ್ಯಾನ್ಸರ್ ರೋಗಿಗಳಿಗೆ ಕೈಗೆಟುಕುವ ಬೆಲೆಯಲ್ಲಿ ಗುಣಮಟ್ಟದ ಚಿಕಿತ್ಸೆಗೆ ಅನುಕೂಲವಾಗಲಿದೆ. ಜೊತೆಗೆ ರೋಗಿಗಳ ಹೊರೆ ಮತ್ತು ಚಿಕಿತ್ಸೆಯ ವಿಳಂಬವನ್ನು ಕಡಿಮೆ ಮಾಡುತ್ತದೆ ಎಂದು ಸಚಿವರು ತಿಳಿಸಿದರು.

ಮಂಗಳೂರು ತಾಲ್ಲೂಕಿನ ಬಜ್ಪೆಯಲ್ಲಿ ಅಂದಾಜು ರೂ. 20 ಕೋಟಿ ವೆಚ್ಚದಲ್ಲಿ ಹೊಸ ಹಜ್ ಭವನ ನಿರ್ಮಾಣಕ್ಕೆ ಸಚಿವ ಸಂಪುಟದಲ್ಲಿ ಅನುಮೋದನೆ ದೊರೆತಿದೆ. ಕರ್ನಾಟಕ ವಸತಿ ಮಂಡಳಿಯ ಮೂಲಕ ನಿರ್ಮಿಸಲಾಗುವ ಈ ಕಟ್ಟಡ ಹಜ್ ಯಾತ್ರಿಕರಿಗೆ ಎಲ್ಲಾ ಅಗತ್ಯ ಸೌಲಭ್ಯಗಳನ್ನು ಒದಗಿಸುತ್ತದೆ ಮತ್ತು ಬೆಂಗಳೂರಿನ ಹಜ್ ಭವನದ ಮಾದರಿಯಲ್ಲಿ ಇದನ್ನು ನಿರ್ಮಾಣ ಮಾಡಲಾಗುವುದು ಎಂದರು.

ತುಮಕೂರು ಜಿಲ್ಲೆಯ 13 ಹಳ್ಳಿಗಳನ್ನು ಕೊರಟಗೆ–ರೆ ಪಟ್ಟಣ ಪಂಚಾಯಿತಿಯೊಂದಿಗೆ ವಿಲೀನಗೊಳಿಸಿ ಕೊರಟಗೆರೆ ಪಟ್ಟಣ ಪುರಸಭೆಯನ್ನು ರಚನೆ, ವಿಜಯಪುರ ನಗರ ಪಾಲಿಕೆಗೆ ಹೆಚ್ಚುವರಿ ಪ್ರದೇಶಗಳ ಸೇರ್ಪಡೆ, ಯಾದಗಿರಿಯ ದೋರನಹಳ್ಳಿ ಮತ್ತು ಬೀದರ್ ಜಿಲ್ಲೆಗಳ ರಾಜೇಶ್ವರವನ್ನು ಪಟ್ಟಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೇರಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ.

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಃಘಖಖಃ) ಅಡಿಯಲ್ಲಿ ಕೋರಮಂಗಲ–ಚಲ್ಲಘಟ್ಟ ಕಣಿವೆ, ಅಗರ ಮತ್ತು ಸಾರಕ್ಕಿಯಲ್ಲಿರುವ ಒಳಚರಂಡಿ ಸಂಸ್ಕರಣಾ ಮತ್ತು ಪಂಪಿಂಗ್ ಕೇಂದ್ರಗಳ ಐದು ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆಗಾಗಿ ರೂ. 49.91 ಕೋಟಿ ಹಣವನ್ನು ಸಚಿವ ಸಂಪುಟ ಸಭೆ ಮಂಜೂರು ಮಾಡಿದೆ.

# ಅನ್ನದಾನ, ವಿದ್ಯಾದಾನಕ್ಕಿಂತ ಶ್ರೇಷ್ಠದಾನ, ರಕ್ತದಾನ: ಗಂಗಾಧರಸ್ವಾಮಿ

**ದಾವಣಗೆರೆ :** ದಾನಗಳಲ್ಲಿಯೇ ಶ್ರೇಷ್ಠವಾದದು ಅನ್ನದಾನ, ವಿದ್ಯಾದಾನ. ಆದರೆ ಅವೆರಡಕ್ಕಿಂತ ಮಿಗಿಲು ಹಾಗೂ ಮಹತ್ವವಾದದೇ ರಕ್ತದಾನ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಗುರುವಾರ ಆಯೋಜಿಸಲಾಗಿದ್ದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿ, ನೌಕರರಿಗೆ ಉಚಿತ ಆರೋಗ್ಯ ತಪಾಸಣೆ ಹಾಗೂ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರಿಗೂ ರಕ್ತದಾನದ ಮಹತ್ವ ತಿಳಿಯಬೇಕಾದರೆ ಇಂತಹ ಶಿಬಿರಗಳು ನಿರಂತರವಾಗಿ ಆಯೋಜಿಸಬೇಕು ಎಂದರು. ಇತ್ತೀಚೆಗೆ ಬದಲಾದ ಆಹಾರ ಪದ್ಧತಿಯಿಂದ ಹಲವಾರು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ನೆರೆ ಜಿಲ್ಲೆಗಳಿಂದ ಅಪಘಾತಕ್ಕೊಳಗಾದವರು, ಅದರಲ್ಲೂ ಮಹಿಳೆಯರು ಹೆರಿಗೆ ಸಂದರ್ಭದಲ್ಲಿ ರಕ್ತ ಹೀನತೆಯಿಂದ ಬಳಲುತ್ತಿರುವವರಿಗೆ



ರಕ್ತದ ಅವಶ್ಯಕತೆ ಹೆಚ್ಚಿರುತ್ತದೆ. ಅಂತಹವರಿಗೆ ರಕ್ತದಾನ ಶಿಬಿರದಿಂದ ಸಂರಕ್ಷಿಸಿದ ರಕ್ತವು ಸಹಕಾರಿಯಾಗಲಿದೆ. ಆದ ಕಾರಣ ಈ ರೀತಿಯ ಶಿಬಿರಗಳು ನಿರಂತರವಾಗಿ ಆಯೋಜನೆ ಮಾಡುವುದರಿಂದ ಬಡವರಿಗೆ, ಸಾರ್ವಜನಿಕರಿಗೆ ತುಂಬಾ ಸಹಕಾರಿಯಾಗಲಿದೆ. ಇಂತಹ ಶಿಬಿರಗಳಿಂದ ಪ್ರೇರೇಪಿತರಾಗಿ ಪ್ರತಿಯೊಬ್ಬರೂ ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಿ ಅಮೂಲ್ಯವಾದ ಜೀವ ಉಳಿಸಲು ಕೈಜೋಡಿಸಬೇಕು ಎಂದರು.

ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠಲ ರಾವ್ ಮಾತನಾಡಿ, ಕರ್ನಾಟಕದ ಮಧ್ಯ ಭಾಗದಲ್ಲಿನ ಈ ಜಿಲ್ಲೆಗೆ ನೆರೆ ಹೊರೆಯ ನಾಲ್ಕು ಜಿಲ್ಲೆಗಳಿಂದ ಅತೀ ಹೆಚ್ಚು ರೋಗಿಗಳು ಚಿಕಿತ್ಸೆಗೆ ಬರುತ್ತಾರೆ. ರಕ್ತದಾನಕ್ಕಿಂತ ಹೆಚ್ಚಿನ ದಾನ ಬೇರಾವುದು ಇಲ್ಲ. ಇಡೀ ಪ್ರಪಂಚದಲ್ಲಿ ಬೇರೆ ಯಾವುದೇ ಉತ್ಪನ್ನವನ್ನು ಬೇಕಾದರೂ ತಯಾರಿಸಬಹುದು. ಆದರೆ ರಕ್ತವನ್ನು ಉತ್ಪಾದಿಸಲು ಸಾಧ್ಯವಿಲ್ಲ. ಅಪಘಾತ, ಸಿ–ಸೆಕ್ಷನ್‌ಗೆ ಒಳಗಾದವರು, ಹೀಗೆ ಹಲವಾರು ರೀತಿಯ ಸಮಸ್ಯೆಗಳನ್ನು ಎದುರಿಸುತ್ತಿರುತ್ತಾರೆ. ಅಂತಹವರಿಗೆ ಸಕಾಲದಲ್ಲಿ ರಕ್ತ ನೀಡುವ ಮೂಲಕ ಜೀವಹಾನಿಯಾಗುವುದನ್ನು ತಡೆಯಬಹುದು ಎಂದರು.

ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್ ಮಾತನಾಡಿ, ರಕ್ತದಾನದ ಮಹತ್ವ ಪ್ರತಿಯೊಬ್ಬರೂ ತಿಳಿದಿರಬೇಕು. 18 ರಿಂದ 65 ವರ್ಷದ ಒಳಗಿನ ಆರೋಗ್ಯವಂತ ವ್ಯಕ್ತಿ ಯಾರಾದರೂ ರಕ್ತದಾನ ಮಾಡಬಹುದಾಗಿದೆ. ಒಬ್ಬ ವ್ಯಕ್ತಿ ರಕ್ತದಾನ ಮಾಡುವುದರಿಂದ 3 ಜೀವಗಳನ್ನು ರಕ್ಷಸಬಹುದು. ಭಾರತದಲ್ಲಿ ಒಟ್ಟು ಜನಸಂಖ್ಯೆಗೆ ಅನುಗುಣವಾಗಿ ರಕ್ತ ಹೊಂದಾಣಿಕೆ ಮಾಡಲಾಗುತ್ತಿಲ್ಲ. ಶೇ.1 ರಷ್ಟು ಜನಸಂಖ್ಯೆಗೆ ಕೇವಲ ಶೇ.0.8 ಮಾತ್ರ ಲಭ್ಯವಿದೆ. ಆದ್ದರಿಂದ ಮುಂದಿನ ದಿನಗಳಲ್ಲಿ ತಾಲ್ಲೂಕು ಮಟ್ಟದಲ್ಲಿಯೂ ಆಯೋಜನೆ ಮಾಡಿ ಸಾರ್ವಜನಿಕರಿಗೆ ರಕ್ತದಾನದ ಮಹತ್ವ ತಿಳಿಸಬೇಕಿದೆ ಎಂದರು.

**100ಕ್ಕೂ ಹೆಚ್ಚಿನ ಅಭ್ಯರ್ಥಿಗಳಿಂದ ರಕ್ತದಾನ:**

ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಸ್ವಯಂಪ್ರೇರಿತ ರಕ್ತದಾನ ಶೀಬಿರದಲ್ಲಿ ತಪೋವನ ಕಾಲೇಜಿನ 50 ವಿದ್ಯಾರ್ಥಿಗಳು ಹಾಗೂ ಜಿಲ್ಲಾ ಪಂಚಾಯತ್ ಸಿಇಓ ಮತ್ತು ಪಂಚಾಯತ್ ರಾಜ್ ಇಲಾಖೆ ಸಿಬ್ಬಂದಿ ಸೇರಿ 100ಕ್ಕೂ ಹೆಚ್ಚು ಜನರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಿದರು. ಹಾಗೂ ಇದೇ ಸಂದರ್ಭದಲ್ಲಿ ಜಿಲ್ಲಾ ವ್ಯಾಪ್ತಿಯ ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳಿಗೆ, ಇಓ, ಪಿಡಿಓ ಸೇರಿದಂತೆ ಎಲ್ಲಾ ಅಧಿಕಾರಿ, ಸಿಬ್ಬಂದಿಗೆ ರಕ್ತದೊತ್ತಡ, ಶುಗರ್, ಇನ್ನಿತರೆ ಖಾಯಿಲೆಗಳಿಗೆ ಸಂಬಂಧಿಸಿದಂತೆ 250ಕ್ಕೂ ಹೆಚ್ಚಿನ ನೌಕರರಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಲಾಯಿತು.

ಈ ವೇಳೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಮಮತಾ ಹೊಸಗೌಡರ, ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ, ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್, ಸಿಜೆ ಜಿಲ್ಲಾಸ್ಪತ್ರೆ ಸರ್ಜನ್ ಡಾ:ನಾಗೇಂದ್ರಪ್ಪ,

## ಕೆಪಿಎಸ್ ಶಾಲೆಯಲ್ಲಿ ಗುರುವಂದನಾ ಕಾರ್ಯಕ್ರಮ

**ದಾವಣಗೆರೆ:** ತಾಲ್ಲೂಕಿನ ದೊಡ್ಡಬಾತಿ ಗ್ರಾಮದ ಕರ್ನಾಟಕ ಪಬ್ಲಿಕ್ (ಕೆಪಿಎಸ್) ಶಾಲೆಯ 2004–05 ನೇ ಸಾಲಿನ ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳಿಂದ ಈಚೆಗೆ ಶಾಲಾ ಆವರಣದಲ್ಲಿ ಗುರುವಂದನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ವಿದ್ಯಾರ್ಥಿಗಳಿಂದ ತಮಗೆ ಕಲಿಸಿದ ಎಲ್ಲಾ ಗುರುಗಳನ್ನು ಅಲಂಕೃತ ರಥದಲ್ಲಿ ಕೂರಿಸಿ, ಮೆರವಣಿಗೆಯಲ್ಲಿ ವಾದ್ಯಗಳೊಂದಿಗೆ ಸಡಗರ ಸಂಭ್ರಮ ಹಾಗೂ ನೃತ್ಯದೊಂದಿಗೆ ಶಾಲಾ ಆವರಣಕ್ಕೆ ಕರೆತಂದು ಗುರುಗಳಿಗೆ ಪುಷ್ಪಾರ್ಚನೆ ಮಾಡುವುದರ ಮೂಲಕ ವೇದಿಕೆಗೆ ಬರಮಾಡಿಕೊಂಡರು.

ಕಾರ್ಯಕ್ರಮದ ಸವಿನೆನಪಿಗಾಗಿ ವಿದ್ಯಾರ್ಥಿ ಬಳಗದಿಂದ ಶಾಲೆಯ 10 ಕೊಠಡಿಗಳಿಗೆ ಅಂದಾಜು 50,000 ಮೌಲ್ಯದ ಇಂಟರ್ ಕಾಂ ಸೌಂಡ್ ಮತ್ತು ಸ್ಪೀಕರ್ ಸಿಸ್ಟಮ್ ಅನ್ನು ಕೊಡುಗೆಯನ್ನಾಗಿ ಗುರುಗಳಿಗೆ ಹಸ್ತಾಂತರಿಸಿದರು.

ಉಪ ಪ್ರಾಂಶುಪಾಲರಾದ ಕೆ.ಹೆಚ್. ಬೀರಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಿಕ್ಷಕರುಗಳಾದ ಸಿ ಎಚ್ ನಾಗೇಂದ್ರಪ್ಪ, ಅಂಚಿ ಅಬುಸಾಲೇಹ, ಬಿ ಎಲ್ ಲಘುಮಪ್ಪ, ಹೊಬಾನಾಯ್ಕ,ಜಿ ಆರ್ ಕಲ್ಲಪ್ಪ, ಎ ಬಿ ಚಂದ್ರಶೇಖರ್. ಕೆ ಜಿ ಸಂಪತ್ ಕುಮಾರ್, ಸಿ ಎಂ ಮೇಘನಾಥ್, ಬಿ ಸಿ ಮಲ್ಲಿಕಾರ್ಜುನ,ಬಿ ಸುವರ್ಣಮ್ಮ, ರುಕ್ಕಿಣಿ, ಕೆ. ಗೀತಾ, ಮಲಕಪ್ಪ ಹಾಗೂ ಬೋಧಕೇತರ ಸಿಬ್ಬಂದಿಗಳಾದ ಸುರೇಂದ್ರಾಚಾರಿ, ದಸ್ತಗಿರಿ ಹಾಗೂ ಗ್ರಾಮ ಪಂಚಾಯಿತಿಯ ಸರ್ವ ಸದಸ್ಯರು ಹಾಗೂ ಎಸ್ ಡಿಎಂಸಿ ಯ ಸದಸ್ಯರುಗಳು ಹಾಗೂ ಗ್ರಾಮದ ಹಿರಿಯರಿಗೆ ನೆನಪಿನ ಕಾಣಿಕೆಯೊಂದಿಗೆ ಗೌರವ ಸಲ್ಲಿಸಲಾಯಿತು.

!! ಶ್ರೀ ಉಚ್ಚಂಗೆಮ್ಮದೇವಿ ಪ್ರಸನ್ನ !! !! ಶ್ರೀ ಕೂಲಳ್ಳಿ ಗೋಣಿಬಸವೇಶ್ವರ ಪ್ರಸನ್ನ !!

ಕೈಲಾಸ ಶಿವಗಣರಾಧನೆ ಆಹ್ವಾನ ಪತ್ರಿಕೆ



ದಿ|| ಶ್ರೀ ಷಣ್ಮುಖ
ಎ.ಪಿ.ಎಂ.ಸಿ. ಯಾರ್ಡ್, ದೇವಿ ಟ್ರೇಡರ್ಸ್ ಮಾಲಿಕರು
ನಿಧನ : 30–11–202

ಶ್ರೀಮತಿ ಗಂಗಮ್ಮ ಮತ್ತು ಮಕ್ಕಳು ಇವರು ಮಾಡುವ ವಿಜ್ಞಾಪನೆಗಳು ದಿನಾಂಕ: 30–10–2025ರಂದು ಬೆಳಗಿನ ಜಾವ 3–10 ಗಂಟೆಗೆ ನನ್ನ ಪೂಜ್ಯ ಪತಿಯವರಾದ

ಶ್ರೀ ಬಂಡ್ರಿ ಷಣ್ಮುಖ

ಇವರು ದೈವಾದೀನರಾದ ಪ್ರಯುಕ್ತ ಮೃತರ ಆತ್ಮ ಶಾಂತಿಗಾಗಿ

"ಕೈಲಾಸ ಶಿವಗಣಾರಾಧನೆಯನ್ನು"

ದಿನಾಂಕ: 07–11–2025 ನೇ ಶುಕ್ರವಾರ ಬೆಳಗ್ಗೆ 10–30 ರಿಂದ ಮೃತರ ಸ್ವಗೃಹ ಎಂ.ಬಿ.ಕೇರಿ, ದಾವಣಗೆರೆ ಇಲ್ಲಿ ನೆರವೇರಿಸಲು ಗುರು–ಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

**ಇಂತಿ ದುಃಖತಪ್ತರು: ಶ್ರೀಮತಿ ಗಂಗಮ್ಮ ಮತ್ತು ಮಕ್ಕಳು, ಅಳಿಯಂದಿರು ಮೊಮ್ಮಕ್ಕಳು, ಬಂಡ್ರಿ ವಂಶಸ್ಥರು, ಗ್ರಾಮಸ್ಥರು, ಬಂಧುಮಿತ್ರರು.**

ವಿ.ಸೂ.:– ಆಹ್ವಾನ ಪತ್ರಿಕೆ ತಲುಪದಿದ್ದವರು ಇದನ್ನೇ ಅಧಿಕೃತ ಆಹ್ವಾನವೆಂದು ಆಗಮಿಸಲು ಕೋರುತ್ತೇವೆ.

## ಇಂದು ಬಿಐಇಟಿಯಲ್ಲಿ ರಾಜ್ಯೋತ್ಸವ, ಸಾಂಪ್ರದಾಯಿಕ ದಿನ

**ದಾವಣಗೆರೆ:** ಇಲ್ಲಿನ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವ, ಸಾಂಪ್ರದಾಯಿಕ ದಿನ ಮತ್ತು ಧಮನಿ–2025 ರ ಉದ್ಘಾಟನಾ ಕಾರ್ಯಕ್ರಮವು ನ.7 ರಂದು ಬೆಳಿಗ್ಗೆ 10 ಗಂಟೆಗೆ ಕಾಲೇಜು ಆವರಣದಲ್ಲಿರುವ ಎಸ್.ಎಸ್. ಮಲ್ಲಿಕಾರ್ಜುನ ಸಾಂಸ್ಕೃತಿಕ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾಲೇಜಿನ ಪ್ರಾಂಶುಪಾಲರಾದ ಡಾ. ಎಚ್.ಬಿ. ಅರವಿಂದ್ ಅಧ್ಯಕ್ಷತೆಯಲ್ಲಿ ಜರುಗುವ ಕಾರ್ಯಕ್ರಮದಲ್ಲಿ ದಾವಣಗೆರೆ ತಾಲ್ಲೂಕಿನ ಕಸಾಪ ಅಧ್ಯಕ್ಷೆ ಸುಮತಿ ಜಯಪ್ಪ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ವಿದ್ಯಾರ್ಥಿ ಪರಿಷತ್ತಿನ ಮುಖ್ಯಸ್ಥೆ ಡಾ. ಹೆಚ್.ಪಿ. ವಿನುತಾ ಉಪಸ್ಥಿತರಿರಲಿದ್ದು, ಗೌರವ ಅತಿಥಿಗಳಾಗಿ ಬಿಐಇಟಿ ನಿರ್ದೇಶಕರಾದ ಪ್ರೊ. ವೈ ವೃಷಭೇಂದ್ರಪ್ಪ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿ ಪರಿಷತ್ತಿನ ಸಲಹೆಗಾರರು, ಸಂಚಾಲಕರು, ಪದಾಧಿಕಾರಿಗಳು ಉಪಸ್ಥಿತರಿರಲಿದ್ದಾರೆ. ಸಾಂಪ್ರದಾಯಿಕ ದಿನದ ಅಂಗವಾಗಿ ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಸ್ಥಳೀಯ ವೇಷಭೂಷಣ ಧರಿಸುವರು.

# ಜಗಳೂರು: ರಾಜ್ಯ ಹೆದ್ದಾರಿ ಒತ್ತುವರಿ ತೆರವು ಆರಂಭ

### ಸಾರ್ವಜನಿಕರ ಅನುಕೂಲಕ್ಕಾಗಿ ರಸ್ತೆ ಅಗಲೀಕರಣ ಅನಿವಾರ್ಯ: ಶಾಸಕ ಬಿ. ದೇವೇಂದ್ರಪ್ಪ



**ಜಗಳೂರು:** ಪಟ್ಟಣದಲ್ಲಿ ಹಾದು ಹೋಗಿರುವ ರಾಜ್ಯ ಹೆದ್ದಾರಿಯಲ್ಲಿ ವಾಹನ ದಟ್ಟಣೆ ಹೆಚ್ಚಾಗಿರುವುದರಿಂದ ಮತ್ತು ಸಾರ್ವಜನಿಕರ ಅನುಕೂಲಕ್ಕಾಗಿ ರಸ್ತೆ ಅಗಲೀಕರಣ ಮಾಡುವುದು ಅನಿವಾರ್ಯವಾಗಿದೆ. ಈ ಕಾರ್ಯ–ಕ್ಕೆ ಪ್ರತಿಯೊಬ್ಬರೂ ಸಹಕಾರ ನೀಡಬೇಕು ಎಂದು ಶಾಸಕ ಬಿ. ದೇವೇಂದ್ರಪ್ಪ ಮನವಿ ಮಾಡಿದರು.

ಪಟ್ಟಣದ ಎನ್‌ಎಂಸಿ ಹೋಟೆಲ್ ಮುಂಭಾಗದಲ್ಲಿ ಸರ್ಕಾರಿ ಜಾಗ ಒತ್ತುವರಿ ಮಾಡಿಕೊಂಡಿರುವ ಕಟ್ಟಡಗಳ ತೆರವು ಕಾರ್ಯಾಚರಣೆ ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು.

ರಸ್ತೆ ಕಿರಿದಾಗಿರುವುದರಿಂದ ಪ್ರತಿನಿತ್ಯ ಸಾವಿರಾರು ವಾಹನಗಳ ಸಂಚಾರದ ದಟ್ಟಣೆ ಅಧಿಕವಾಗಿ ಅಪಘಾತಗಳು ಸಂಭವಿಸಿ ಕೆಲವು ಜೀವಗಳು ಸಹ ಹೋಗಿವೆ. ಈ ಹಿನ್ನೆಲೆಯಲ್ಲಿ, ಪ್ರಥಮ ಹಂತದಲ್ಲಿ ಸರ್ಕಾರಿ ಜಾಗವನ್ನು ಒತ್ತುವರಿ ಮಾಡಿಕೊಂಡಿರುವ ಕಟ್ಟಡ ಮಾಲೀಕರು ಸ್ವಯಂಪ್ರೇರಿತವಾಗಿ ತೆರವುಗೊಳಿಸಬೇಕೆಂದು ಇಲಾಖೆಯಿಂದ ಹಲವಾರು ಬಾರಿ ನೋಟಿಸ್ ನೀಡಲಾಗಿತ್ತು. ಆದ–ರೆ, ಮಾಲೀಕರು ನಿರ್ಲಕ್ಷ್ಯ ವಹಿಸಿದ ಕಾರಣ, ಸಹಾಯಕ ಆಯುಕ್ತರ ನೇತೃತ್ವದಲ್ಲಿ ತೆರವು ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಪ್ರತಿಯೊಬ್ಬರೂ ಸಹಕಾರ ನೀಡಬೇಕೆಂದು ಅವರು ಮನವಿ ಮಾಡಿದರು.

ಉಪವಿಭಾಗಾಧಿಕಾರಿ ಸಂತೋಷ್ ಕುಮಾರ್ ಮಾತನಾಡಿ, ಇದು ಮಲ್ಪೆ–ಮೊಳಕಾಲ್ಮುರು ರಾಜ್ಯ ಹೆದ್ದಾರಿಯಾಗಿರುವುದರಿಂದ ರಸ್ತೆ ಅಗಲೀಕರಣ ಅನಿವಾರ್ಯವಾಗಿದೆ. ಸರ್ಕಾರಿ ಜಾಗವನ್ನು ಒತ್ತುವರಿ ಮಾಡಿಕೊಂಡಿರುವ 134 ಕಟ್ಟಡ ಮಾಲೀಕರಿಗೆ ಈಗಾಗಲೇ ಹಲವು ಬಾರಿ ನೋಟಿಸ್ ಜಾರಿ ಮಾಡಿ ಗಡುವು ನೀಡಿದರೂ ತೆರವುಗೊಳಿಸಿಲ್ಲ. ಹಾಗಾಗಿ ಇಲಾಖೆಯಿಂದ ಕಾರ್ಯಾಚರಣೆ ನಡೆಸಲಾಗುತ್ತಿದೆ. ನಿಮ್ಮೆಲ್ಲರ ಸಹಕಾರ ಮುಖ್ಯವಾಗಿದ್ದು, ಮುಂದಿನ ದಿನಗಳಲ್ಲಿ ಪರಿಹಾರ ನೀಡಿ ರಸ್ತೆಯನ್ನು 69 ಅಡಿಗಳಿಗೆ ವಿಸ್ತರಣೆ ಮಾಡಲಾಗುವುದು ಎಂದು ಹೇಳಿದರು.

# ಕೊ ಕೋಲಾ ವಿರುದ್ಧ 14 ವರ್ಷ ಹೋರಾಡಿದ ಫರ್ನಾಂಡಿಸ್ ಬಂಟ

ಜಾರ್ಜ್ ಫರ್ನಾಂಡಿಸ್ ಅವರು ಕೋಕೋ ಕೋಲದ ಕಟು ವಿರೋಧಿಯಾಗಿದ್ದರು. ಅದನ್ನು ಭಾರತದಿಂದ ಓಡಿಸಬೇಕೆಂದು ಪಣ ತೊಟ್ಟವರು. ಇದಕ್ಕಾಗಿ ಜನತಾ ಪಕ್ಷದ ಆಳ್ವಿಕೆಯ ಕಾಲದಲ್ಲಿ '77' ಎಂಬ ಹೆಸರಿನ ದೇಶೀಯ ತಂಪುಪಾನೀಯವನ್ನು 1977ರಲ್ಲಿ ಮಾರುಕಟ್ಟೆಗೆ ಬಿಟ್ಟರು.

ಜಾರ್ಜ್ ಅವರ ಸೈದ್ಧಾಂತಿಕ ಗರಡಿಯಲ್ಲಿಯೇ ಪಳಗಿದ್ದ ಹೆಗ್ಡೆ ಕೋಕೋ ಕೋಲ ವಿರುದ್ದದ ಹೋರಾಟವನ್ನು ಮುಂದುವರಿಸಿದ್ದರು. ಅವರು ಪ್ರತಿದಿನ ಬೆಳಿಗ್ಗೆ ಜಂತರ್ ಮಂತರ್ ಗೆ ಹೋಗಿ ಕೋಕೋ ಕೋಲ ವಿರುದ್ದ ಘೋಷಣೆ ಕೂಗುತ್ತಿದ್ದರು. ಅಷ್ಟರಲ್ಲಿ ಪೊಲೀಸರು ಬಂದು ಅವರನ್ನು ಬಂಧಿಸಿ ಒಂದು ಗಂಟೆ ನಂತರ ಬಿಡುಗಡೆಗೊಳಿಸುತ್ತಿದ್ದರು.

ಈ ಪ್ರತಿಭಟನೆಯನ್ನು ಒಂದೆರಡು ದಿನ ಅಲ್ಲ, ಹದಿನಾಲ್ಕು ವರ್ಷ (1994–2008) ನಿರಂತರ ಮಾಡಿದ್ದರು. ಇದು ಲಿಮ್ಕಾ ಬುಕ್ ರೆಕಾರ್ಡ್ ಸೇರಬೇಕಾಗಿತ್ತು, ಹೆಗ್ಡೆ ಆಸಕ್ತಿ ತೋರಿಸಿರಲಿಲ್ಲ. ಜಾರ್ಜ್ ಮತ್ತು ನಿತೀಶ್ ಪರಸ್ಪರ ದೂರವಾದಾಗ ಹೆಗ್ಡೆ ಜಾರ್ಜ್ ಬಳಿಯೇ ಉಳಿದಿದ್ದರು.

ಜಾರ್ಜ್ ಅವರ ಮಾನಸ ಪುತ್ರನೇ ಆಗಿದ್ದ ಹೆಗ್ಡೆ ಅವರು ಜಾರ್ಜ್ ಆರೋಗ್ಯಸ್ಥಿತಿ ಕೆಟ್ಟು, ನೆನಪಿನಶಕ್ತಿ ಕಳೆದುಕೊಂಡ ನಂತರ ಅನಿವಾರ್ಯವಾಗಿ ( ಜಾರ್ಜ್ ಪತ್ನಿಯಿಂದಾಗಿ) ದೂರವಾಗಬೇಕಾಯಿತು.


ಅದರ ನಂತರ ನಿತೀಶ್ ಹೆಗ್ಡೆಯವರನ್ನು ಬಿಹಾರಕ್ಕೆ ಕರೆಸಿಕೊಂಡಿದ್ದರು, ಕೊನೆಗೆ ರಾಜ್ಯಸಭಾ ಸದಸ್ಯರನ್ನಾಗಿಯೂ ಮಾಡಿದ್ದರು.

ಸಮಾಜವಾದ ಸಿದ್ಧಾಂತಕ್ಕೆ ತಮ್ಮನ್ನು ಅರ್ಪಿಸಿಕೊಂಡಿರುವ ಹೆಗ್ಡೆ ಕುಟುಂಬದಿಂದ ದೂರವೇ ಉಳಿದಿದ್ದರು. ಅವರು ಉಡುಪಿ ಜಿಲ್ಲೆಯ ಕಾಪುವಿನ ಜಮೀನ್ದಾರಿ ಕುಟುಂಬಕ್ಕೆ ಸೇರಿದವರು. ಇವರ ಅಜ್ಜ ಮುದ್ದಣ್ಣ ಶೆಟ್ಟಿಯವರು ಕಾಪುವಿನಲ್ಲಿ ಪ್ರಾರಂಭಿಸಿದ್ದ ಕೆನರಾ ನರ್ಸರಿಗೆ ಈಗ 110 ವರ್ಷ. ಅವಿವಾಹಿತರಾಗಿರುವ ಹೆಗ್ಡೆ ವಯಸ್ಸಾಗಿರುವ ತಾಯಿಯನ್ನು ಕಾಣಲು ಇತ್ತೀಚೆಗೆ ಆಗಾಗ ಊರಿಗೆ ಬರುತ್ತಿದ್ದಾರೆ.

ಒಂದು ಕಾಲದಲ್ಲಿ ಚಾಕಲೇಟ್ ಹೀರೋನಂತಿದ್ದ ಹೆಗ್ಡೆ ಅವರ ತಲೆ ಮೇಲಿನ ಕೂದಲು ಈಗ ತೆಳ್ಳಗಾಗಿದೆ. ಕೆಲವು ವರ್ಷಗಳ ಹಿಂದೆ ಗಯಾದ ಕಾಡಲ್ಲಿ ಎರಗಿಬಂದ ಜೇನುನೊಣಗಳ ದಾಳಿಯಿಂದಾಗಿ ತಮ್ಮ ಎಡ ಕಣ್ಣಿನ ದೃಷ್ಟಿ ಕಳೆದುಕೊಂಡಿದ್ದಾರೆ.

ಆದರೆ ಅವರು ತಮ್ಮ ಮಾನವೀಯ ದೃಷ್ಟಿಯನ್ನು ಕಳೆದುಕೊಂಡಿಲ್ಲ, ಅವರ ಸೈದ್ಧಾಂತಿಕ ಬದ್ಧತೆ–ಯೂ ತೆಳ್ಳಗಾಗಿಲ್ಲ.

ಒಬ್ಬ ಅಪರೂಪದ ನಾಯಕ!



–ಕೆ ರಾಘವ ಶರ್ಮ

## ರಾಶಿ ಭವಿಷ್ಯ

### ಮೇಷ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ನೀವು ಪಾರ್ಟಿ ನೀಡಲು ಯೋಜಿಸುತ್ತಿದ್ದಲ್ಲಿ ನಿಮ್ಮ ಎಲ್ಲಾ ಒಳ್ಳೆಯ ಸ್ನೇಹಿತರನ್ನು ಆಮಂತ್ರಿಸಿ ನಿಮ್ಮನ್ನು ಅಸ್ತುಷ್ಟಗೊಳಿಸುವ ಬಹಳಷ್ಟು ಜನರಿರುತ್ತಾರೆ. ಯಾರಾದರೂ ನಿಮ್ಮನ್ನು ಶ್ಲಾಘಿಸಬಹುದು.

### ವೃಷಭ ರಾಶಿ

ಹತಾಶೆಯ ಭಾವನೆ ನಿಮ್ಮನ್ನುಅವರಿಸಲು ಬಿಡಬೇಡಿ. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ. ಸರೋವರದಲ್ಲಿನ ಸೊಗಸಾದ ಮೀನನ್ನು ಸಂಧಿಸುವ ಅವಕಾಶಗಳು ಸಾಧ್ಯತೆಗಳು ಇಂದು ಹೆಚ್ಚಿವೆ. ನೀವು ಕೆಲಸದಲ್ಲಿ ಇಂದು ಒಂದು ಒಳ್ಳೆಯ ಸುದ್ದಿ ಪಡೆಯಬಹುದು.

### ಮಿಥುನ ರಾಶಿ

ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಸರಿಯಾದ ಸಂಭಾಷಣೆ ಮತ್ತು ಸಹಕಾರ ಸಂಗಾತಿಯ ಜೊತೆಗಿನ ಸಂಬಂಧವನ್ನು ಉತ್ತಮಗೊಳಿಸುತ್ತದೆ. ಪ್ರಣಯ ನಿಮ್ಮ ಹೃದಯವನ್ನು ಆಳುತ್ತದೆ. ಹಿರಿಯರಿಂದ ಬೆಂಬಲ ಮತ್ತು ಮೆಚ್ಚುಗೆ ನಿಮ್ಮ ಸ್ಥೈರ್ಯ ಮತ್ತು ವಿಶ್ವಾಸವನ್ನು ಹೆಚ್ಚಿಸುತ್ತದೆ.

### ಕರ್ಕ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ಮನೆಯ ಕೆಲಸ ನಿಮ್ಮನ್ನು ಯಾವಾಗಲೂ ವ್ಯಸ್ತವಾಗಿರಿಸುತ್ತದೆ. ನಾಳೆ ಬಹಳ ತಡವಾಗುವುದರಿಂದ ನೀವು ನಿಮ್ಮ ಪ್ರಿಯತಮೆಗೆ ನಿಮ್ಮ ಸಂದೇಶವನ್ನು ಕೂಡಲೇ ತಿಳಿಸಬೇಕು. ನೀವು ಒಂದು ದಿನದ ತಜೆಯ ಮೇಲೆ ಹೋಗುತ್ತಿದ್ದಲ್ಲಿ ಚಂತಿಸಬೇಡಿ – ವಿಷಯಗಳನ್ನು ನೀವಿಲ್ಲದಿರುವಾಗ ಚೆನ್ನಾಗಿಯೇ ಇರುತ್ತವೆ

### ಸಿಂಹ ರಾಶಿ

ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ

### ಕನ್ಯಾ ರಾಶಿ

ಒಬ್ಬ ಆಧ್ಯಾತ್ಮಿಕ ವ್ಯಕ್ತಿ ಆಶೀರ್ವಾದ ಮಾಡುತ್ತಾರೆ ಮತ್ತು ಮನಸ್ಸಿನ ಶಾಂತಿ ತರುತ್ತಾರೆ. ಮನೆಯ ಅಗತ್ಯಗಳನ್ನು ನೋಡುತ್ತಾ, ಇಂದು ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು. ಕುಟುಂಬದ ಸದಸ್ಯರ ಉತ್ತಮ ಸಲಹೆ ಇಂದು ನಿಮಗೆ ಲಾಭ ತರುತ್ತದೆ. ಮನ್ಮಥನು ನಿಮ್ಮ ಜೀವನದಲ್ಲಿ ಪ್ರೀತಿಯ ಮಳೆ ಸುರಿಸುತ್ತ ನಿಮ್ಮೆಡೆಗೆ ನುಗ್ಗುತ್ತಿದ್ದಾನೆ.

### ತುಲಾ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ಸಾಮಾಜಿಕ ಕಾರ್ಯಗಳಿಗೆ ಹಾಜರಾಗಲು ಅವಕಾಶಗಳಿರಬಹುದು ಹಾಗೂ ಇದು ನಿಮ್ಮನ್ನು ಪ್ರಭಾವಿ ವ್ಯಕ್ತಿಗಳ ಜೊತೆ ನಿಕಟ ಸಂಪರ್ಕ ಹೊಂದುವಂತೆ ಮಾಡಬಹುದು.

### ವೃಶ್ಚಿಕ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ನೀವು ಕಮಿಷನ್‌ಗಳಿಂದ ಡಿವಿಡೆಂಡ್‌ಗಳಿಂದ– ಅಥವಾ ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ. ಕುಟುಂಬದಲ್ಲಿ ನಿಮ್ಮ ಸರ್ವಾಧಿಕಾರಿ ಧೋರಣೆಯನ್ನು ಬದಲಾಯಿಸಿಕೊಳ್ಳಲು ಇದು ಒಳ್ಳೆಯ ಸಮಯ. ಜೀವನದ ಏಳುಬೀಳುಗಳನ್ನು ಹಂಚಿಕೊಳ್ಳಲು ಅವರ ಸಹಕಾರದೊಂದಿಗೆ ಕೆಲಸ ಮಾಡಿ.

### ಧನು ರಾಶಿ

ತಂದೆಯು ನಿಮ್ಮನ್ನು ಆಸ್ತಿಯ ಉತ್ತರಾಧಿಕಾರಿತ್ವದಿಂದ ತಪ್ಪಿಸಬಹುದು. ಆದರೆ ಧೃತಿಗೆಡಬೇಡಿ. ಅಭ್ಯುದಯ ಮನಸ್ಸಿಗೆ ಮುದ ನೀಡಿದರೆ ಅಭಾವ ಅದನ್ನು ಬಲಗೊಳಿಸುತ್ತದೆಂದು ನೆನಪಿಡಿ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೆಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ಇತರರಿಗೆ ಪ್ರತಿಫಲಗಳು ತರುವ ನಿಮ್ಮ ಸಾಮರ್ಥ್ಯ ಪ್ರತಿಫಲ ತರುತ್ತದೆ. ಪ್ರೇಮಪ್ರಯಾಣ ಮಧುರವಾಗಿದ್ದರೂ ಅಲ್ಪಾವಧಿಯದ್ದಾಗಿರುತ್ತದೆ.

### ಮಕರ ರಾಶಿ

ನಿಮ್ಮನ್ನು ನೀವೇ ನೋಡಿಕೊಳ್ಳುವ ಬಯಕೆಗೆ ಇತರರ ಅಗತ್ಯಗಳು ಕಡಿವಾಣ ಹಾಕುತ್ತವೆ. ನಿಮ್ಮ ಭಾವನೆಗಳನ್ನು ತಡೆಹಿಡಿಯಬೇಡಿ ಹಾಗೂ ವಿಶ್ರಾಂತಿ ಪಡೆಯುವ ಸಲುವಾಗಿ ನೀವು ಇಷ್ಟಪಡುವುದನ್ನೇನಾದರೂ ಮಾಡಿ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು.

### ಕುಂಭ ರಾಶಿ

ನಿಮ್ಮ ಜಗಳಗಂಟ ನಡುವಳಿಕೆ ನಿಮ್ಮ ಶತ್ರುಗಳ ಪಟ್ಟಿಯನ್ನು ಸುಧೀರ್ಘಗೊಳಿಸುತ್ತದೆ. ನೀವು ನಂತರ ಪಶ್ಚಾತ್ತಾಪಪಡುವಷ್ಟು ಕೆಟ್ಟದಾಗಿ ನೀವೇನಾದರೂ ಮಾಡುವಷ್ಟು ನೀವು ಕೋಪಗೊಳ್ಳುವಂತೆ ಮಾಡಲು ಯಾರಿಗೂ ಅವಕಾಶ ನೀಡಬೇಡಿ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ.

### ಮೀನ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು.

# ಶಿಕ್ಷಣದ ಜೊತೆಗೆ ಸಂಸ್ಕಾರ ಕಲಿತಾಗ ಭವಿಷ್ಯ ಉಜ್ವಲ



**ಚಿಕ್ಕಮಗಳೂರು:** ವಿದ್ಯಾರ್ಥಿ ದೆಸೆಯಲ್ಲಿಯೇ ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ಕಲಿತಾಗ ಭವಿಷ್ಯ ಉಜ್ವಲವಾಗುತ್ತದೆ ಎಂದು ಚರ್ಮರೋಗ ತಜ್ಞೆ ಹಾಗೂ ಸಹ್ಯಾದ್ರಿ ಪ್ಯಾರಾಮೆಡಿಕಲ್ ಸಂಸ್ಥೆ ನಿರ್ದೇಶಕಿ ಡಾ. ಗೆಲೀನಿಯಾ ಅಭಿಪ್ರಾಯಿಸಿದರು.

ಇತ್ತೀಚೆಗೆ ಸಹ್ಯಾದ್ರಿ ಪ್ಯಾರಾಮೆಡಿಕಲ್‌ನ ಪ್ಯಾರಾ ವಿದ್ಯಾರ್ಥಿಗಳಿಗೆ ಏರ್ಪಡಿಸಲಾಗಿದ್ದ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವದಲ್ಲಿ ಅತೀ ಹೆಚ್ಚು ಬೇಡಿಕೆ ಇರುವ ಪ್ಯಾರಾಮೆಡಿಕಲ್ ಶಿಕ್ಷಣ ಪಡೆದ ವಿದ್ಯಾರ್ಥಿಗಳಿಗೆ ಶೆ.90 ರಷ್ಟು ಉದ್ಯೋಗ ದೊರೆಯುತ್ತಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು ನಿಷ್ಠೆಯಿಂದ ಕಲಿಯುವ ಜೊತೆಗೆ ತಮ್ಮ ಸ್ವಯಂ ಬುದ್ದಿಮತ್ತೆಯಿಂದ ನೈಪುಣ್ಯತೆಯನ್ನು ಬಳಸಿಕೊಂಡು ಉದ್ಯೋಗವನ್ನು ಪಡೆದು ಸಮಾಜಕ್ಕೆ ಮಾದರಿಯಾಗಿ ಎಂದರು.

ಕಾಲೇಜಿನಲ್ಲಿ ನುರಿತ ಉಪನ್ಯಾಸಕರು, ಪ್ರಯೋಗಾಲಯ, ನುರಿತ ತಜ್ಞರನ್ನು ಹೊಂದಿದ್ದು, ಜಿಲ್ಲೆಯಲ್ಲಿ ಒಳ್ಳೆಯ ಗುಣಮಟ್ಟದ ಶಿಕ್ಷಣ ನೀಡುವ ಕಾಲೇಜು ಎಂದು ಪ್ರಸಿದ್ದಿಯಾಗಿದೆ. ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆನೀಡಿದರು.

ವಿದ್ಯಾರ್ಥಿ ದೆಸೆಯಲ್ಲಿ ದುಶ್ಚಟಗಳಿಗೆ ದಾಸರಾಗದೆ ಪೋಷಕರು ತಮ್ಮ ಮೇಲೆ ಭರವಸೆ ಇಟ್ಟು ಕಾಲೇಜಿಗೆ ಕಳುಹಿಸಿರುವುದನ್ನು ಮನಗಂಡು ಅವರ ಆಸೆಯಂತೆ ಶಿಕ್ಷಣ ಪಡೆದು ಸಮಾಜಕ್ಕೆ, ಉಪನ್ಯಾಸಕರಿಗೆ, ಕಾಲೇಜಿಗೆ ಹೆಸರು ತನ್ನಿ ಎಂದು ಹೇಳಿದರು.

ಸಂಸ್ಥೆಯ ಕಾರ್ಯದರ್ಶಿ ನಳಿನಾ ಡಿಸಾ ಮಾತನಾಡಿ, ಮೂರು ವರ್ಷಗಳ ಅವಧಿಯಲ್ಲಿ ಕಲಿತ ವಿಧ್ಯೆಯನ್ನು ವಿಧ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಂಡು ಶಿಸ್ತುಬದ್ಧ ಜೀವನ ನಡೆಸಿದಾಗ ಮೌಲ್ಯ ಬೆಳೆಯುತ್ತದೆ ಎಂದು ಹೇಳಿದರು.

ಕಾಲೇಜಿನಲ್ಲಿ ಕೇವಲ ರ್‍ಯಾಂಕ್ ಪಡೆಯುವುದು ಮುಖ್ಯವಲ್ಲ, ರೋಗಿಗಳಿಗೆ ಉತ್ತಮ ಸ್ಪಂದನೆ ನೀಡಿದಾಗ ಮಾತ್ರ ಬದುಕು ಅರ್ಥಪೂರ್ಣವಾಗುತ್ತದೆ. ಗುರುಹಿರಿಯರನ್ನು ಗೌರವಿಸಿ ಎಂದು ಹೇಳಿದರು.

ಕಾಲೇಜಿನಲ್ಲಿ ಏರ್ಪಡಿಸಿರುವ ಕ್ರೀಡಾಕೂಟಗಳು ಆತ್ಮವಿಶ್ವಾಸವನ್ನು ಬೆಳೆಸುವ ಜೊತೆಗೆ ಕ್ರೀಡಾಭಿಮಾನ ಬೆಳೆಯಲು ಸಹಕಾರಿಯಾಗುತ್ತದೆ. ಗ್ರಾಮೀಣ ವಿದ್ಯಾರ್ಥಿಗಳಿಗೆ ಇಂಗ್ಲಿಷ್ ಭಾಷೆಯಲ್ಲಿ ತರಬೇತಿ ನೀಡುತ್ತಿದ್ದು, ಜಿಲ್ಲೆಗೆ ಉತ್ತಮ ಫಲಿತಾಂಶ ಬಂದಿದೆ ಎಂದು ಪ್ರಶಂಸೆ ವ್ಯಕ್ತಪಡಿದರು.

ಇದೇ ಸಂದರ್ಭದಲ್ಲಿ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿದರು.

ಉಪಪ್ರಾಂಶುಪಾಲೆ ವಜೀಯ ಶಬನಮ್ ಸ್ವಾಗತಿಸಿ ನಿರೂಪಿಸಿದರು. ಕೊನೆಯಲ್ಲಿ ವಿದ್ಯಾರ್ಥಿಗಳು ವಂದಿಸಿದರು.

## ಎಸ್ಸಿ/ಎಸ್ಟಿ ಅಧ್ಯಾಪಕರ ಸಾಮಾಜಿಕ, ನೈತಿಕ, ವಾಸ್ತವಿಕ ಸೇರಿದಂತೆ ಸರ್ವಾಂಗೀಣ ಉನ್ನತಿಗಾಗಿ ಸಂಘ ಸ್ಥಾಪನೆ: ಗೌರವಾಧ್ಯಕ್ಷ ಡಾ.ಎ.ಬಿ.ರಾಮಚಂದ್ರಪ್ಪ

**ದಾವಣಗೆರೆ:** ಸಾಮಾಜಿಕ, ಸಾಂಸ್ಕೃತಿಕ, ಶೈಕ್ಷಣಿಕ ಜವಾಬ್ದಾರಿಗಳನ್ನು ನಿರ್ವಹಿಸುವ ಜೊತೆಗೆ ಸಮುದಾಯಗಳ ಅಧ್ಯಾಪಕರ ಉನ್ನತಿಗಾಗಿ ನೂತನವಾಗಿ ಕರ್ನಾಟಕ ರಾಜ್ಯ ಅನುದಾನಿತ ಪದವಿ ಕಾಲೇಜುಗಳ ಎಸ್ಸಿ/ಎಸ್ಟಿ ಅಧ್ಯಾಪಕರ ಸಂಘವನ್ನು ಅಸ್ತಿತ್ವಕ್ಕೆ ತರಲಾಗಿದೆ ಎಂದು ಸಂಘದ ಗೌರವಾಧ್ಯಕ್ಷ ಡಾ.ಎ.ಬಿ.ರಾಮಚಂದ್ರಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ ಮತ್ತು ಅನುದಾನಿತ ಕಾಲೇಜು ಆಡಳಿತ ಮಂಡಳಿಯವರು ದಲಿತ ಸಮುದಾಯಗಳ ನೌಕರರ ಮೇಲೆ ಮಲತಾಯಿ ಧೋರಣೆ ಅನುಸರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ನೌಕರರಿಗೆ ನ್ಯಾಯ ಪಡೆಯುವ ಉದ್ದೇಶದಿಂದ ನೂತನ ಸಂಘವನ್ನು ಸ್ಥಾಪಿಸಲಾಗಿದೆ. ಎಸ್ಸಿ/ಎಸ್ಟಿ ಅಧ್ಯಾಪಕರ ಸಾಮಾಜಿಕ, ನೈತಿಕ, ವಾಸ್ತವಿಕ ಸೇರಿದಂತೆ ಸರ್ವಾಂಗೀಣ ಉನ್ನತಿಗೆ ಶ್ರಮಿಸುವುದು, ಪ್ರತಿಯೊಬ್ಬ ನೌಕರನ ಸಾಮಾನ್ಯ ಹಿತಾಸಕ್ತಿ ಕಾಪಾಡುವುದು, ಕಾಲೇಜು ಆಡಳಿತ ಮಂಡಳಿಯಿಂದ ನೌಕರರ ವರ್ಗಕ್ಕೆ ಆಗವ ಅನ್ಯಾಯ, ಜಾತಿ ತಾರತಮ್ಯವನ್ನು ಸರ್ಕಾರದ ಗಮನಕ್ಕೆ ತರುವುದು ಸಂಘದ ಉದ್ದೇಶವಾಗಿದೆ ಎಂದರು.

ಮುಂಬರುವ ದಿನಗಳಲ್ಲಿ ಸಂಘದಿಂದ ಕಾಲೇಜು ಆಡಳಿತ ಮಂಡಳಿಗಳು ಕಾನೂನು ಪಾಲಿಸುವಂತೆ ಮನವಿ ಮಾಡಲಾಗುವುದು. ನೌಕರರ ಸಮಸ್ಯೆ ಪರಿಹರಿಸಲು ಸಂವಿಧಾನಾತ್ಮಕವಾಗಿ ಪ್ರಯತ್ನಿಸಲಾಗುವುದು. ಸಮಾಜ ಮತ್ತು ಸರ್ಕಾರದೊಂದಿಗೆ ಸೌಹಾರ್ದ ಬಾಂಧವ್ಯ ವೃದ್ಧಿಯಾಗುವಂತೆ ಕೆಲಸ ಮಾಡಲಾಗುವುದು. ಶಿಕ್ಷಣ ವಿಷಯಕ್ಕೆ ಸಂಬಂಧಿಸಿದ ಪತ್ರಿಕೆ, ನಿಯತಕಾಲಿಕಾ ಲೇಖನ, ಪ್ರಬಂಧ, ವರದಿ, ಜರ್ನಲ್ಸ್, ಸಂಶೋಧನ ಬರವಣಿಗೆಗಳಿಗೆ ಉತ್ತೇಜನ ನೀಡಲಾಗುವುದು ಎಂದರು.

ಅಧ್ಯಾಪಕರಿಗೆ ಸರ್ಕಾರದಿಂದ ಸಿಗಲೇಬೇಕಾದ ಬಡ್ತಿ, ಪಿಂಚಣಿ, ವೇತನ, ಭತ್ಯೆ ಇನ್ನಿತರೆ ವಿಚಾರಗಳ ಕುರಿತಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು. ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ವಾಸಿಸುವ ಎಸ್ಸಿ/ಎಸ್ಟಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ದೊರಕಿಸಲು ಪೂರ್ವ ಪ್ರಾಥಮಿಕದಿಂದ ಉನ್ನತ ಶಿಕ್ಷಣದವರೆಗೆ ಶಾಲಾ-ಕಾಲೇಜು ಆರಂಭಿಸುವ ಯೋಜನೆಯೂ ಇದೆ ಎಂದು ಅವರು ವಿವರಿಸಿದರು.

ಸಂಘದ ಅಧ್ಯಕ್ಷ ಪ್ರೊ.ಬಸವರಾಜ ಟಿ.ಬೆಳಗಟ್ಟಿ, ಮುಖಂಡರಾದ ಡಾ.ಪರಮೇಶ್ವರ ನಾಯ್ಕ, ಡಾ.ಮಂಜಪ್ಪ, ಡಾ.ರಂಗಸ್ವಾಮಿ ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

### ಕಲಾಮಂದಿರದಲ್ಲಿ ನಡೆದ ಜಿಲ್ಲಾಮಟ್ಟದ ಯುವಜನೋತ್ಸವ

## ರೈತರನ್ನು ಗೌರವಿಸಿದಾಗ ಜೀವನಕ್ಕೆ ನಿಜ ಅರ್ಥ



**ಚಿಕ್ಕಮಗಳೂರು:** ರೈತಗೀತೆಯೊಂದಿಗೆ ಸಮಾಜದಲ್ಲಿ ಪ್ರತಿಯೊಬ್ಬರೂಅನ್ನದಾತರ ೈತನನ್ನು ಗೌರವಿಸಿದಾಗ ಜೀವನಕ್ಕೆ ನಿಜ ಅರ್ಥ ಬರುತ್ತದೆಎಂದು ನಗರಸಭಾಧ್ಯಕ್ಷೆ ಶೀಲಾದಿನೇಶ್ ಹೇಳಿದರು.

ಅವರುಇಂದು ಕುವೆಂಪು ಕಲಾಮಂದಿರದಲ್ಲಿ ಜಿಲ್ಲಾಡಳಿತ, ಜಿ.ಪಂ, ಯುವ ಸಬಲೀಕರಣ ಮತ್ತುಕ್ರೀಡಾ ಇಲಾಖೆ, ಮೇರಾಯುವ ಭಾರತ್, ಜಿಲ್ಲಾಎನ್‌ಎಸ್‌ಎಸ್‌ಘಟಕ, ರಾಜ್ಯಯುವ ಸಂಘಗಳ ಒಕ್ಕೂಟ, ಕನ್ನಡಜಾನಪದ ಪರಿಷತ್, ಜಿಲ್ಲಾಘಟಕ ಮತ್ತು ಮಹಿಳಾ ಘಟಕ, ಕರ್ನಾಟಕಜಾನಪದ ಪರಿಷತ್ ಹಾಗೂ ಎಲ್ಲಾಯುವಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿಏರ್ಪಡಿಸಲಾಗಿದ್ದ ಜಿಲ್ಲಾ ಯುವಜನೋತ್ಸವ–2025–26 ರಕಾರ್ಯಕ್ರಮದಲ್ಲಿ ವಿಜೇತ ತಂಡಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು.

ಯುವಜನೋತ್ಸವದ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ವಿಜೇತರಾದವರು ಬೀಗದೆ ಸೋತವರು ಭಾಗದೆ ಸ್ಪರ್ಧಾ ಮನೋಭಾವದಿಂದ ಭಾಗವಹಿಸುವುದುಅಗತ್ಯ ಎಂದಅವರು, ವಿಜೇತ ತಂಡಗಳಿಗೆ ಬಹುಮಾನ ವಿತರಿಸಲು ಹೆಮ್ಮೆ ಎನಿಸುತ್ತಿದೆಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರಾಜ್ಯ ಪರಿಸರ ಮೌಲ್ಯಮಾಪನ ಪ್ರಾಧಿಕಾರದಅಧ್ಯಕ್ಷಎ.ಎನ್ ಮಹೇಶ್ ಮಾತನಾಡಿ, ಸಾವಿರಾರುಯುವಕರ ಸಾಮರ್ಥ್ಯ, ಪ್ರತಿಭೆಯನ್ನು ಬಡಿದೆಚ್ಚರಿಸಿ ಮುಖ್ಯ ವಾಹಿನಿಗೆ ತರಲು ಈ ಯುವಜನೋತ್ಸವ ಸಹಕಾರಿಯಾಗಲಿ ಎಂದು ಹೇಳಿದರು.

ಹಿಂದೆಯುವಜನ ಮೇಳ, ಯುವಜನೋತ್ಸವದ ಕಾರ್ಯಕ್ರಮಗಳು ಗಲಾಟೆ–ಗದ್ದಲ ಇಲ್ಲದೆಅಂತ್ಯವಾಗುತ್ತಿರಲಿಲ್ಲ. ಆದರೆ, ಇಂದು ನಡೆದಯುವಜನೋತ್ಸವಕಾಂರ್ಯಕ್ರಮಯಾವುದೇತೊಂದರೆ ಗಲಾಟೆಗಳಿಲ್ಲದೆ ಯಶಸ್ವಿಯಾಗಿ ಮುಗಿದಿರುವುದು ಸಾರ್ಥಕ್ಯ ಭಾವನೆಎಂದರು.ಈ ಸಂದರ್ಭದಲ್ಲಿಜಿಲ್ಲಾಗಾ್ಯರಂಟಿಯೋಜನೆ ಪ್ರಾಧಿಕಾರದಅಧ್ಯಕ್ಷ ಎಂ.ಸಿ ಶಿವಾನಂದಸ್ವಾಮಿ ಮಾತನಾಡಿದರು.

ಯುವಜನೋತ್ಸವಕಾರ್ಯಕ್ರಮದಲ್ಲಿ ನಡೆದ ನೃತ್ಯ ಪ್ರದರ್ಶನದಲ್ಲಿ ಪ್ರಥಮ ಸ್ಥಾನ ಜೈ ಭೀಮ್ ಕಲಾ ತಂಡ ಕೂದುವಳ್ಳಿ, ದ್ವಿತೀಯ ಸ್ಥಾನ ದುರ್ಗಾದೇವಿ ಕಲಾತಂಡ ಚಿಕ್ಕಮಗಳೂರು, ತೃತೀಯ ಸ್ಥಾನ ಜೆ.ಸಿ.ಬಿ.ಎಮ್ ಕಾಲೇಜುತಂಡ ಶೃಂಗೇರಿ, ಜನಪದಗೀತೆಯಲ್ಲಿ ಪ್ರಥಮ ಸ್ಥಾನ ಕೆ.ಪಿ ಪೂರ್ಣಚಂದ್ರ ತೇಜಸ್ವೀ ಜಾನಪದಕಲಾತಂಡ ಮೂಡಿಗೆರೆ, ದ್ವಿತೀಯ ಸ್ಥಾನ ಮಿತ್ರಜಾನಪದಕಲಾತಂಡ ಮೂಡಿಗೆರೆ, ತೃತೀಯ ಸ್ಥಾನ ಜನಮನಜಾನಪದಕಲಾತಂಡ, ವಿಜ್ಞಾನ ಪ್ರದರ್ಶನ ಪ್ರಥಮ ಸ್ಥಾನ ಡಿ ಎಕ್ಸ್‌ಪರ್ಟ್ಸ್ ಚಿಕ್ಕಮಗಳೂರು, ದ್ವಿತೀಯ ಸ್ಥಾನ ಜೂನಿಯರ್‌ಕಾಲೇಜುತಂಡ, ತೃತೀಯ ಸ್ಥಾನ ಟಿ.ಎಂ.ಎಸ್‌ಕಾಲೇಜುತಂಡ, ಕಥೆ ಬರವಣಿಗೆಯಲ್ಲಿ ಪ್ರಥಮ ಸ್ಥಾನ ಗಗನ.ಎಸ್. ದ್ವಿತೀಯ ಸ್ಥಾನ ತನ್ಮಯಿ ಪ್ರೇಮ್‌ಕುಮಾರ್‌ತೃತೀಯ ಸ್ಥಾನ ಕೆ.ಪಿ ಸಂಗೀತ, ಕವಿತೆ ಬರವಣಿಗೆಯಲ್ಲಿ ಪ್ರಥಮ ಸ್ಥಾನ ತನ್ಮಯಿ ಪ್ರೇಮ್‌ಕುಮಾರ್, ದ್ವಿತೀಯ ಲಕ್ಷ್ಮೀ ಎಂ.ಎಂ, ತೃತೀಯ ಸಂಜಯ್ ಕೆ, ಘೋಷಣೆ ಭಾಷಣ ಪ್ರಥಮ ವರುಣ್.ಡಿ.ಆರ್ಯ, ದ್ವಿತೀಯಆಲಿಯಾ, ತೃತೀಯ ಪೂಜಾ, ಚಿತ್ರಕಲೆಯಲ್ಲಿ ಪ್ರಥಮ ಸ್ಥಾನ ಸಂಜಯ್‌ಕೆ.ಎಸ್, ದ್ವಿತೀಯ ಸ್ಥಾನ ದೃತಿ, ತೃತೀಯ ಸ್ಥಾನ ಅಭಿಷೇಕ್‌ಎ.ಜಿ ಪ್ರಶಸ್ತಿಯನ್ನು ಪಡೆದಿದ್ದಾರೆ.

## ಜನತಾ ಬಜಾರ್ ನೂತನ ಆಡಳಿತ ಮಂಡಳಿ ಅಧ್ಯಕ್ಷರಾಗಿ ಶ್ರೀ ಮಲ್ಲೇದೇವರಪ್ಪ ಉಪಾಧ್ಯಕ್ಷರಾಗಿ ಎಚ್.ಬಿಉಮೇಶ್ ಅವಿರೋಧವಾಗಿ ಆಯ್ಕೆ



**ಚಿಕ್ಕಮಗಳೂರು:** ಚಿಕ್ಕಮಗಳೂರು ಜಿಲ್ಲಾಕೇಂದ್ರ ಸಹಕಾರ ಸಂಘಟನೆ ಮಾರಾಟ ಸಂಸ್ಥೆ ನಿಯಮಿತ ಮತ್ತುಜನತಾ ಬಜಾರ್‌ಇದರ ನೂತನ ಆಡಳಿತ ಮಂಡಳಿ ಅಧ್ಯಕ್ಷರಾಗಿ ಶ್ರೀ ಮಲ್ಲೇದೇವರಪ್ಪ ಮತ್ತುಉಪಾಧ್ಯಕ್ಷರಾಗಿಎಚ್.ಬಿಉಮೇಶ್‌ಅವಿರೋಧವಾಗಿ ಆಯ್ಕೆಯಾದರು.ನಿರ್ದೇಶಕರುಗಳಾದ ಎಸ್ಸಾರ್ ಲೋಕೇಶ್‌ಕೆ.ಎನ್, ಬೀರೇಗೌಡ ಎನ್.ಸಿ, ಶಂಕ್ರಮೂರ್ತಿ ನಂದನ್‌ಎಚ್.ಕೆ ಬಿ ಏನ್ ವಿಶ್ವನಾಥ್ ಮಂಜನಾಯಕ. ಮಲ್ಲೇಶಯ್ಯ. ಕಮಲಮ್ಮ. ಲೀಲಾವತಿಟಿ.ಕೆ,ಜಯರಾಜಅರಸ್ ಜಿ ಆರ್ ಪುಟ್ಟೇಗೌಡರವರಿಗೆವಿಧಾನ ಪರಿಷತ್ ಶಾಸಕರಾದಎಸ್.ಎಲ್ ಭೋಜೇಗೌಡರವರು ಹಾಗೂ ಹಾಸನ ಹಾಲು ಒಕ್ಕೂಟದ ನಿರ್ದೇಶಕರಾದಎಸ್.ಡಿ ಸೋನಾಲ್‌ರವರುಅಭಿನಂಧಿಸಿದರು.

## ಸಾಲಗಾರರಿಗೆ ಹೆದರಿ ರೈತ ಆತ್ಮಹತ್ಯೆ

**ದಾವಣಗೆರೆ:** ಸಾಲಬಾಧೆ ತಾಳಲಾರದೆ ರೈತನೊಬ್ಬ ಆತ್ಮಹತ್ಯೆ ಮಾಡಿಕೊಂಡ ಘಟನೆ ಮಂಗಳವಾರ ದಾವಣಗೆರೆ ತಾಲೂಕಿನ ಹೆಬ್ಬಾಳ ಬಡಾವಣೆ ಗ್ರಾಮದಲ್ಲಿ ನಡೆದಿದೆ.

ಶಿವರಾಜ ಜೆ. ಆತ್ಮಹತ್ಯೆ ಮಾಡಿಕೊಂಡ ರೈತ. ನಾಲ್ಕೈದು ವರ್ಷದಿಂದ ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ಸರಿಯಾಗಿ ಇಳುವರಿ ಬಂದಿರಲಿಲ್ಲ. ಇಳುವರಿ ಬಂದರೂ ಸರಿಯಾದ ಬೆಲೆ ಸಿಗದೆ ಶಿವರಾಜ ನಷ್ಟ ಅನುಭವಿಸಿದ್ದರು ಎನ್ನಲಾಗಿದೆ. ಸುಮಾರು 12 ರಿಂದ 15 ಲಕ್ಷ ರೂಪಾಯಿ ಸಾಲ ಮಾಡಿಕೊಂಡಿದ್ದ ಶಿವರಾಜ ಸಾಲಗಾರರಿಗೆ ಹೆದರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಈ ಬಗ್ಗೆ ದಾವಣಗೆರೆ ಗ್ರಾಮಾಂತರ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರಾಷ್ಟ್ರೀಯ ದತ್ತು ಮಾಸಾಚರಣೆ

**ದಾವಣಗೆರೆ:** ರಾಷ್ಟ್ರೀಯ ದತ್ತು ಮಾಸಾಚರಣೆ ನವೆಂಬರ್–2025ರ ಅಂಗವಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜೆ.ಎಚ್ ಪಟೇಲ್ ಬಡಾವಣೆ, ದಾವಣಗೆರೆ ಕಚೇರಿಯಿಂದ ದತ್ತು ಮಾಸಾಚರಣೆಯನ್ನು ವಿಶೇಷ ಚೇತನ ಮಕ್ಕಳ ದತ್ತು ಪ್ರಕ್ರಿಯೆ ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುವುದು.

ಕಾನೂನು ಬದ್ಧ ಮಕ್ಕಳ ದತ್ತು ಪ್ರಕ್ರಿಯೆ ಕುರಿತು ಹೆಚ್ಚಿನ ಮಾಹಿತಿಗಾಗಿ ಕಚೇರಿಯನ್ನು ಸಂಪರ್ಕಿಸಲು ತಿಳಿಸಿದ್ದು, ಅನಧಿಕೃತವಾಗಿ ಮಕ್ಕಳನ್ನು ಮಾರಾಟ ಮಾಡುವುದು, ಕೊಳ್ಳುವುದು ಅದಕ್ಕೆ ಮಧ್ಯವರ್ತಿಗಳಾಗಿ ಸಹಾಯ ಮಾಡುವುದು ಬಾಲನ್ಯಾಯ ಕಾಯ್ದೆಯನ್ವಯ ಐದು ವರ್ಷಗಳವರೆಗೆ ಜೈಲುವಾಸ ಮತ್ತು ಒಂದು ಲಕ್ಷ ರೂಗಳ ವರೆಗೆ ದಂಡ ವಿಧಿಸಬಹುದು.

ಇಂತಹ ಕೃತ್ಯದಲ್ಲಿ ಆಸ್ಪತ್ರೆಯ ವೈದ್ಯರು, ಸಿಬ್ಬಂದಿಗಳು ಭಾಗಿಯಾಗದಲ್ಲಿ ಶಿಕ್ಷೆ ಅವಧಿ 3 ವರ್ಷಗಳಿಗೆ ಕಡಿಮೆ ಇಲ್ಲದಂತೆ 7 ವರ್ಷಗಳವರೆಗೆ ಶಿಕ್ಷೆಯನ್ನು ವಿಧಿಸಲು ಅವಕಾಶವಿರುತ್ತದೆ. ಆದ್ದರಿಂದ ಅನಾಥ, ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳು ಕಂಡುಬಂದ ಕೂಡಲೇ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ದಾವಣಗೆರೆ ಕಚೇರಿಗೆ ಅಥವಾ ವಿಶೇಷ ದತ್ತು ಸಂಸ್ಥೆ ಅಮೂಲ್ಯ(ಜಿ) ಘಟಕ–1 ಮತ್ತು ಘಟಕ–2, ಲೋಕಿಕೆರೆ ರಸ್ತೆ, ರಾಮನಗರ, ದಾವಣಗೆರೆ ದೂರವಾಣಿ ಸಂಖ್ಯೆ:–08192–262990, 222701 ಅಥವಾ 24*7 ಉಚಿತ ಮಕ್ಕಳ ಸಹಾಯವಾಣಿ 1098ಕ್ಕೆ ಕರೆ ಮಾಡಿ ತಿಳಿಸಲು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ ತಿಳಿಸಿದ್ದಾರೆ.

## ಎಂಬಿಎ ಸೀಟುಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ:** ದಾವಣಗೆರೆ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ಹಾಗೂ ಸಂಲಗ್ನಗೊಂಡ ಸ್ನಾತಕೋತ್ತರ ಕಾಲೇಜಿನಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿಗೆ ಪಿಜಿ, ಸಿಇಟಿ ಮೂಲಕ ಭರ್ತಿಯಾಗದೆ ಖಾಲಿ ಉಳಿಯಲಿರುವ ಎಂಬಿಎ ಸೀಟುಗಳನ್ನು ಭರ್ತಿ ಮಾಡಿಕೊಳ್ಳಲು ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ನವಂಬರ್ 12 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್ ತಿತಿತಿ.ಜಚಿತಚಿಟಿರಜಡಿಜಣಟುತಜಧಿುಣಥಿ.ಚಿಛಿ.ಟಿ ವೀಕ್ಷಿಸಬಹುದೆಂದು ವಿಶ್ವವಿದ್ಯಾನಿಲಯದ ಕುಲಸಚಿವರು ತಿಳಿಸಿದ್ದಾರೆ.

## ಕೈಗಾರಿಕಾ ಸ್ಪಂದನಾ ಸಭೆ ಮುಂದೂಡಿಕೆ

**ದಾವಣಗೆರೆ:** ಜಿಲ್ಲೆಯ ಕೈಗಾರಿಕಾ ಘಟಕಗಳ ಕುಂದುಕೊರತೆಗಳನ್ನು ಪರಿಹರಿಸುವ ಸಲುವಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನವಂಬರ್ 6 ರಂದು ಆಯೋಜಿಸಲಾಗಿದ್ದ ಕೈಗಾರಿಕಾ ಸ್ಪಂದನ ಸಭೆಯನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ ಎಂದು ಜಿಲ್ಲಾ ಕೈಗಾರಿಕಾ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

## ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

**ಗದಗ :** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೌಲಾನಾ ಆಜಾದ್ ಆಂಗ್ಲ ಮಾಧ್ಯಮ ಶಾಲೆ ಮುಂಡರಗಿಯಲ್ಲಿ ಸಮಾಜ ವಿಜ್ಞಾನ ಅತಿಥಿ ಶಿಕ್ಷಕರ ಹುದ್ದೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿ ಬಿ.ಎ, ಬಿ.ಎಡ್ ಆಗಿರಬೇಕು. ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9844288513 ಸಂಪರ್ಕಿಸಬಹುದಾಗಿದೆ ಎಂದು ಮೌಲಾನಾ ಆಜಾದ್ ಮಾದರಿ ಶಾಲೆಯ ಮುಖ್ಯೋಪಾಧ್ಯಾಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿವೃತ್ತ ನೌಕರರಿಗೆ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮ

**ಶಿವಮೊಗ್ಗ:** ಕನ್ನಡ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಜಿಲ್ಲಾ ಶಾಖೆಯ ವತಿಯಿಂದ ರಾಜ್ಯೋತ್ಸವದ ಅಂಗವಾಗಿ ಸಂಘದ ಸದಸ್ಯರುಗಳಿಗೆ ನ.16 ರಂದು ಬೆಳಗ್ಗೆ 10 ಗಂಟೆಗೆ ಸಂಘದ ಆವರಣದಲ್ಲಿ ಕ್ರೀಡೆ ಮತ್ತು ಸಾಂಸ್ಕೃತಿ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಈ ಕಾರ್ಯಕ್ರಮವನ್ನು ಮಹಿಳೆಯರು ಹಾಗೂ ಪರುಷರಿಗೆ ಅನ್ವಯವಾಗುವಂತೆ 1 ನೇ ವಿಭಾಗದಲ್ಲಿ 70 ವರ್ಷದೊಳಗಿನ ಸದಸ್ಯರಿಗೆ ಹಾಗೂ 2 ನೇ ವಿಭಾಗದಲ್ಲಿ 70 ವರ್ಷ ಮೇಲ್ಪಟ್ಟವರಿಗಾಗಿ ಏರ್ಪಡಿಸಲಾಗಿದ್ದು, ಮಹಿಳೆಯರಿಗೆ ಚಮಚದಲ್ಲಿ ನಿಂಬೆಹಣ್ಣಿನ ನಡಿಗೆ, ಬೇಬಿ ಪಾಸ್ ರಿಲೇ ಹಾಗೂ ಪುರುಷರಿಗೆ ಗುಂಡು ಎಸೆತ, ಬ್ಲಾಸ್ಟ್ ಇನ್ ದ ಸಿಟಿ ಕ್ರೀಡೆಯನ್ನು ಆಯೋಜಿಸಲಾಗಿದೆ.

ಸಂಜೆ 5 ಗಂಟೆಗೆ ಜನಪದ ಗೀತೆ ಹಾಗೂ ಭಾವಗೀತೆ ಗಾಯನದ ಸಾಂಸ್ಕೃತಿಕ ಸ್ಪರ್ಧೆಯನ್ನು ಏರ್ಪಡಿಸಿದ್ದು, ಸ್ಪರ್ಧಾರ್ಥಿಗಳು ಯಾವುದಾದರೂ ಎರಡು ಸ್ಪರ್ಧೆಯಲ್ಲಿ ಮಾತ್ರ ಭಾಗವಹಿಸತಕ್ಕದ್ದು. ಸ್ಪರ್ಧೆಯಲ್ಲಿ ಭಾಗವಹಿಸುವವರು ಸಂಘದ ಸದಸ್ಯತ್ವದ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು. ಆಸಕ್ತರು ನ.16 ರ ಬೆಳಿಗ್ಗೆ 10 ಗಂಟೆಯೊಳಗೆ ಕಚೇರಿ ವೇಳೆಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕೆಂದು ಜಿ ಸ ನಿ ನೌ ಸಂಘದ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ದಾಸಶ್ರೇಷ್ಠ ಶ್ರೀ ಕನಕದಾಸ ಜಯಂತಿ

**ಹಾಸನ :** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿಇಲಾಖೆಯ ಸಹಯೋಗದಲ್ಲಿನ.08ರಂದು ಬೆ.11 ಗಂಟೆಗೆ ಹಾಸನಾಂಬ ಕಲಾಕ್ಷೇತ್ರದಲ್ಲಿದಾಸಶ್ರೇಷ್ಠ ಶ್ರೀ ಕನಕದಾಸಜಯಂತಿಯನ್ನುಆಯ 'ೋಜಿಸಲಾಗಿದೆ. ಅಂದು ಬೆ.10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಆವರಣದಲ್ಲಿದಾಸಶ್ರೇಷ್ಠ ಶ್ರೀ ಕನಕದಾಸರವರ ಭಾವಚಿತ್ರಕ್ಕೆ ಪುಷ್ಪಾರ್ಚನೆಯೊಂದಿಗೆ ಮೆರವಣಿಗೆಗೆ ಚಾಲನೆ ನೀಡಲಾಗುತ್ತದೆ.

ಮಾಜಿ ಪ್ರಧಾನ ಮಂತ್ರಿಗಳು ಹಾಗೂ ರಾಜ್ಯಸಭಾ ಸದಸ್ಯರಾದ 'ಹೆಚ್.ಡಿ.ದೇವೇಗೌಡಅವರು ಘನ ಉಪಸ್ಥಿತಿವಹಿಸಲಿದ್ದಾರೆ. ಕರ್ನಾಟಕರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದಕೆ.ಎಂ.ಶಿವಲಿಂಗೇಗೌಡ ಅವರುಗೌರವ ಉಪಸ್ಥಿತಿವಹಿಸಲಿದ್ದಾರೆ, ಶಾಸಕರಾದ ಸ್ವರೂಪ್ ಪ್ರಕಾಶ್ಕಾರ್ಯ ಕ್ರಮದಅಧ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಸಂಸದರಾದ ಶ್ರೇಯಸ್ ಎಂ.ಪಟೇಲ್, ಶಾಸಕರುಗಳಾದ ಹೆಚ್.ಡಿ.ರೇವಣ್ಣ, ಡಾ.ಸಿ.ಎನ್.ಬಾಲಕೃಷ್ಣ, ಎ.ಮಂಜು, ಹೆಚ್.ಕೆ.ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ಕೆ.ವಿವೇಕಾನಂದ, ಡಾ॥ ಸೂರಜ್‌ರೇವಣ್ಣ ಹಾಗೂ ಮಹಾನಗರ ಪಾಲಿಕೆಯ ಮಹಾಪೌರರಾದಗಿರೀಶ್‌ಚನ್ನವೀರಪ್ಪ, ಹಾಸನ ನಗರಾಭಿವೃದ್ಧಿ ಪ್ರಾಧಿಕಾರದಅಧ್ಯಕ್ಷರಾದ ಪಟೇಲ್ ಶಿವಣ್ಣಅವರು ಭಾಗವಹಿಸಲಿದ್ದಾರೆ. ಸಾಹಿತಿಗಳಾದ ಎಂ.ಜಿ ಪರಮೇಶ್ ಮಡಬಲು ಅವರುಉಪನ್ಯಾಸ ನೀಡಲಿದ್ದಾರೆ.

### ಅಡವೀಂದ್ರಸ್ವಾಮಿ ಮಠದಲ್ಲಿ ಸಂಭ್ರಮದ ಕನ್ನಡ ರಾಜ್ಯೋತ್ಸವ

# ಕನ್ನಡ ಭಾಷೆ ಉಳಿಸಿ ಬೆಳೆಸುವ ಕಾರ್ಯ ಎಲ್ಲೆಡೆ ನಡೆಯಲಿ: ಶೋಭಾ ಮೇಟಿ



**ಗದಗ:** ಕನ್ನಡ ನಮ್ಮ ಉಸಿರು ಕನ್ನಡ ಭಾಷೆಗೆ ತನ್ನದೇ ಆದ ಅಸ್ಮಿತೆ ಇದ್ದು, ಅದು ಸಾವಿರಾರು ವರ್ಷಗಳ ಇತಿಹಾಸವನ್ನು ಹೊಂದಿದೆ. ಈಗ ಕನ್ನಡವನ್ನು ಬಳಸುವ ಅವಶ್ಯಕತೆಗಿಂತ ಎಲ್ಲರೂ ಕನ್ನಡತನವನ್ನು ಬಳಸಿಕೊಂಡಾಗ ಮಾತ್ರ ಕನ್ನಡವನ್ನು ಕಾಪಾಡಲು ಸಾಧ್ಯ ಎಂದು, ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷರು, ಜಿಲ್ಲಾ ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಕವಿತ್ರಿ ಶ್ರೀಮತಿ ಶೋಭಾ ಬಸವರಾಜ ಮೇಟಿ ಅವರು ಹೇಳಿದರು.

ನಗರದ ಮುಳಗುಂದ ನಾಕಾ ಬಳಿಯ ಶ್ರೀಅಡವಿಂದ್ರಸ್ವಾಮಿ ಮಠದ ಶಿವಾನುಭವ ಸಮಿತಿ ಜಿಲ್ಲಾ ಕರ್ನಾಟಕ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ, ಶ್ರೀಮಠದ 341ನೇ ಮಾಸಿಕ ಶಿವಾನುಭವ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯೋತ್ಸವ ಸಂಭ್ರಮ ನಿಮಿತ್ತ ಏರ್ಪಡಿಸಿದ್ದ ಕನ್ನಡವೇ ಸತ್ಯ ಕನ್ನಡವೇ ನಿತ್ಯ ಜಿಲ್ಲಾ ಮಟ್ಟದ ಮಹಿಳಾ ಕವಿಗೋಷ್ಠಿ ಸಮಾರಂಭದಲ್ಲಿ ಅವರು ಮಾತನಾಡಿದರು.

ಪ್ರತಿಯೊಬ್ಬರೂ ಕನ್ನಡ ಸಾಹಿತ್ಯ ಓದಿಕೊಳ್ಳಬೇಕು, ಕನ್ನಡ ಸಂಸ್ಕೃತಿ ಬೆಳೆಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಶಿವಾನುಭವ ಸಮಿತಿ ಹಾಗೂ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು, ಮಕ್ಕಳ ಸಾಹಿತಿ, ಕವಿಗಳಾದ ಡಾ.ರಾಜೇಂದ್ರ ಎಸ್. ಗಡಾದ ಅವರು ಕನ್ನಡ ಮತ್ತು ಭಾಷೆ ಕುರಿತು ಮಾತನಾಡಿ, ಕನ್ನಡವು ನಮ್ಮ ಬಾಂಧವ್ಯ ಹೆಮ್ಮೆ ಮತ್ತು ಅಸ್ತಿತ್ವದ ಗುರುತಾಗಿದ್ದು, ಕನ್ನಡ ನಾಡು, ನುಡಿ, ಸಂಸ್ಕೃತಿಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಈ ನಾಡು ಸಾಕಷ್ಟು ರಾಜಮನೆತನಗಳನ್ನು, ಅರಸರನ್ನು ಹೊಂದಿದಂತೆ ಅನೇಕ ಕವಿ, ಕಲಾವಿದರನ್ನು ಹೊಂದಿರುವ ಪುಣ್ಯ ಭೂಮಿಯಾಗಿದೆ ಎಂದು ಹೇಳಿದರು.

ಬೇಂದ್ರೆ, ಕುವೆಂಪು, ಕರ್ಕಿ ಗೋವಿಂದ್ ಪೈ, ಸಿದ್ದಯ್ಯ ಪುರಾಣಿಕ, ಹುಯಿಲಗೋಳ ನಾರಾಯಣರಾಯರು, ನಿಸಾರ್ ಅಹ್ಮದ್, ಜಿ.ಪಿ. ರಾಜರತ್ನಂ ಮೊದಲಾದವರು ತಮ್ಮ ಕಾವ್ಯದ ಮೂಲಕ ಹೇಗೆ ಕನ್ನಡವನ್ನು ಕಟ್ಟುವ ಕಾರ್ಯ ಕೈಗೊಂಡರೆಂಬುದನ್ನು ಅನೇಕ ಉದಾಹರಣೆಗಳ ಮೂಲಕ ವಿವರಿಸಿ, ಕವಿಗೋಷ್ಠಿಯಲ್ಲಿ ಮಂಡಿಸಲಾದ ಕವಿತೆಗಳನ್ನು ಅವಲೋಕಿಸಿ ಇದೊಂದು ಸ್ವಾಗತಾರ್ಹ ಮಹಿಳಾ ಕವಿಗೋಷ್ಠಿಯಾಗಿದ್ದು, ಇಲ್ಲಿ ಉತ್ತಮ ಕವಿತೆಗಳ ಮಂಡನೆ ಆಗಿದೆ ಎಂದು ಕವಿತ್ರಿಯರನ್ನು ಶ್ಲಾಘಿಸಿದರು.

ಮಹಿಳಾ ಕವಿಗೋಷ್ಠಿಯಲ್ಲಿ ಪ್ರೊ.ಶಕುಂತಲಾ ಸಿಂಧೂರ, ಡಾ.ರಶ್ಮಿ ಅಂಗಡಿ, ಡಾ.ಪದ್ಮಾ ಕಬಾಡಿ, ಶ್ರೀಮತಿ ಜ್ಯೋತಿ ಎಂ. ಲೋಣಿ, ನೀಲಮ್ಮ ಅಂಗಡಿ, ರತ್ನಾ ಬದಿ, ಶಾರದಾ ಬಾಣದ, ಗೀತಾ ಹೂಗಾರ ಅವರು ಸ್ವರಚಿತ ನಾಡಪ್ರಭು ಬಿಂಬಿಸುವ ಕವಿತೆಗಳನ್ನು ಮಂಡಿಸಿದರು.

ಶ್ರೀಮತಿ ಮಂಗಳಾ ಯಾನಮಶೆಟ್ಟಿ, ಎಂ.ವಿ. ಕುಂದ್ರಾಳಹಿರೇಮಠ, ಕುಮಾರಿ ಆದ್ಯಾ, ಕುಮಾರಿ ಮನಸ್ವಿ ಅವರು ಕನ್ನಡ ನಾಡು-ನುಡಿ ಕುರಿತಾದ ಗೀತೆಗಳನ್ನು ಗಾಯನದ ಮೂಲಕ ಪ್ರಸ್ತುತಪಡಿಸಿದರು.

ಸಾನಿಧ್ಯ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ವೇ.ಮೂ. ಶ್ರೀಮಹೇಶ್ವರ ಸ್ವಾಮಿಗಳು ಹೊಸಳ್ಳಿಮಠ ಅವರು ಮಾತನಾಡಿ, ಕನ್ನಡ ರಾಜ್ಯೋತ್ಸವ ಆಚರಿಸುವುದು ಕನ್ನಡ ಅಭಿಮಾನದ ಸಂಕೇತ. ಕನ್ನಡ ಭಾಷೆಯು ಕರ್ನಾಟಕದ ಅಧಿಕೃತ ಭಾಷೆಯಾಗಿದ್ದು, ಇದು ಶ್ರೀಮಂತ ಸಾಹಿತ್ಯ, ಸಂಸ್ಕೃತಿ ಮತ್ತು ಪರಂಪರೆಯ ಪ್ರತೀಕವಾಗಿದೆ ಎಂದರು.

ಗಣ್ಯ ವ್ಯಾಪಾರಸ್ಥರಾದ ವಿನೋದ್ ಕವಲನಾಯಕ್, ಕುರಟ್ಟಿ ದಂಪತಿಗಳು ವೇದಿಕೆಯಲ್ಲಿದ್ದರು.

ಶ್ರೀಮತಿ ಗೀತಾ ಹೂಗಾರ ಪ್ರಾರ್ಥಿಸಿದರು. ಸಮಿತಿ ಕಾರ್ಯದರ್ಶಿಗಳಾದ ಪ್ರಭುಗೌಡ ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಬಿ. ಪಾಟೀಲ ವಂದಿಸಿದರು.

ಇದೇ ಸಂದರ್ಭದಲ್ಲಿ ಅಂತಾರಾಷ್ಟ್ರೀಯ ವಿಶ್ವೇಶ್ವರಯ್ಯ ಪ್ರಶಸ್ತಿಗೆ ಭಾಜನರಾದ ಸಾಹಿತಿ ಡಾ.ರಾಜೇಂದ್ರ ಗಡಾದ ಅವರನ್ನು, ರಾಜ್ಯಮಟ್ಟದ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ ಕವಿತ್ರಿ ಶೋಭಾ ಬಸವರಾಜ ಮೇಟಿ ಅವರನ್ನು ಶ್ರೀಮಠದ ಪರವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯರಾದ ಪ್ರೊ. ಕೆ.ಎಚ್. ಬೇಲೂರು, ಬಿ.ಎಂ. ಬಿಳೆಯಲಿ, ಶ್ರೀಮತಿ ಸುಶೀಲಾ ಕೋಟಿ, ನಿಂಗಪ್ಪ ಬಳಿಗಾರ, ಎಲ್,ಎಸ್, ನೀಲಗುಂದ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ನಿಡುಗುಂದಿ, ಶ್ರೀಮತಿಯಶೋಧಾ ಗಿಡ್ನಂದಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

## ಆಂತರಿಕ ದೂರು ಸಮಿತಿ ರಚನೆ: ದೇಶದಲ್ಲಿರಾಜ್ಯ ಎರಡನೇ ಸ್ಥಾನ

**ಹಾಸನ :** ಭಾರತ ದೇಶದಲ್ಲಿ ಆಂತರಿಕ ದೂರು ಸಮಿತಿಗಳನ್ನ ರಚನೆ ಮಾಡುವುದರಲ್ಲಿ ಕರ್ನಾಟಕ ರಾಜ್ಯ ಎರಡನೇ ಸ್ಥಾನದಲ್ಲಿದೆ.78,000 ಕ್ಕೂ ಹೆಚ್ಚು ಆಂತರಿಕ ದೂರು ಸಮಿತಿಗಳನ್ನು ರಚನೆ ಮಾಡಿದ್ದೇವೆ. ಅವುಗಳ ಕುರಿತಾಗಿ ಅರಿವು ಮೂಡಿಸುವುದು ಕೂಡ ಅತ್ಯಗತ್ಯವಾಗಿದೆಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ॥ ನಾಗಲಕ್ಷ್ಮಿ ಚೌಧರಿ ಅವರು ತಿಳಿಸಿದ್ದಾರೆ.

ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರುಸರ್ಕಾರಿ ಹಾಗೂ ಖಾಸಗಿ ಕಚೇರಿಗಳಲ್ಲಿ ಕಡ್ಡಾಯವಾಗಿ ಆಂತರಿಕ ದೂರು ಸಮಿತಿ ಇರಬೇಕು.ಜಿಲ್ಲಾಧಿಕಾರಿಯವರ ಕಚೇರಿಯಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ಆಗಬೇಕು. ಅವರ ಸಮ್ಮುಖದಲ್ಲಿಯೆ ಕಡ್ಡಾಯವಾಗಿವಿಚಾರಣೆ ನಡೆಯಬೇಕು ಎಂದರು.

ಪ್ರತಿ ಕಚೇರಿಗಳಲ್ಲಿ ದೂರು ಪೆಟ್ಟಿಗೆಗಳನ್ನು ಇಡಬೇಕು. ಜಿಲ್ಲೆಯಲ್ಲಿ 315 ಆಂತರಿಕ ದೂರು ಸಮಿತಿಗಳನ್ನು ರಚಿಸಲಾಗಿದೆ. ಇನ್ನು 69 ಬಾಕಿ ಇವೆ.ಕೆಲಸ ಮಾಡುವ ಸ್ಥಳದಲ್ಲಿ ಮಹಿಳೆಗೆ ಲೈಂಗಿಕ ದೌರ್ಜನ್ಯ ಆದಂತಹ ಸಂದರ್ಭದಲ್ಲಿ ಆಂತರಿಕ ದೂರು ಸಮಿತಿ ಬಹಳ ಕ್ರಿಯಾಶೀಲವಾಗಿ ಕೆಲಸ ಮಾಡಬೇಕು. ಕಾಲಕಾಲಕ್ಕೆ ಇವುಗಳು ಸರಿಯಾಗಿ ನಡೆದರೆ ಮಾತ್ರ ಜನರು ಎಚ್ಚೆತ್ತುಕೊಳ್ಳುತ್ತಾರೆ ಎಂದರು.

ಕಳೆದ ಮೂರು ದಿನದಿಂದ ಜಿಲ್ಲೆಯ ವಿವಿಧಕಾಲೇಜುಗಳಿಗೆ, ಹಾಸ್ಟೆಲ್‌ಗಳಿಗೆ ಭೇಟಿ ನೀಡಿದ್ದೇನೆ. ಅರಕಲಗೂಡು ತಾಲ್ಲೂಕು ಆಸ್ಪತ್ರೆ ಹಾಗೂ ಹಾಸನದ ಜಿಲ್ಲಾ ಆಸ್ಪತ್ರೆಯನ್ನು ಸಹ ಭೇಟಿ ಮಾಡಿದ್ದೇನೆ. ಅಲ್ಲಿ ಕಂಡು ಬಂದಿರುವಂತಹ ಸಮಸ್ಯೆಗಳ ಕುರಿತಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳ ಗಮನಕ್ಕೆ ತಂದಿದ್ದೇನೆ. ಕೆಲವೊಂದು ಆಸ್ಪತ್ರೆಗಳಲ್ಲಿ ತುರ್ತು ಮಾಡಬೇಕಾದ ಕೆಲಸಗಳನ್ನ ಮಾಡಿ 15 ದಿನಗಳೊಳಗಾಗಿ ಆಯೋಗಕ್ಕೆ ವರದಿ ಸಲ್ಲಿಸುತ್ತೇವೆ ಎಂದು ತಿಳಿಸಿದ್ದಾರೆ ಎಂದರು.

ಅರಕಲಗೂಡು ತಾಲ್ಲೂಕಿನಲ್ಲಿ ಯಾವುದೇ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಾಗಲಿ, ಪಾಲಿಟೆಕ್ನಿಕ್ ಕಾಲೇಜುಗಳಾಗಲಿ ಇಲ್ಲ ಅದರಲ್ಲೂ ಹೆಣ್ಣು ಮಕ್ಕಳಿಗೆ ಯಾವ ಕಾಲೇಜುಗಳು ಇಲ್ಲದೆ ಇರುವುದರಿಂದ ಮಕ್ಕಳೆಲ್ಲರೂ ಹಾಸನ ಜಿಲ್ಲೆಗೆ ಆಗಮಿಸಬೇಕು ಹಾಗಾಗಿ ಬಡ ಮಕ್ಕಳು ವಿದ್ಯಾಭ್ಯಾಸ ಮಾಡಲು ಅನುಕೂಲವಾಗುವಂತೆ ಕಾಲೇಜುಗಳನ್ನು ತೆರೆಯುವಂತೆ ಮನವಿ ಮಾಡಿದ್ದಾರೆ ಎಂದು ತಿಳಿಸಿದರು.

ಪೊಲೀಸ್ ಠಾಣೆಯನ್ನು ಸಹ ಭೇಟಿ ಮಾಡಿದ್ದೇನೆ. ಜನರು ಠಾಣೆಯಲ್ಲಿ ದೂರುಗಳನ್ನು ಕೊಡಲು ಹೋದಾಗ ಸರಿಯಾಗಿ ಸ್ಪಂದಿಸುವುದಿಲ್ಲ,ಹೆಣ್ಣು ಮಕ್ಕಳಿಗೆ ಗೌರವ ಕೊಡುವುದಿಲ್ಲ, ಎಫ್ ಐ ಆರ್ ಮಾಡುವುದಿಲ್ಲ ಎನ್ನುವ ಸಮಸ್ಯೆಗಳು ಹೆಚ್ಚಾಗಿ ಕೇಳಿಬರುತ್ತಿವೆ.ಇಂತಹ ಸಮಸ್ಯೆಗಳು ಕಂಡು ಬಂದಾಗ ಜನರು ಹಿರಿಯ ಪೊಲೀಸ್ ಅಧಿಕಾರಿಯ ಗಮನಕ್ಕೆ ತರಬೇಕು. ಪೊಲೀಸ್ ಠಾಣೆಯಲ್ಲಿ ಕ್ಯೂಆರ್ ಕೋಡ್ ಇರುತ್ತದೆ ಅದನ್ನು ಸ್ಕ್ಯಾನ್ ಮಾಡಿ ದೂರು ನೀಡಬೇಕು ಎಂದರು.ಸ್ಥಳೀಯ ಪೊಲೀಸ್ ಠಾಣೆಗಳಲ್ಲಿ ಅಧಿಕಾರಿಗಳುಸೂಕ್ಷ್ಮತೆಯಿಂದ ವರ್ತಿಸುವಂತೆ ಯಾವ ಯಾವ ಕಾರ್ಯಕ್ರಮಗಳನ್ನು ಮಾಡಿದ್ದೀರಿ ಎಂದು ವರದಿಯನ್ನು ಕೇಳಿದ್ದೇನೆ.

# ಫಿಲಿಪೈನ್ಸ್‌ನಲ್ಲಿ ತುರ್ತು ಪರಿಸ್ಥಿತಿ ಘೋಷಣೆ

# ಚಂಡಮಾರುತಕ್ಕೆ 241 ಜನ ಬಲಿ

**ಮನಿಲಾ:** ಫಿಲಿಪೈನ್ಸ್‌ನಲ್ಲಿ ಈ ವರ್ಷ ದೇಶವನ್ನು ಅಪ್ಪಳಿಸಿದ ಅತ್ಯಂತ ಭೀಕರ ನೈಸರ್ಗಿಕ ವಿಕೋಪದಲ್ಲಿ ಕಲೆಗಿ ಚಂಡಮಾರುತವು ಮಧ್ಯ ಪ್ರಾಂತ್ಯಗಳಲ್ಲಿ ಕನಿಷ್ಠ 241 ಜನರನ್ನು ಬಲಿ ತೆಗೆದುಕೊಂಡು ಕಾಣೆಯಾಗಿದೆ.ಇದರ ನಡುವೆ ಫಿಲಿಪೈನ್‌ನ ಅಧ್ಯಕ್ಷ ಫರ್ಡಿನಾಂಡ್ ಮಾರ್ಕೋಸ್ ಜೂನಿಯರ್ ಇಂದು ದೇಶದಲ್ಲಿ ತುರ್ತು ಪರಿಸ್ಥಿತಿ ಘೋಷಿಸಿದ್ದಾರೆ.


ಉಷ್ಣವಲಯದ ಚಂಡಮಾರುತವು ದಕ್ಷಿಣ ಚೀನಾ ಸಮುದ್ರಕ್ಕೆ ಬೀಸುವ ಮೊದಲು ಕಲೆಗಿ ಕನಿಷ್ಠ 114 ಜನರನ್ನು ಬಲಿ ತೆಗೆದುಕೊಂಡಿತು, ಅವರಲ್ಲಿ ಹೆಚ್ಚಿನವರು ಹಠಾತ್ ಪ್ರವಾಹದಲ್ಲಿ ಮುಳುಗಿ ಸಾವನ್ನಪ್ಪಿದರು ಮತ್ತು 127 ಜನರು ಕಾಣೆಯಾದರು. ಸುಮಾರು 2 ಮಿಲಿಯನ್ ಜನರ ಮೇಲೆ ಪರಿಣಾಮ ಬೀರಿದ ಚಂಡಮಾರುತದ ದಾಳಿಯು 560,000 ಕ್ಕೂ ಹೆಚ್ಚು ಗ್ರಾಮಸ್ಥರನ್ನು ಸ್ಥಳಾಂತರಿಸಿತು, ಇದರಲ್ಲಿ ಸುಮಾರು 450,000 ಜನರನ್ನು ತುರ್ತು ಆಶ್ರಯಗಳಿಗೆ ಸ್ಥಳಾಂತರಿಸಲಾಯಿತು.

ಚಂಡಮಾರುತದ ಪರಿಣಾಮಗಳನ್ನು ನಿರ್ಣಯಿಸಲು ವಿಪತ್ತು-ಪ್ರತಿಕ್ರಿಯೆ ಅಧಿಕಾರಿಗಳೊಂದಿಗಿನ ಸಭೆಯಲ್ಲಿ



ಮಾರ್ಕೋಸ್ ಮಾಡಿದ ಘೋಷಣೆಯು ಸರ್ಕಾರಕ್ಕೆ ತುರ್ತು ನಿಧಿಗಳನ್ನು ವೇಗವಾಗಿ ವಿತರಿಸಲು ಬೆಲೆ ನಿಗದಿಯನ್ನು ತಡೆಯಲು ಅನುವು ಮತ್ತು ಆಹಾರ ಸಂಗ್ರಹಣೆ ಮತ್ತು ಅಧಿಕ ಮಾಡಿಕೊಡುತ್ತದೆ.

## ಆರೋಪ ನಿರಾಕರಿಸಿದ ಬ್ರೇಜಿಲ್ ಮಾಡಲ್





**ನವದೆಹಲಿ:** ರಾಹುಲ್‌ಗಾಂಧಿ (Rahul Gandhi) ಅವರು ಮಾಡಿದ್ದ ಹರಿಯಾಣ ವಿಧಾನಸಭಾ ಚುನಾವಣೆಯಲ್ಲಿ ಮತಗಳ್ಳತನದ ಆರೋಪವನ್ನು ಸ್ವತಃ ಬ್ರೆಜಿಲಿಯನ್ ಮಾಡೆಲ್‌ಅಲ್ಲಗಳೆದಿದ್ದಾರೆ.

ಹರಿಯಾಣ ಚುನಾವಣೆಯಲ್ಲಿ ಭಾರೀ ಅಕ್ರಮ ನಡೆದಿದೆ. ಬ್ರೆಜಿಲ್ ರೂಪದರ್ಶಿ 22 ಕಡೆ ಮತ ಚಲಾಯಿಸಿದ್ದಾರೆ ಎಂದು ಸುದ್ದಿಗೋಷ್ಠಿ ನಡೆಸಿ ರಾಹುಲ್ ಗಾಂಧಿ ಗಂಭೀರ ಆರೋಪ ಮಾಡಿದ್ದರು. ಈ ಆರೋಪದ ಬಗ್ಗೆ ಬ್ರೆಜಿಲ್ ಮಾಡೆಲ್ ಲಾರಿಸಾ ಪ್ರತಿಕ್ರಿಯೆ ನೀಡಿ ರಾಹುಲ್ ಆರೋಪವನ್ನು ಸಾರಾಸಗಟಾಗಿ ನಿರಾಕರಿಸಿದ್ದಾರೆ.

ರಾಹುಲ್ ನನ್ನ ಹಳೆಯ ಫೋಟೊ ಬಳಸಿ ಸೀಮಾ ಮತ್ತು ಸರಸ್ವತಿ ಎಂದು ಕರೆಯುತ್ತಿದ್ದಾರೆ. ನಾನು ಬ್ರೆಜಿಲಿಯನ್ ಇದು ರಾಜಕೀಯ ನಾಟಕದಂತೆ ಕಾಣುತ್ತಿದೆ. ಮಾಧ್ಯಮಗಳು ನನ್ನನ್ನು ಸಂಪರ್ಕಿಸಲು ಪ್ರಯತ್ನಿಸುತ್ತಿವೆ ಎಂದು ಅವರು ತಿಳಿಸಿದ್ದಾರೆ.

ಭಾರತದ ಚುನಾವಣೆಯಲ್ಲಿ ತನ್ನ ಹೆಸರು ಕೇಳಿಬಂದಿರುವುದಕ್ಕೆ ಲಾರಿಸಾ ಅಚ್ಚರಿ ವ್ಯಕ್ತಪಡಿಸಿದ್ದಾರೆ. ಈ ಫೋಟೊ ನನ್ನ ಆರಂಭಿಕ ಮಾಡೆಲಿಂಗ್ ದಿನಗಳ ಹಳೆಯ ಸ್ಟಾಕ್ ಫೋಟೊ. ನಾನೀಗ ಮಾಡೆಲ್ ಅಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಯಾರಾದ್ರೂ ಗಂಟೆಗೆ 20 ವೋಟ್ ಹಾಕೋಕೆ ಸಾಧ್ಯವಾ

ಎಂದು ಬಿಜೆಪಿ ಪ್ರಶ್ನೆ ಭಾರತದ ರಾಜಕೀಯಕ್ಕೂ ನನಗೂ ಯಾವುದೇ ಸಂಬಂಧವಿಲ್ಲ. ನನ್ನ ಫೋಟೊವನ್ನು ಸ್ಟಾಕ್ ಇಮೇಜ್ ಪ್ಲಾಟ್‌ಫಾರ್ಮ್‌ನಿಂದ ಖರೀದಿಸಲಾಗಿದೆ.

ನಾನು ಎಂದಿಗೂ ಭಾರತಕ್ಕೆ ಹೋಗಿಲ್ಲ. ನಾನು ಬ್ರೆಜಿಲಿಯನ್ ಡಿಜಿಟಲ್ ಇನ್‌ಫ್ಲುಯೆನ್ಸರ್ ಮತ್ತು ಕೇಶ ವಿನ್ಯಾಸಕಿ. ನಾನು ಭಾರತೀಯ ಜನರನ್ನು ಪ್ರೀತಿಸುತ್ತೇನೆ ಎಂದು ತಿಳಿಸಿದ್ದಾರೆ.

## ಮನೆ ತೊರೆದ ಪತ್ನಿ, ಮಗಳನ್ನು ಕೊಂದು ಆತ್ಮಹತ್ಯೆಗೆ ಶರಣಾದ ತಂದೆ

**ಮುಳಬಾಗಿಲು:** ಕೌಟುಂಬಿಕ ಕಲಹದಿಂದ ಐದು ವರ್ಷದ ಮಗಳನ್ನು ಕೊಂದು ತಂದೆ ಆತಹತ್ಯೆ ಮಾಡಿಕೊಂಡಿರುವ ಹೃದಯವಿದ್ರಾಹಕ ಘಟನೆ ತಾಲೂಕಿನ ಮುಡಿಯನೂರು ಗ್ರಾಮದಲ್ಲಿ ಕಳೆದ ರಾತ್ರಿ ನಡೆದಿದೆ.ಮುಡಿಯನೂರು ಗ್ರಾಮದ ಲೋಕೇಶ್ (37) ಎಂಬುವರೇ ಮಗಳು ನಿಹಾರಿಕಾ(5)ಳನ್ನು ಕೊಂದು ಆತಹತ್ಯೆಗೆ ಶರಣಾದ ತಂದೆ.ಲೋಕೇಶ್ ಅವರು ವೃತ್ತಿಯಲ್ಲಿ ಎಲೆಕ್ಟ್ರಿಷಿಯನ್ ಆಗಿದ್ದು ಕೋಳಿಫಾರಂವೊಂದರ ಮೇಲ್ವಿಚಾರಕರಾಗಿ ಕೆಲಸ ಮಾಡುತ್ತಿದ್ದರು.ಇತ್ತೀಚೆಗೆ ಕೌಟುಂಬಿಕ ಕಲಹದಿಂದಾಗಿ ಪತ್ನಿ ನವ್ಯಶ್ರೀ ಮನೆ ತೊರೆದು ಹೋಗಿದ್ದರು. ಇದಲ್ಲದೆ ಕೆಲವರ ಚುಚ್ಚುಮಾತಿನಿಂದ ಅವಮಾನ ಸಹಿಸದೆ ಮನನೊಂದಿದ್ದ ಲೋಕೇಶ್ ಅವರು ಸಾಯಲು ನಿರ್ಧರಿಸಿ ಕಳೆದ ರಾತ್ರಿ ಮಗಳು ನಿಹಾರಿಕಾಳನ್ನು ನೀರಿನ ಡ್ರಮ್‌ನಲ್ಲಿ ಮುಳಿಗಿಸಿ, ಉಸಿರುಗಟ್ಟಿಸಿ ಕೊಲೆಗೈದು ನಂತರ ಶವವನ್ನು ಕಾರಿನಲ್ಲಿಟ್ಟಿದ್ದಾರೆ.ನಂತರ ಲೋಕೇಶ್ ಮನೆ ಸಮೀಪದಲ್ಲಿರುವ ಕಾಲೇಜಿನ ಬಳಿ ಹೋಗಿ ಮರಕ್ಕೆ ನೇಣು ಬಿಗಿದುಕೊಂಡು ಆತಹತ್ಯೆಗೆ ಶರಣಾಗಿದ್ದಾರೆ. ಇಂದು ಬೆಳಗ್ಗೆ ಈ ಮಾರ್ಗದಲ್ಲಿ ಹೋಗುತ್ತಿದ್ದವರು ಗಮನಿಸಿ ತಕ್ಷಣ ಪೊಲೀಸರಿಗೆ ತಿಳಿಸಿದ್ದಾರೆ. ಸ್ಥಳಕ್ಕಾಗಮಿಸಿದ ಮುಳಬಾಗಿಲು ಗ್ರಾಮಾಂತರ ಠಾಣೆ ಪೊಲೀಸರು ಪರಿಶೀಲನೆ ನಡೆಸಿ, ಶವವನ್ನು ಕೆಳಗಿಳಿಸಿದ್ದಾರೆ.ಲೋಕೇಶ್ ಅವರಿಗೆ ಒಬ್ಬಳು ಮಗಳಿದ್ದಾಳೆ ಎಂದು ಗ್ರಾಮಸ್ಥರು ತಿಳಿಸಿದಾಗ ಪೊಲೀಸರು ಅವರ ಮನೆ ಬಳಿ ಹೋಗಿ ಮಗಳಿಗಾಗಿ ಹುಡುಕಾಟ ನಡೆಸಿದಾಗ ಕಾರಿನಲ್ಲಿ ಬಾಲಕಿಯ ಶವ ಪತ್ತೆಯಾಗಿದೆ. ಅಪ್ಪ, ಮಗಳ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದ್ದಾರೆ. ಘಟನೆ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ನಗರ ಯೋಜನೆಗೆ ಬದ್ಧತೆ ತೋರಿಸದ ದೂಡ ಪ್ರಾಧಿಕಾರ ಮಾಜಿ ದೂಡ ಅಧ್ಯಕ್ಷ ಎ.ವೈ.ಪ್ರಕಾಶ್ ಆರೋಪ

**ದಾವಣಗೆರೆ:** 2022-23ನೇ ಸಾಲಿನಲ್ಲಿ 40 ವರ್ಷಗಳ ಅವಧಿಗೆ ರೂಪಿಸಿದ್ದ ನಗರಾಭಿವೃದ್ಧಿ ಯೋಜನೆಯನ್ನು ಈಗಿನ ಧೂಡಾ ಆಡಳಿತ ವಿನಾಕಾರಣ ಬದಲಾಯಿಸಲು ಹೊರಟಿದೆ ಎಂದು ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ, ಹಿರಿಯ ವಕೀಲ ಎ.ವೈ.ಪ್ರಕಾಶ್ ಅಸಮಾಧಾನ ವ್ಯಕ್ತಪಡಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಅಧ್ಯಕ್ಷನಾಗಿದ್ದ ಅವಧಿಯಲ್ಲಿ ಪ್ರಾಧಿಕಾರದಿಂದ ಸಿಡಿಪಿ ಪ್ಲಾನ್ ರೂಪಿಸಿ ಸರ್ಕಾರದಿಂದ ಅನುಮೋದನೆ ಪಡೆಯಲಾಗಿತ್ತು. ಇದೀಗ ನೂತನ ಧೂಡಾ ಆಡಳಿತವು ಹೊಸ ಸಿಡಿಪಿ ಪ್ಲಾನ್ ತಯಾರಿಸಿ, ಆಕ್ಷೇಪಣೆಗಳನ್ನು ಆಹ್ವಾನಿಸಿದೆ. ಹೊಸ ಯೋಜನೆಯಲ್ಲಿ ಕೆಲವೆಡೆ ವಸತಿ ಯೋಜನೆಗೆ ಮೀಸಲಿಟ್ಟಿದ್ದ ಜಮೀನನ್ನು ಕೈಗಾರಿಕೆಗಳಿಗೆ ನೀಡಲು ಮುಂದಾಗಿದೆ. ಮುಖ್ಯರಸ್ತೆಗೆ ಸಂಪರ್ಕಿಸುವ ರಸ್ತೆಗಳ ಅಳತೆಯನ್ನು ಕಡಿತಗೊಳಿಸಿದೆ. ಈಗಿನ ಧೂಡಾ ಆಡಳಿತಕ್ಕೆ ದೂರದೃಷ್ಟಿಯೇ ಇಲ್ಲವಾಗಿದೆ ಎಂದು ದೂರಿದರು.

ಮಹಾನಗರ ಪಾಲಿಕೆ ಮಾಜಿ ಸದಸ್ಯ ಶಿವನಹಳ್ಳಿ ರಮೇಶ ಮಾತನಾಡಿ, ದಾವಣಗೆರೆ ನಗರದ ಮಧ್ಯಭಾಗದಲ್ಲಿ ರೈಲ್ವೆ ಹಳಿ ಹಾದುಹೋಗಿದ್ದು, ತೋಳಹುಣಸೆ ನಿಲ್ದಾಣದಿಂದ ಹರಿಹರ ನಿಲ್ದಾಣದವರೆಗೆ ಹಳಿಯ ಎರಡೂ ಭಾಗದಲ್ಲಿ 60 ಅಡಿ ಅಗಲದ ರಸ್ತೆಯನ್ನು ಕಾಯ್ದಿರಿಸಬೇಕು. ಕೃಷಿ ಜಮೀನಿನ ಅಂತಿಮ ವಿನ್ಯಾಸಕ್ಕೆ ಮಂಜೂರಾತಿ ಪಡೆಯುವ ಸಂದರ್ಭದಲ್ಲಿ ರೈಲ್ವೆ ಹಳಿಯ ಎರಡೂ ಬದಿಗಳಲ್ಲಿ ರಸ್ತೆಯಾದರೆ ಒಳಚರಂಡಿ, ಕಾಲುವೆಗಳನ್ನು ನಿರ್ಮಿಸಿ ರೈಲ್ವೆ ಅಂಡರ್ ಪಾಸ್ ಮುಖಾಂತರ ಮಳೆ ನೀರು, ಒಳಚರಂಡಿ ನೀರು ಮುಂದೆ ಹರಿಯಲು ಅನುಕೂಲ ಮಾಡಿಕೊಟ್ಟಂತಾಗುತ್ತದೆ ಎಂದರು.

ಬಾಡಾ ಕ್ರಾಸ್ ನಿಂದ ಹರಿಹರದ ಬೈಪಾಸ್ ವರೆಗೆ ಈಗಾಗಲೇ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಜಮೀನು ಹೊರತುಪಡಿಸಿ ದಾವಣಗೆರೆ ದಕ್ಷಿಣ ಭಾಗದಲ್ಲಿ ಅನೇಕ ಹೊಸ ಬಡಾವಣೆಗಳು ನಿರ್ಮಾಣವಾಗುತ್ತಿವೆ. ಬಡಾವಣೆಗಳಿಗೆ ಕೊಟ್ಟಿರುವ ಅಂತಿಮ ವಿನ್ಯಾಸದಲ್ಲಿ 60 ಅಡಿ ಹಾಗೂ 40 ಅಡಿ ರಸ್ತೆಗಳು ಇದ್ದು, ಈ ರಸ್ತೆಗಳು ನೇರವಾಗಿ ರಾಷ್ಟ್ರೀಯ ಹೆದ್ದಾರಿ ಸರ್ವೀಸ್ ರಸ್ತೆಯವರೆಗೆ ತಲುಪುವಂತೆ ಮಾಡಿದರೆ ನಗರದಲ್ಲಿನ ಸಾರಿಗೆ ಒತ್ತಡ ಬಡಾವಣೆಗಳಿಗೆ ಕೊಟ್ಟಿರುವ ಅಂತಿಮ ವಿನ್ಯಾಸದಲ್ಲಿ 60 ಅಡಿ ಹಾಗೂ 40 ಅಡಿ ರಸ್ತೆಗಳು ಇದ್ದು, ಈ ರಸ್ತೆಗಳು ನೇರವಾಗಿ ರಾಷ್ಟ್ರೀಯ ಹೆದ್ದಾರಿ ಸರ್ವೀಸ್ ರಸ್ತೆಯವರೆಗೆ ತಲುಪುವಂತೆ ಮಾಡಿದರೆ ನಗರದಲ್ಲಿನ ಸಾರಿಗೆ ಒತ್ತಡ ' ಕಡಿಮೆಗೊಳಿಸಬಹುದು. ರೈತರುಗಳು ಜೊತೆ ಸಮಾಲೋಚಿಸಿ ಪ್ರಾಧಿಕಾರದಿಂದ ಮಾರುಕಟ್ಟೆ ಬೆಲೆಗೆ ಜಮೀನು ಖರೀದಿಸಿ, ವ್ಯವಸ್ಥಿತವಾದ ಉದ್ಯಾನವನ, ರಸ್ತೆ ಹಾಗೂ ಸಿ.ಎ ಸೈಟುಗಳನ್ನು ಒಳಗೊಂಡ ಬಡಾವಣೆ ನಿರ್ಮಿಸಿದರೆ ಮುಂದಿನ ಪೀಳಿಗೆಗೆ ಅನುಕೂಲವಾಗುತ್ತದೆ. ಈ ಅಂಶಗಳನ್ನು ಹೊಸ ಸಿಡಿಪಿಯಲ್ಲಿ ಸೇರಿಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.1995-96ರಲ್ಲಿ ಟಿ.ದಾಸಕರಿಯಪ್ಪ ಧೂಡಾ ಅಧ್ಯಕ್ಷರಾಗಿದ್ದ ವೇಳೆ ಜೆ.ಹೆಚ್.ಪಟೇಲ್ ಬಡಾವಣೆ ನಿರ್ಮಿಸಲಾಗಿತ್ತು. ಆಗ ಬಿಜೆಪಿಯ ಜಿ.ಮಲ್ಲಿಕಾರ್ಜುನಪ್ಪ ಸಂಸದರು, ದಾವಣಗೆರೆ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಶಾಮನೂರು ಶಿವಶಂಕರಪ್ಪ ಶಾಸಕರು ಹಾಗೂ ಮಾಯಕೊಂಡ ಕ್ಷೇತ್ರದಿಂದ ಬಿಜೆಪಿಯ ಎಸ್.ಎ.ರವೀಂದ್ರನಾಥ್ ಶಾಸಕರಾಗಿದ್ದರು. ಆದರೂ ಎಲ್ಲರೂ ಪಕ್ಷಾತೀತವಾಗಿ ಸಹಕರಿಸಿದ ಪರಿಣಾಮ ಸುಸಜ್ಜಿತ ಬಡಾವಣೆ ನಿರ್ಮಾಣ ಸಾಧ್ಯವಾಯಿತು. ಆದರೆ ಈಗ ನಿಯಮಾನುಸಾರ ಖಾಸಗಿ ಡೆವಲಪರ್ ಗಳು ಅನುಮೋದನೆ ಪಡೆದಿರುವ ಬಡಾವಣೆಗಳು ಸಾರ್ವಜನಿಕರಿಗಾಗಲಿ, ಮುಂದಿನ ಪೀಳಿಗೆಗಾಗಲೀ ಅನುಕೂಲಕರವಾಗಿಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಬಡಾವಣೆ ನಿರ್ಮಾಣಕ್ಕೆ ರೈತರ ಜಮೀನು ಖರೀದಿಸಲು ಧೂಡಾದಲ್ಲಿ 150 ಕೋಟಿ ರೂ. ಲಭ್ಯವಿದೆ. ಇದರ ಜೊತೆಗೆ ನಿರ್ಮಿಸಲಿರುವ ಬಡಾವಣೆಯ ಸಿಎ ಸೈಟ್, ವಾಣಿಜ್ಯ ಸೈಟ್ ಹಾಗೂ ಸರ್ಕಾರದ ನಿಯಮದ ಪ್ರಕಾರ ಕಾರ್ನರ್ ಸೈಟ್ ಗಳನ್ನು ಬಹಿರಂಗ ಹರಾಜು ಹಾಕುವ ಮೂಲಕ ಹಣಕಾಸಿನ ಕೊರತೆ ನೀಗಿಸಿಕೊಳ್ಳಬಹುದು. ಇದನ್ನು ಸರ್ಕಾರದ ಮುಂದೆ ಪ್ರಸ್ತಾಪಿಸಿ ಉದ್ದೇಶಿತ ಬಡಾವಣೆಗಳ ನಿರ್ಮಾಣಕ್ಕೆ ಅನುಮೋದನೆ ಪಡೆದುಕೊಳ್ಳಬಹುದು. ಇದರಿಂದ ದಾವಣಗೆರೆ ಮಹಾಜನತೆ ಹಾಗೂ ಮುಂದಿನ ಪೀಳಿಗೆಗೆ ಅನುಕೂಲ ಮಾಡಿಕೊಟ್ಟಂತಾಗುತ್ತದೆ ಎಂದು ಅವರು ಅಬಿಪ್ರಾಯಪಟ್ಟರು.

## ಕೊಡದಗುಡ್ಡ ವೀರಭದ್ರ ಸ್ವಾಮಿ ಕಾರ್ತಿಕೋತ್ಸವ



**ನವಂಬರ್:** ಜಗಳೂರು ತಾಲೂಕು ಕೊಡದಗುಡ್ಡ ವೀರಭದ್ರ ಸ್ವಾಮಿಯ ಕಾರ್ತಿಕೋತ್ಸವವೂ ನವಂಬರ್.4 ರಿಂದ ಪ್ರಾರಂಭವಾಗಿ ಡಿಸೆಂಬರ್. 2 ರವರೆಗೆ ವಿವಿಧ ಪೂಜಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು . ಡಿಸೆಂಬರ್ 11ರಂದು ದಗಲೇ ಪೂಜೆ. 18ರ ಮಂಗಳವಾರ ಮಡಿವಾಳಯ್ಯನ ಪೂಜೆ. 25ರಂದು ಮಂಗಳವಾರ ಕುದುರೆ ಪೂಜೆ. ಡಿಸೆಂಬರ್ 2 ಮಂಗಳವಾರ ಬಸವ ಪೂಜೆ. ಮತ್ತು ಕಡೆ ಕಾರ್ತಿಕ ಉತ್ಸವ ರಾತ್ರಿ 7.30 ರಿಂದ 11:00ವರೆಗೆ ನಡೆಯಲಿದೆ. ನಂತರ ವೀರಭದ್ರ ಸ್ವಾಮಿಯ ಬೆಳ್ಳಿ ಪಲ್ಲಕ್ಕಿ ಮಹೋತ್ಸವವು ನಡೆಯಲಿದ್ದು ಮಹಾ ಮಂಗಳಾರತಿಯೊಂದಿಗೆ ದರ್ಶನ ನಡೆಯಲಿದೆ ಭಕ್ತಾದಿಗಳು ತನು, ಧನ, ಮನದೊಂದಿಗೆ ಸಹಕರಿಸಬೇಕಾಗಿ ಕೊಡದಗುಡ್ಡ ವೀರಭದ್ರ ಸ್ವಾಮಿ ಟ್ರಸ್ಟ್ ನವರು ಪ್ರಕಟದಲ್ಲಿ ತಿಳಿಸಿದ್ದಾರೆ

## ವೀರ ವನಿತೆ ಒನಕೆ ಓಬವ್ವಜಯಂತಿ

**ಹಾಸನ :** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿಇಲಾಖೆಯ ಸಹಯೋಗದಲ್ಲಿನ.11ರಂದು ಬೆ.11 ಗಂಟೆಗೆ ಹಾಸನಾಂಬ ಕಲಾಕ್ಷೇತ್ರದಲ್ಲಿವೀರವನಿತೆ ಒನಕೆ ಓಬವ್ವಜಯಂತಿಯನ್ನುಆಯ 'ೋಜಿಸಲಾಗಿದೆ. ಅಂದು ಬೆ.10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಆವರಣದಲ್ಲಿವೀರವನಿತೆ ಒನಕೆ ಓಬವ್ವರವರ ಭಾವಚಿತ್ರಕ್ಕೆ ಪುಷ್ಪಾರ್ಚನೆಯೊಂದಿಗೆ ಮೆರವಣಿಗೆಗೆ ಚಾಲನೆ ನೀಡಲಾಗುತ್ತದೆ.

ಮಾಜಿ ಪ್ರಧಾನ ಮಂತ್ರಿಗಳು ಹಾಗೂ ರಾಜ್ಯಸಭಾ ಸದಸ್ಯರಾದ ಹೆಚ್.ಡಿ.ದೇವೇಗೌಡಅವರು ಘನ ಉಪಸ್ಥಿತಿವಹಿಸಲಿದ್ದಾರೆ.

# ಸೋಮಾರಿತನ ಇದ್ದರೆ ಏನನ್ನೂ ಮಾಡಲು ಸಾಧ್ಯವಿಲ್ಲ



**ಶಿವಮೊಗ್ಗ:** ಸೋಮಾರಿತನ ಇದ್ದರೆ ಏನನ್ನೂ ಮಾಡಲು ಸಾಧ್ಯವಿಲ್ಲ. ನಾವು ಎಷ್ಟೇ ಓದಿರಲಿ, ಏನೇ ಸಾಧನೆ ಮಾಡಿರಲಿ, ನಮ್ಮಲ್ಲಿ ಸೋಮಾರಿತನ ಜೊತೆಗೂಡಿದಾಗ ಏನನ್ನೂ ಮಾಡಲು ಸಾಧ್ಯವಿಲ್ಲ ಎಂದು ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಜಗದ್ಗುರು ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಹೇಳಿದರು.

ಅವರು ಇಂದು ಬೆಳಿಗ್ಗೆ ಶಿವಮೊಗ್ಗ ಶ್ರೀ ಆದಿಚುಂಚನಗಿರಿ ಶಾಖಾಮಠದ ಸಮುದಾಯಭವನದಲ್ಲಿ ಆಯೋಜಿಸಿದ್ದ 35ವಾರ್ಷಿಕೋತ್ಸವದ ಎರಡನೇ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ, ಸಾಧನೆ ಸಿಗಬೇಕೆಂದರೆ ಸೋಮಾರಿತನ ಕೈ ಬಿಟ್ಟಂತೆ, ಬದ್ಧತೆ ಹಾಗೂ ಛಲವನ್ನು ಬೆಳೆಸಿಕೊಳ್ಳಬೇಕು. ಅದಕ್ಕೆ ನಮ್ಮ ನಡುವೆ ಸಾಕಷ್ಟು ನಿದರ್ಶನಗಳು ಕಾಣಿಸುತ್ತವೆ ಎಂದು ಹೇಳಿದರು.

ಆದಿಚುಂಚನಗಿರಿ ಮಹಾಸಂಸ್ಥಾನ ಆರಂಭಗೊಂಡು ಐವತ್ತು ವರ್ಷ ಆಗಿದ್ದು, ಕೇವಲ ಮಠದ, ಸಮಾಜದ ಕಾರ್ಯಕ್ಕೆ ಸೀಮಿತವಾಗದೆ, ನಮ್ಮ ಮಕ್ಕಳಿಗೆ ಅತ್ಯುತ್ತಮವಾದ ಶಿಕ್ಷಣ ನೀಡಬೇಕೆಂಬ ಉದ್ದೇಶದಿಂದ ಆರಂಭಗೊಂಡ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ನಿಜವಾಗಿಯೂ ಈಗ ರಾಜ್ಯಾದ್ಯಂತ ಲಕ್ಷಾಂತರ ಸಾಧಕರನ್ನು ಹೊರತಂದಿದೆ. ಲಕ್ಷಾಂತರ ಮಕ್ಕಳು ಇಲ್ಲಿ ಕಲಿಯುತ್ತಿದ್ದಾರೆ ಎಂದರು.

ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಮೊಟ್ಟ ಮೊದಲ ಬಾರಿಗೆ ಖಾಸಗಿ ರೂಪದಲ್ಲಿ ಅಗ್ರಿಕಲ್ಚರ್ ಸೈನ್ಸ್ ಅಂದರೆ ಕೃಷಿ ವಿಜ್ಞಾನ ಕಾಲೇಜನ್ನು ಆರಂಭಿಸಿದ್ದು, ಅದರ ಮೂಲಕ ನಿತ್ಯ ನಿರಂತರ ಕೃಷಿ ಸಂಶೋಧನೆಗಳು ಹೆಚ್ಚುವ ನಿಟ್ಟಿನಲ್ಲಿ ಕಾರ್ಯ ಮಾಡುತ್ತಿದೆ ಎಂದರು.

ಹಿಂದೆ 45 ವರ್ಷಗಳ ಹಿಂದೆ ಸ್ವಾಮಿ ವಿವೇಕಾನಂದರು ಬಡ ಭಾರತದ ಬಗ್ಗೆ ಅತ್ಯಂತ ವಿವರಣಾತ್ಮಕವಾಗಿ ಹೊಗಳಿದ್ದರು. ಅದು ಈಗ ಸಾಧನೆಯಾಗಿದೆ. ಬಡಭಾರತವಾಗಿದ್ದ ನಮ್ಮ ದೇಶ ಇಂದು ವಿಶ್ವದಲ್ಲೇ ನಾಲ್ಕನೇ ಪ್ರಮುಖ ರಾಷ್ಟವಾಗಿರುವುದು ನಮ್ಮೆಲ್ಲರ ಹಿರಿಮೆಯ ಸಂಗತಿ. ತಾಯಿ ಹಾಗೂ ಹೆಣ್ಣು ಮಕ್ಕಳಿಗೆ ಗೌರವ ಕೊಡುವ ಭಾರತ ಇಡೀ ವಿಶ್ವದಲ್ಲೇ ಎಲ್ಲ ದೇಶಗಳಿಗೂ ಮಾದರಿಯಾಗಿದೆ ಎಂದರು.

ಈ ಕಾರ್ಯಕ್ರಮದಲ್ಲಿ ವಿವಿಧ ಗಣ್ಯರನ್ನು ಸನ್ಮಾನಿಸಿದ್ದು, ಕಾರಣ ಅವರ ಸಾಧನೆಯಾಗಿದ್ದರೂ ಸಹ ಅದನ್ನು ನೋಡುವ ಮಕ್ಕಳು ಮುಂದೊಂದು ದಿನ ನಾನು ಅಂತಹ ಸಾಧನೆಗೆ ಮಾಡಬೇಕೆಂದು ಯೋಚಿಸುವಂತಹ ಮನೋಭಾವ ಬೆಳೆಯಬೇಕು ಆ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳನ್ನು ಪ್ರತಿವರ್ಷ ಭಿನ್ನ ವಿಭಿನ್ನವಾಗಿ ಮಾಡುತ್ತಿದ್ದೇವೆ ಎಂದರು.

ಇದೇ ಮೊಟ್ಟ ಮೊದಲ ಬಾರಿಗೆ ತೀರ್ಥಹಳ್ಳಿ ತಾಲೂಕಿನ ಆರಗದಲ್ಲಿ ನಡೆದ ಪುರಂದರ ದಾಸರ ಕೀರ್ತನೋತ್ಸವ ಸಮಾರಂಭ ನಿಜಕ್ಕೂ ಅತ್ಯಂತ ಪ್ರಶಂಸನೀಯವಾಗಿದ್ದು, ವಿಶೇಷ ಪುರಂದರದಾಸರ ನಿಮ್ಮ ಸ್ಥಳದಲ್ಲಿ ಅಲ್ಲಿನ ಸ್ಥಳೀಯರು ಸೇರಿದಂತೆ ನಾಡಿನ ಪ್ರಮುಖರು ಪಾಲ್ಗೊಂಡು ನಿಜವಾಗಿಯೂ ಬೆಳಗ್ಗೆಯಿಂದ ಸಂಜೆಯವರೆಗೂ ಅದ್ಭುತ ಕಾರ್ಯಕ್ರಮನ್ನು ಪ್ರಶಂಶಿಸಿದರು. ನಾನು ಸಹ ಆ ಸ್ಥಳಕ್ಕೆ ಭೇಟಿ ಮಾಡಿ ಪುನೀತನಾದೆ. ಅಂತೆಯೇ ಅದು ನನಗೆ ಅತ್ಯಂತ ಖುಷಿ ನೀಡಿದ ಸಂಗತಿ ಎಂದರೆ ತಪ್ಪಾಗಲಿಕ್ಕಿಲ್ಲ. ಅಲ್ಲಿ ಪುರಂದರದಾಸರ ಪ್ರಾಧಿಕಾರವನ್ನು ರಚಿಸಬೇಕು ಎಂದು ಹೇಳಿದರು.

ಯಾರೇ ಆಗಲಿ ಸಮಾಜದ ಒಂದು ಮಟ್ಟದಲ್ಲಿ ಗುರುತಿಸಿಕೊಳ್ಳುವ ಜೊತೆಗೆ ಶಿಕ್ಷಣ, ಆರೋಗ್ಯ ಹಾಗೂ ಗ್ರಾಮೀಣ ಭಾಗದ ಮೂಲಭೂತ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ದಿವ್ಯ ಉಪಸ್ಥಿತಿ ವಹಿಸಿದ್ದ,ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿಯವರು ಪ್ರಾಸ್ತಾವಿಕವಾಗಿ ಮಾತನಾಡಿ, ಶಿವಮೊಗ್ಗ ಶಾಖಾ ಮಠ ಹಾಗೂ ಶಿಕ್ಷಣ ಸಂಸ್ಥೆಯ ಬಗ್ಗೆ ವಿವರಿಸಿದರು.

ಗೋಸಾಯಿ ಮಠದ ಪೂಜ್ಯ ಶ್ರೀ ಮಂಜುನಾಥಸ್ವಾಮೀಜಿ, ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ರಮೇಶ್ ಹೆಗಡೆ,ಮಾಜಿ ಶಾಸಕ, ಕೆ. ಬಿ.ಪ್ರಸನ್ನಕುಮಾರ್ ಇನ್ನೂ ಮುಂತಾದವರು ಉಪಸ್ಥಿತರಿದ್ದರು.

# "ವಿಶ್ವಮಾನ್ಯ ಕನ್ನಡಿಗ" ಅಂತರಾಷ್ಟ್ರೀಯ ಪುರಸ್ಕಾರಕ್ಕೆ ಆಯ್ಕೆ

**ದಾವಣಗೆರೆ:** ಬೆಳಗಾವಿಯ ನಾಗರಮುನ್ನೋಳಿಯ ಕವಿತ್ತಕರ್ಮಮಣಿ ಪೌಂಡೇಶನ್ ವತಿಯಿಂದ 70ನೇ ವರ್ಷದ ಕರ್ನಾಟಕ ರಾಜ್ಯೋತ್ಸವದ ಪ್ರಯುಕ್ತ ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ಅಂತರಾಷ್ಟ್ರೀಯ ಮಟ್ಟದ "ವಿಶ್ವಮಾನ್ಯ ಕನ್ನಡಿಗ" ಪುರಸ್ಕಾರಕ್ಕೆ ಆಯ್ಕೆ ಮಾಡಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷರಾದ ಲಾಲಸಾಬ ಹೆಚ್. ಪೆಂಡಾರಿಯವರು ಶೆಣೈಯವರ ನಾಲ್ಕು ದಶಕಗಳ ಸಾಧನೆಗಳನ್ನು ಗುರುತಿಸಿ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ವಾಣಿಜ್ಯ ನಗರಿ ದಾವಣಗೆರೆಯನ್ನು ಸಾಂಸ್ಕೃತಿಕ ನಗರಿಯನ್ನಾಗಿ ಪರಿವರ್ತನೆ ಮಾಡಿದ ಕಲೆ, ಸಾಹಿತ್ಯ, ಸಂಗೀತ, ಸಂಸ್ಕೃತಿ, ಶಿಕ್ಷಣ, ಕನ್ನಡ ಭಾಷೆ ನೆಲ-ಜಲ ಕ್ಷೇತ್ರಗಳಲ್ಲಿ ಗಣನೀಯ ಸೇವೆ, ಸಾಧನೆಯ ಜೊತೆಗೆ ಪ್ರಾಥಮಿಕ ಶಾಲೆಗೆ ಸೀಮಿತವಾದ ಶೆಣೈಯವರು ಸಂಸ್ಕೃತಿಯ ಪರಿಜ್ಞಾನಗಳನ್ನು ಬೆಳೆಸಿದ ಶೆಣೈಯವರಿಗೆ ಈ ರಾಷ್ಟ್ರಪ್ರಶಸ್ತಿ ಘೋಷಿಲಾಗಿದೆ ಎಂದು ಕವಿತ್ತಕರ್ಮಮಣಿ ಪೌಂಡೇಶನ್ ಸಮಿತಿಯವರು ವ್ಯಕ್ತಪಡಿಸಿದ್ದಾರೆ.

ಕಲಾಕುಂಚ, ಯಕ್ಷರಂಗ, ಸಿನಿಮಾಸಿರಿ, ಬಿಚ್ಕತ್ತಿ ಕುಟುಂಬ, ಶ್ರೀ ಗಾಯಿತ್ರಿ ಪರಿವಾರ, ಕರ್ನಾಟಕ ಸಗಮ ಸಂಗೀತ ಪರಿಷತ್, ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನ, ಸೇರಿದಂತೆ ವಿವಿಧ ಸಂಘಟನೆಗಳ ಸರ್ವ ಸದಸ್ಯರು, ಪದಾಧಿಕಾರಿಗಳು ಅಭಿಮಾನದಿಂದ ಅಭಿನಂದನೆ ಸಲ್ಲಿಸಿದ್ದಾರೆ.

# ವಿಶ್ವವಿದ್ಯಾಲಯದಲ್ಲಿ ಕ್ಯಾಂಪಸ್ ಪ್ಲೇಸ್‌ಮೆಂಟ್ ಡ್ರೈವ್ ಆಯೋಜನೆ

**ಗದಗ:** ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ನೈಪುಣ್ಯ ಕೇಂದ್ರ (ಪ್ಲೇಸ್‌ಮೆಂಟ್ ಸೆಲ್) ವತಿಯಿಂದ ಪ್ರತಿವರ್ಷದಂತೆ ಈ ವರ್ಷವೂ ವಿಶ್ವವಿದ್ಯಾಲಯದಲ್ಲಿ ವಿವಿಧ ಸ್ನಾತಕೋತ್ತರ ಪದವಿಗಳನ್ನು ಮುಗಿಸಿದ ವಿದ್ಯಾರ್ಥಿಗಳಿಗಾಗಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ.

ಈ ಕ್ಯಾಂಪಸ್ ಪ್ಲೇಸ್‌ಮೆಂಟ್ ಡ್ರೈವ್ ಅನ್ನು ನವೆಂಬರ್ 7, 2025ರಂದು ವಿಶ್ವವಿದ್ಯಾಲಯದ ಕ್ಯಾಂಪಸ್ಸಿನಲ್ಲಿ ಆಯೋಜಿಸಲಾಗಿದ್ದು, ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಶ್ವವಿದ್ಯಾಲಯದ ಕುಲಪತಿಗಳಾದ (ಪ್ರ) ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಅವರು ವಹಿಸಲಿದ್ದಾರೆ.

ಹಣಕಾಸು ಅಧಿಕಾರಿ ಶ್ರೀ ಪ್ರಶಾಂತ್ ಜೆ.ಸಿ., ವಿಶೇಷಾಧಿಕಾರಿ (ಶೈಕ್ಷಣಿಕ) ಶ್ರೀ ಎಂ.ಬಿ. ಚನ್ನಪ್ಪಗೌಡರ ಹಾಗೂ ಪ್ಲೇಸ್‌ಮೆಂಟ್ ಅಧಿಕಾರಿ ಶ್ರೀಮತಿ ಸಿತಾರಾ ಎಂ. ರಾಯಭಾಗಿ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ದೇಶದ ಪ್ರಮುಖ 25ಕ್ಕೂ ಹೆಚ್ಚು ಖ್ಯಾತ ಕಂಪನಿಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲಿವೆ. ಅವುಗಳಲ್ಲಿ  ಟೆಕ್ ಮಹೀಂದ್ರಾ, ಟಾಟಾ ಕ್ಯಾಪಿಟಲ್, ಅಮ್ವೇ ಗ್ಲೋಬಲ್ ಸರ್ವಿಸಸ್, ಕ್ರೆಡಿಟ್ ಆಕ್ಸೆಸ್ ಗ್ರಾಮೀಣ್, ಅಜೀಂ ಪ್ರೇಮ್ಜಿ ಫೌಂಡೇಶನ್, ಸ್ಕೂರ್ ಚಾಕೊಲೇಟ್, ಸಿಂಗೆಂಟಾ ಫೌಂಡೇಶನ್, ಇಂಡಿಯಾ ಲಿಟರಸಿ ಪ್ರಾಜೆಕ್ಟ್, ಟೀಂಲೀಸ್ ಸರ್ವಿಸಸ್, ಗ್ರಾಸ್ರೂಟ್ಸ್ ರಿಸರ್ಚ್ ಅಂಡ್ ಅಡ್ವಕಸಿ ಮೂವ್ಮೆಂಟ್ (ಉಖಂಂಬ), ಕರಿಬಸವೇಶ್ವರ ಅಗ್ರಿ ಇಂಡಿಯಾ ಲಿಮಿಟೆಡ್, ಪ್ಲಾನೆಟ್ ಪಿಸಿಐ ಇನ್ಫೋಟೆಕ್ ಮುಂತಾದವು ಸೇರಿವೆ.

ಈ ಕಾರ್ಯಕ್ರಮದ ಉದ್ದೇಶವು ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳೊಂದಿಗೆ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ವೃತ್ತಿ ಮಾರ್ಗದರ್ಶನವನ್ನು ಒದಗಿಸುವುದಾಗಿದೆ ಎಂದು ವಿಶ್ವವಿದ್ಯಾಲಯದ ಕುಲಪತಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯು.ಆರ್.ಡಬ್ಲ್ಯೂ ಮತ್ತು ವಿ.ಆರ್.ಡಬ್ಲ್ಯೂ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ :** ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯು ಗ್ರಾಮೀಣ ಪುನರ್ವಸತಿ ಯೋಜನೆಯಡಿ ಶಿವಮೊಗ್ಗ ಮಹಾನಗರ ಪಾಲಿಕೆಯಲ್ಲಿ ಯು. ಆರ್.ಡಬ್ಲ್ಯೂ ಹಾಗೂ ಹೊಸಹಳ್ಳಿಯಲ್ಲಿ ವಿ.ಆರ್.ಡಬ್ಲ್ಯೂ, ಭದ್ರಾವತಿ ತಾಲೂಕಿನ ಗುಡುಮಘಟ್ಟ, ಹನುಮಂತಾಪುರ, ತಡಸ, ಸನ್ಯಾಸಿಕೊಡಮಗ್ಗಿ, ಸಿಮಗನಮನೆ, ಕಲ್ಲಹಳ್ಳಿ, ನಾಗತಿಬೆಳಗಲು, ತೀರ್ಥಹಳ್ಳಿ ತಾಲ್ಲೂಕಿನ ನೊಣಬೂರು, ಹದ್ದೂರು, ಹಣಗೆರೆ, ಮೇಲಿನ ಕುರುವಳ್ಳಿ, ಬಾಂಡ್ಯ, ಕುಕ್ಕೆ, ತ್ರಯಂಬಕಪುರ ಮತ್ತು ಕನ್ನಂಗಿ, ಶಿಕಾರಿಪುರ ತಾಲೂಕಿನ ಹೋತನಕಟ್ಟೆ, ಮುಡುಬ ಸಿದ್ದಾಪುರ, ಸಾಗರ ತಾಲೂಕಿನ ಅರಳಗೋಡು, ಯಡೆಹಳ್ಳಿ, ಆಚಾಪುರ ಹಾಗೂ ಹೊಸನಗರ ತಾಲೂಕಿನ ಮೇಲಿನ ಬೇಸಿಗೆ, ಅರಮನೆಕೊಪ್ಪ ಗ್ರಾಮ ಪಂಚಾಯ್ತಿಗಳಲ್ಲಿ ವಿ.ಆರ್.ಡಬ್ಲ್ಯೂ ಹುದ್ದೆಯು ಖಾಲಿಯಿದ್ದು, ಆಯಾ ಗ್ರಾ.ಪಂ/ಹತ್ತಿರದ ಗ್ರಾಮ ಪಂಚಾಯಿತಿಗಳಲ್ಲಿ ವಾಸವಿರುವ 18 ರಿಂದ 45 ವಯೋಮಿತಿಯೊಳಗಿನ 10 ತರಗತಿ ಪಾಸಾಗಿರುವ ಅರ್ಹ ವಿಕಲಚೇತನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ನಿಗದಿತ ಅರ್ಜಿ ನಮೂನೆಯನ್ನು ಆಯಾ ತಾಲ್ಲೂಕು ಪಂಚಾಯ್ತಿ ಕಚೇರಿಯಲ್ಲಿ ಎಂ.ಆರ್.ಡಬ್ಲ್ಯೂ ಗಳಿಂದ ಪಡೆದು ಭರ್ತಿ ಮಾಡಿದ ಅರ್ಜಿಯೊಂದಿಗೆ ಸೂಕ್ತ ದಾಖಲಾತಿಗಳನ್ನು ಲಗತ್ತಿಸಿ ಡಿ.05 ರೊಳಗೆ ಸಲ್ಲಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಎಂ.ಆರ್. ಡಬ್ಲ್ಯೂ, ಮಲ್ಲಿಕಾರ್ಜುನ್ -9980150110, ಭದ್ರಾವತಿ -ದಿನೇಶ್-7899137243, ತೀರ್ಥಹಳ್ಳಿ-ದಿವಾಕರ್-9480767638, ಶಿಕಾರಿಪುರ-ಹುಚ್ಚರಾಯಪ್ಪ-9741161346, ರವಿಕುಮಾರ್-ಹೊಸನಗರ-9731922693, ಸಾಗರ-ಶ್ಯಾಮ್‌ಸುಂದರ್-9535247757 ಇವರುಗಳನ್ನು ಸಂಪರ್ಕಿಸುವುದು.

# ಜಿಲ್ಲೆಯಲ್ಲಿ ನವೆಂಬರ್‌ಮಾಹೆಯಾದ್ಯಂತ ದತ್ತು ಮಾಸಾಚರಣೆ

**ಬಳ್ಳಾರಿ:** ದತ್ತು ಮಾಸಾಚರಣೆ-2025 ಅಂಗವಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ವಿಶೇಷ ದತ್ತು ಕೇಂದ್ರದ ವತಿಯಿಂದ 'Adoption of Children having special need' ಎಂಬ ಈ ಬಾರಿಯ ಘೋಷವಾಕ್ಯದಡಿ ಜಿಲ್ಲೆಯಲ್ಲಿ ನವೆಂಬರ್ ಮಾಹೆಯಾದ್ಯಂತ ವಿಶೇಷಚೇತನ ಮಕ್ಕಳ ದತ್ತು ಪ್ರಕ್ರಿಯೆ ಮಾಸಾಚರಣೆ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಕಾನೂನು ಬದ್ಧ ದತ್ತು ಪ್ರಕ್ರಿಯೆಯ ಬಗ್ಗೆ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಭದ್ರಾದೇವಿ ಅವರು ತಿಳಿಸಿದ್ದಾರೆ.ಅಕ್ರಮವಾಗಿ ದತ್ತು ಪಡೆಯುವುದು ಸಮಸ್ಯೆಗೆ ಆಹ್ವಾನಿಸಿಕೊಂಡಂತೆ. ಕದ್ದ ಮಕ್ಕಳು, ನರ್ಸಿಂಗ್ ಹೋಮ್ ಗಳಿಂದ ಮಕ್ಕಳನ್ನು ದತ್ತು ಪಡೆಯುವುದು ಅಕ್ರಮ ಕಾನೂನಿನಡಿ ಅಪರಾಧ ಮತ್ತು ಶಿಕ್ಷೆ ಇದೆ. ಹಾಗಾಗಿ ಕಾನೂನು ಬದ್ಧವಾಗಿ ಮಕ್ಕಳನ್ನು ದತ್ತು ಪಡೆಯಲು ಅವಕಾಶವಿದೆ. ಇದರಿಂದ ದತ್ತು ಮಕ್ಕಳಿಗೂ ಹಾಗೂ ದತ್ತು ಪಡೆದವರಿಗೂ ಕಾನೂನುಬದ್ಧವಾಗಿ ಹಲವು ಹಕ್ಕುಗಳು ದಕ್ಕುತ್ತವೆ. ಜೈವಿಕವಾಗಿ ಪಡೆದ ಮಕ್ಕಳಿಗೆ ಸಿಗುವ ಎಲ್ಲಾ ಹಕ್ಕುಗಳನ್ನು ದತ್ತು ಮಕ್ಕಳು ಪಡೆಯಲು ಅರ್ಹರಿರುತ್ತಾರೆ ಎಂದು ಹೇಳಿದ್ದಾರೆ.

# ಗದಗದಲ್ಲಿ ದಾಸ ಶ್ರೇಷ್ಠ ಕನಕದಾಸರ ಜಯಂತಿ ಅದ್ದೂರಿ ಆಚರಣೆಗೆ ಸೂಚನೆ

**ಗದಗ:** ದಾಸಶ್ರೇಷ್ಠ ಕನಕದಾಸರ ಜಯಂತಿ ಆಚರಣೆಯನ್ನು ಅರ್ಥಪೂರ್ಣವಾಗಿ ಹಾಗೂ ಗೌರವಯುತವಾಗಿ ಅದ್ದೂರಿಯಾಗಿ ಗದಗ ಜಿಲ್ಲಾಡಳಿತ ಸಜ್ಜಾಗಿದೆ. ಈ ಕುರಿತು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಇಂದು (ಅ.30) ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಸಭೆಯ ಆರಂಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಅವರು, ಸಭಾಧ್ಯಕ್ಷರಾದ ಅಪರ ಜಿಲ್ಲಾಧಿಕಾರಿಗಳು, ಹಾಗೂ ಸಭೆಗೆ ಆಗಮಿಸಿದ ಸಮಾಜದ ಮುಖಂಡರನ್ನು ಸ್ವಾಗತಿಸಿ, ಕನಕದಾಸರ ಜಯಂತಿ ಕಾರ್ಯಕ್ರಮದ ಯಶಸ್ವಿ ನಿರ್ವಹಣೆ ಕುರಿತಾಗಿ ಸಲಹೆಅಭಿಪ್ರಾಯ ನೀಡುವಂತೆ ವಿನಂತಿಸಿದರು.

ಸಭೆಯ ಅಧ್ಯಕ್ಷತೆಯನ್ನು ವಹಿಸಿದ ಅಪರ ಜಿಲ್ಲಾಧಿಕಾರಿಗಳ ಡಾ. ದುರಗೇಶ್ ಕೆ ಆರ್ ಅವರು ಮಾತನಾಡಿ, ನವೆಂಬರ್ 8, 2025 ರಂದು ರಾಜ್ಯ ಸರ್ಕಾರದ ವತಿಯಿಂದ ಜಿಲ್ಲೆಯಲ್ಲಿ ಕನಕದಾಸರ ಜಯಂತಿಯನ್ನು ಆಚರಿಸಲಾಗುವುದಾಗಿ ತಿಳಿಸಿ, ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ, ಸಾಂಸ್ಕೃತಿಕ ಸಡಗರದಿಂದ ಆಯೋಜಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ದಿನಾಂಕ 08.11.2025 ರಂದು ಬೆಳಿಗ್ಗೆ



9 ಗಂಟೆಗೆ ಹಾತಲಗೇರಿ ನಾಕಾದಲ್ಲಿರುವ ಕನಕದಾಸರ ವೃತ್ತದಲ್ಲಿ ಪುತ್ಥಳಿಗೆ ಬೆಳಿಗ್ಗೆ ಪುಷ್ಪಾರ್ಚನೆ ಮಾಡುವ ಮೂಲಕ ಜಯಂತಿ ಕಾರ್ಯಕ್ರಮ ಪ್ರಾರಂಭವಾಗಲಿದೆ. ಕಾರ್ಯಕ್ರಮದ ಅಂಗವಾಗಿ ಹೋರ್ಡಿಂಗ್ಸ್, ಬ್ಯಾನರ್, ಆಮಂತ್ರಣ ಪತ್ರಿಕೆ ಮತ್ತು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಿಗೆ ಸೂಚಿಸಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ಎಸ್ ತಂಗಡಗಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು ಎಂದು ಹೇಳಿದರು.

ಸಭೆಯ ಅಂತ್ಯದಲ್ಲಿ ಸಮಾಜದ ಮುಖಂಡರು, ಈ ಜಯಂತಿಯ ಯಶಸ್ವಿಗಾಗಿ ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ಸಭೆ ವಂದನಾರ್ಪಣೆಯೊಂದಿಗೆ ಮುಕ್ತಾಯವಾಯಿತು.ಸಭೆಯಲ್ಲಿ ಕನಕದಾಸರ ಕುರಿತು ಉಪನ್ಯಾಸಕರನ್ನು ಆಯ್ಕೆ ಮಾಡುವದು, ಶಿಷ್ಟಾಚಾರದ ಪ್ರಕಾರ ಆಮಂತ್ರಣ ತಯಾರಿಸಿ ಅತಿಥಿಗಳನ್ನು ಆಹ್ವಾನಿಸುವದು. ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಪಾಲನೆ ಕುರಿತಂತೆ ಚರ್ಚಿಸಲಾಯಿತು.

ಸಭೆಯಲ್ಲಿ ಸಮಾಜದ ಮುಖಂಡರು, ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ದಾಸ ಶ್ರೇಷ್ಠ ಸಂತ ಕನಕದಾಸರ ಜಯಂತಿ-2025

**ಗದಗ :** ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ದಾಸ ಶ್ರೇಷ್ಠ ಸಂತ ಕನಕದಾಸರ ಜಯಂತಿ ಕಾರ್ಯಕ್ರಮವನ್ನು ನವೆಂಬರ್ 8 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಹಾತಲಗೇರಿ ನಾಕಾದ ಕನಕದಾಸರ ವೃತ್ತದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ಎಸ್ ತಂಗಡಗಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸಲಿದ್ದಾರೆ.ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಶಾಸಕ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಉಪಾಧ್ಯಕ್ಷ ಡಿ.ಆರ್.ಪಾಟೀಲ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಶ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾದಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು.

# ಕಲಾಕುಂಚ ಸಿದ್ದವೀರಪ್ಪ ಬಡಾವಣೆಯ ಶಾಖೆಯಿಂದ ನ. 14 ರಂದು ಮಕ್ಕಳ ದಿನಾಚರಣೆ ಸಮಾರಂಭ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ನಗರದ ಸಿದ್ದವೀರಪ್ಪ ಬಡಾವಣೆಯ ಶಾಖೆಯ ಆಶ್ರಯದಲ್ಲಿ ನವೆಂಬರ್ 14 ರಂದು ಶುಕ್ರವಾರ ಸಂಜೆ 4 ಗಂಟೆಗೆ ಸಿದ್ದವೀರಪ್ಪ ಬಡಾವಣೆಯ 4ನೇ ತಿರುವಿನಲ್ಲಿರುವ ಶ್ರೀ ಯಗಟಿ ಮಲ್ಲಿಕಾರ್ಜುನ ನಿಲಯದ ಸಭಾಂಗಣದಲ್ಲಿ "ಮಕ್ಕಳ ದಿನಾಚರಣೆ" ಪ್ರಯಕ್ತ ಉಚಿತವಾಗಿ ಮಕ್ಕಳಿಗೆ ಆಟೋಟ ಸ್ಪರ್ಧೆ ಸಾರ್ವಜನಿಕವಾಗಿ ಮಹಿಳೆಯರಿಗೆ,
ಪುರುಷರಿಗೆ ವಿವಿಧ ರಸರಂಜನೆ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಿದ್ದವೀರಪ್ಪ ಬಡಾವಣೆಯ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕಲ್ಲೇಶ್‌ರವರು ತಿಳಿಸಿದ್ದಾರೆ.
ಈ ಸಮಾರಂಭದ ಜೊತೆಯಲ್ಲಿ ಕಲಾಕುಂಚ ಸಿದ್ದವೀರಪ್ಪ ಬಡಾವಣೆಯ ಶಾಖೆಯ ನೂತನ ಪದಾಧಿಕಾರಿಗಳ ಅಯ್ಕೆಯ ಸರ್ವ ಸದಸ್ಯರ ಮಹಾಸಭೆ ಇದ್ದು ಕಲಾಕುಂಚದ ಸರ್ವ ಸದಸ್ಯರು, ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕಾಗಿ ಕಲಾಕುಂಚ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ವಿನಂತಿಸಿದ್ದಾರೆ.
ಉಚಿತ ಸ್ಪರ್ಧೆಗಳಿಗೆ ರಸರಂಜನೆ ಸಮಾರಂಭಕ್ಕೆ ಭಾಗವಹಿಸುವವರು 9844691391, 9740549009 ಈ ಸನೀಹವಾಣಿಗಳಿಗೆ ಸಂಪರ್ಕಿಸಿ ಹೆಸರು ನೊಂದಾಯಿಸಬಹುದು ಎಂದು ಕಲಾಕುಂಚ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ಪ್ರಕಟಿಸಿದ್ದಾರೆ.

# ಗುತ್ತಿಗೆ ವೈದ್ಯರು, ತಜ್ಞ ವೈದ್ಯರ ನೇಮಕಾತಿಗಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ದಾವಣಗೆರೆ ಜಿಲ್ಲೆಯಲ್ಲಿ ಖಾಲಿ ಇರುವ ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳು, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಮತ್ತು ತಜ್ಞ ವೈದ್ಯಾಧಿಕಾರಿಗಳ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿ ಸೋಮವಾರ ನೇರ ಸಂದರ್ಶನದಲ್ಲಿ ರೋಸ್ಟರ್ ಕಂ ಮೆರಿಟ್ ಮೂಲಕ ಆಯ್ಕೆ ಮಾಡಲಾಗುವುದು. ಆಸಕ್ತ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಶ್ರೀರಾಮನಗರ ರಸ್ತೆ, ಎಸ್.ಎಸ್ ಹಾಸ್ಪಿಟಲ್ ಹತ್ತಿರ, ಎನ್.ಸಿ.ಸಿ ಕ್ಯಾಂಪ್ ಪಕ್ಕ, ದಾವಣಗೆರೆ-577005 ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಯನ್ನು ಕಚೇರಿಯ ನಾಮಫಲಕದಲ್ಲಿ ಪ್ರಚುರ ಪಡಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕು.ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ.

# ಕಡ್ಡಾಯವಾಗಿ ಆಂತರಿಕಾ ದೂರು ನಿವಾರಣಾ ಸಮಿತಿ ರಚಿಸಿ




**ಹಾಸನ :** ಸರ್ಕಾರಿ ಕಚೇರಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿ ಮಹಿಳೆಯರು ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಲೈಂಗಿಕ ದೌರ್ಜನ್ಯ ತಡೆಯಲುಸುಪ್ರೀಂ ಕೋರ್ಟ್ ಆದೇಶದಂತೆಕಡ್ಡಾಯವಾಗಿ ಆಂತರಿಕಾ ದೂರು ನಿವಾರಣಾ ಸಮಿತಿ ರಚಿಸುವಂತೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ॥ ನಾಗಲಕ್ಷ್ಮಿ ಚೌಧರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿಂದು ಮಹಿಳಾ ಸ್ಪಂದನಾ ಮತ್ತು ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಸ್ವೀಕೃತವಾದ ದೂರುಗಳನ್ನು ಪರಿಹರಿಸಲು ಸೂಕ್ಷ್ಮವಾಗಿ ಗಮನಿಸಿ ಮುಲಾಜಿಲ್ಲದೆ ಸೂಕ್ತವಾದ ನಿರ್ಧಾರ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಪ್ರವಾಸದ ಸಂದರ್ಭದಲ್ಲಿ ಸಂಪೂರ್ಣ ಸಹಕಾರ ನೀಡಿದ್ದಾರೆ ಎಂದುಜಿಲ್ಲಾಡಳಿತಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.ಸಂಘ ಸಂಸ್ಥೆಗಳು ಕಾಫಿ ತೋಟಗಳಲ್ಲಿ ಕೆಲಸ ಮಾಡುವ ಮಹಿಳೆಯರ ಸುರಕ್ಷತೆಗಾಗಿ ಸಮಿತಿ ರಚನೆ ಮಾಡಿದ್ದರಾ ಮತ್ತು ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಯುತ್ತಿದೆಯಾ ಎಂದು ಪರಿಶೀಲಿಸಬೇಕು ಎಂದು ಕಾರ್ಮಿಕ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ವರ್ಷದಲ್ಲಿ279ಕಾಣೆಯಾದ 'ಮಹಿಳೆಯರು ಮತ್ತು ಹೆಣ್ಣುಮಕ್ಕಳ ಪ್ರಕರಣಗಳು ಪೊಲೀಸ್ ಇಲಾಖೆಯಲ್ಲಿ ದಾಖಲಾಗಿದ್ದು,236 ಪ್ರಕರಣ ಪತ್ತೆ ಮಾಡಲಾಗಿದೆ. ಉಳಿದ 43 ಪ್ರಕರಣಗಳನ್ನು ಶೀಘ್ರವಾಗಿ ಪತ್ತೆ ಹಚ್ಚಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಇತ್ತೀಚೆಗೆ ವಿವಾಹ ವಿಚ್ಛೇಧನ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮದುವೆಗೆ ಮುನ್ನ ಹುಡುಗ-ಹುಡುಗಿಗೆ ಸಮಾಲೋಚನೆ ನಡೆಸುವ ನಿಟ್ಟಿನಲ್ಲಿ ರಾಷ್ಟ್ರೀಯ ಮಹಿಳಾ ಆಯೋಗದಿಂದ ನನ್ನ-ನಿನ್ನ ಕನಸು ಎಂಬ ಕಾರ್ಯಕ್ರಮವನ್ನು ಜಾರಿಗೆ ತರಲಾಗುತ್ತಿದೆ. ರಾಜ್ಯದಲ್ಲಿ ಈ ಕಾರ್ಯಕ್ರಮ ಇನ್ನೂ ಯಾವ ಜಿಲ್ಲೆಯಲ್ಲಿ ಆರಂಭಿಸಿಲ್ಲ, ಹಾಸನ ಜಿಲ್ಲೆಯಿಂದಲೇ ಮೊದಲು ಪ್ರಾರಂಭವಾಗಲಿ ಎಂದು ತಿಳಿಸಿದರು.

ಇಂದಿನ ದಿನಗಳಲ್ಲಿ ಯುವಕ ಯುವತಿಯರು ಮದುವೆಯಾಗಿ ಒಂದು ವರ್ಷದೊಳಗೆ ವಿಚ್ಛೇದನ ತೆಗೆದುಕೊಳ್ಳುವ ಸ್ಥಿತಿಗೆ ತಲುಪುತ್ತಿದ್ದಾರೆ. ಅವರಲ್ಲಿ ತಾಳ್ಮೆ ಕಡಿಮೆಯಿರುವುದು ಕಂಡುಬರುತ್ತಿದೆ. ಇದನ್ನು ತಪ್ಪಿಸಿ ಭದ್ರ ಬುನಾದಿ ಹಾಕುವ ನಿಟ್ಟಿನಲ್ಲಿ ಅರಿವು ಮೂಡಿಸಬೇಕು ಆ ಕಾರಣಕ್ಕೆ ಮದುವೆಯ ಪೂರ್ವದಲ್ಲಿ ಯುವಕ ಯುವತಿಯರ ತಂದೆ ತಾಯಿಗಳು ಕುಳಿತು ಚರ್ಚೆ ಮಾಡಿ ಎರಡು ಕುಟುಂಬಗಳು ಮದುವೆ ಒಪ್ಪಂದ ಮಾಡಿಕೊಂಡು ಮುಂದುವರೆಯಬೇಕು ಆಗ ಸಮಾಜದಲ್ಲಿ ಸಂಸ್ಕಾರಯುತವಾಗಿ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಅಸಂಘಟಿತ ಕಾರ್ಮಿಕರು ದೂರು ನೀಡಲು ಸಹಕಾರಿಯಾಗುವಂತೆ ಜಿಲ್ಲಾ ಮಟ್ಟದ ದೂರು ನಿವಾರಣಾ ಸಮಿತಿಯ ಕುರಿತುಜಿಲ್ಲಾಧಿಕಾರಿ ಕಚೇರಿ ನಾಮಫಲಕದಲ್ಲಿ ಅಳವಡಿಸಬೇಕು ಎಂದು ತಿಳಿಸಿದರು.ನಿನ್ನೆ ಭೇಟಿ ನೀಡಿದ ಸಂದರ್ಭದಲ್ಲಿ ಗಮನಿಸಿದ್ದು, ಬಿ.ಸಿ.ಎಂ.ಹಾಸ್ಟೆಲ್‌ಗಳಲ್ಲಿ ಗೊಡೆ ಕುಸಿಯುವ ಹಂತದಲ್ಲಿದೆ ಇಂತಹವುಗಳ ಬಗ್ಗೆ ಗಮನಹರಿಸಿ ಮಕ್ಕಳಿಗೆ ತೊಂದರೆಯಾಗದಂತೆ ಕ್ರಮವಹಿಸಿ ಎಂದರಲ್ಲದೆ, ಹೆಣ್ಣು ಮಕ್ಕಳ ರಕ್ಷಣೆಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಪ್ರತಿ ಪೊಲೀಸ್ ಠಾಣೆಯಲ್ಲಿ ಮಹಿಳಾ ಸ್ಪಂದನ ಕಾರ್ಯಕ್ರಮ ನಡೆಯುತ್ತದೆ. ಅಲ್ಲಿ ಸ್ಪಂದಿಸದಿದ್ದರೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರ ನಡೆಯುವ ಜನ ಸ್ಪಂದನ ಕಾರ್ಯಕ್ರಮದಲ್ಲಿ ದೂರು ಸಲ್ಲಿಸಿ ಎಂದು ತಿಳಿಸಿದರು.

ಶಾಲಾ, ಕಾಲೇಜುಗಳಲ್ಲಿ ಮಕ್ಕಳಿಗೆ ಬ್ಯಾಡ್ ಮತ್ತು ಗುಡ್ ಟಚ್‌ಬಗ್ಗೆ ಜಾಗೃತಿ ಮೂಡಿಸಿ ಎಂದರಲ್ಲದೆ,ತುರ್ತು ಸಹಾಯವಾಣಿ ಸಂಖ್ಯೆಯನ್ನು ಫಲಕಗಳಲ್ಲಿ ಅಳವಡಿಸುವಂತೆ ಸೂಚನೆ ನೀಡಿದರು.

ಶಾಲಾ ಕಾಲೇಜುಗಳ ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಬಸ್ ನಿಲುಗಡೆಗೆ ಅವಕಾಶ ಕಲ್ಪಿಸಲು ಕ್ರಮವಹಿಸಲು ಕೆ.ಎಸ್. ಆರ್.ಟಿ.ಸಿ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್.ಪೂರ್ಣಿಮಾ, ಅಪರ ಜಿಲ್ಲಾಧಿಕಾರಿ ಮಂಜುನಾಥ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವೆಂಕಟೇಶ್ ನಾಯ್ಡು,ಮಾಹಿಳಾ ಆಯೋಗದ ಕಾರ್ಯದರ್ಶಿ ರೂಪ ಉಪಸ್ಥಿತರಿದ್ದರು.ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ನ.13 ರಿಂದ ಅಗ್ನಿವೀರ್ ನೇಮಕಾತಿ ರ್‍ಯಾಲಿ

**ಶಿವಮೊಗ್ಗ :**ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ ಅಗ್ನಿಪಥ್ ಯೋಜನೆಯಡಿ ನ.13 ರಿಂದ 19 ರವರೆಗೆ ಬಳ್ಳಾರಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಅಗ್ನಿವೀರ್ ನೇಮಕಾತಿ ರ್‍ಯಾಲಿ ನಡೆಯಲಿದೆ.

ಈ ರ್‍ಯಾಲಿಗೆ ಜೂ. 30 ರಿಂದ ಜು.10 ರವರೆಗೆ ನಡೆದ ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಭಾಗವಹಿಸಬಹುದಾಗಿದ್ದು, ಪ್ರವೇಶ ಪರೀಕ್ಷೆಯ ಫಲಿತಾಂಶವನ್ನು www.joinindianarmy.nic.in ವೆಬ್‌ಸೈಟ್‌ನಲ್ಲಿ ವಿಕ್ಷಿಸಬಹುದೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರಾದ(ಪ್ರ) ಡಾ.ಸಿ.ಎ. ಹಿರೇಮಠಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಎಸ್‌ಎಂಸಿಎ ಸಂಸ್ಥೆಯಿಂದ ಸರ್ಕಾರಕ್ಕೆ ವಿಶೇಷ ಲಾಭಾಂಶ ಮೊತ್ತ 34.13 ಕೋಟಿ ರೂ. ನೀಡಿಕೆ


**ಬೆಂಗಳೂರು:** ಕರ್ನಾಟಕ ರಾಜ್ಯ ಸರ್ಕಾರದ ಏಕೈಕ ಜಾಹೀರಾತು ಸಂಸ್ಥೆಯಾದ ಮೆ॥ ಕರ್ನಾಟಕ ಸ್ಟೇಟ್ ಮಾರ್ಕೆಂಟಿಗ್ ಕಮ್ಯೂನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ (ಕೆಎಸ್‌ಎಂಸಿಎ) ಕಂಪನಿಯು ವಿಶೇಷ ಲಾಭಾಂಶದ ಮೊತ್ತ ರೂ.34.13 ಕೋಟಿಗಳನ್ನು ಇಂದು ಸರ್ಕಾರಕ್ಕೆ ನೀಡಿತು.

ಕಂಪನಿಯ ಪರವಾಗಿ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರಾದ

ಶ್ರೀ ಎಂ.ಬಿ. ಪಾಟೀಲ್ ಮತ್ತು ಕೆಎಸ್‌ಎಂಸಿಎ ಸಂಸ್ಥೆಯ ಅಧ್ಯಕ್ಷರು ಹಾಗೂ ಕಾರವಾರ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರೂ ಆದ ಶ್ರೀ ಸತೀಶ ಕೃಷ್ಣ ಸೈಲ್ ಅವರು ವಿಧಾನಸೌಧದಲ್ಲಿ ವಿಶೇಷ ಲಾಭಾಂಶದ ಚೆಕ್ ಅನ್ನು ಮಾನ್ಯ ಮುಖ್ಯಮಂತ್ರಿಗಳಾದ

ಶ್ರೀ ಸಿದ್ದರಾಮಯ್ಯ ರವರಿಗೆ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಮೊಹಮದ್ ಅತೀಕುಲ್ಲಾ ಶರೀಫ್ ಹಾಗೂ ಉಪ ಪ್ರಧಾನ ವ್ಯವಸ್ಥಾಪಕರಾದ ಶ್ರೀ ಪಿ.ಎಸ್. ನಂದೀಶರವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರಾದ ಶ್ರೀ ಎಂ.ಬಿ. ಪಾಟೀಲ್‌ರವರು ಮಾತನಾಡಿ ಸಂಸ್ಥೆಯು ಇದುವರೆಗೆ ಯಶಸ್ಸಿನ ಪಥದಲ್ಲಿ ಲಾಭದಾಯಕವಾಗಿ




ಮುನ್ನಡೆಯುತ್ತಿರುವುದು ಶ್ಲಾಘನೀಯ. ಆದರೆ, ಸಂಸ್ಥೆಯು ಈ ಹಿಂದೆ ನಿರ್ವಹಿಸಿಕೊಂಡು ಬಂದಿದ್ದ ಅಬಕಾರಿ ಭದ್ರತಾ ಚೀಟಿ ಮುದ್ರಣ ಮತ್ತು ಮಾರಾಟ ವ್ಯವಹಾರವು ಸಂಸ್ಥೆಯಿಂದ ಕೈಬಿಟ್ಟು ಹೋಗಿರುವುದರಿಂದ ಸಂಸ್ಥೆಯ ವಹಿವಾಟು ಮತ್ತು ಲಾಭದಾಯಕತೆ ಕಡಿಮೆಯಾಗಿದೆ. ಮಾನ್ಯ ಮುಖ್ಯಮಂತ್ರಿಗಳು ಈ ಅಬಕಾರಿ ಭದ್ರತಾ ಚೀಟಿ ಮುದ್ರಣ ಮತ್ತು ಮಾರಾಟ ವ್ಯವಹಾರವನ್ನು ಮತ್ತೆ ಕೆಎಸ್‌ಎಂಸಿಎ ಸಂಸ್ಥೆಗೆ ವಹಿಸಿಕೊಡಬೇಕೆಂದು ಹಾಗೂ ಸಂಸ್ಥೆಯ ಆರ್ಥಿಕಾಭಿವೃದ್ಧಿಗೆ ಬೆಂಬಲಿಸಬೇಕೆಂದು ಕೋರಿದರು.

ಕೆಎಸ್‌ಎಂಸಿಎ ಅಧ್ಯಕ್ಷರಾದ ಶ್ರೀ ಸತೀಶ ಕೃಷ್ಣ ಸೈಲ್‌ರವರು ಮಾತನಾಡಿ ಸರ್ಕಾರವು ಸಂಸ್ಥೆಗೆ ನೀಡಲಾಗಿರುವ 4ಜಿ ವಿನಾಯಿತಿಯಲ್ಲಿ ಹೆಚ್ಚುವರಿಯಾಗಿ ಡಿಜಿಟಲೈಜೇಶನ್ ಕಾರ್ಯ ಚಟುವಟಿಕೆಗಳನ್ನು ಸೇರ್ಪಡೆ ಮಾಡಲು ಹಾಗೂ ಸಂಸ್ಥೆಯ ಜಾಹೀರಾತು ಬಿಡುಗಡೆ ಬಾಕಿ ಮೊತ್ತವನ್ನು ಸಕಾಲದಲ್ಲಿ ಪಾವತಿ ಮಾಡಲು ಎಲ್ಲ ಇಲಾಖೆಗಳಿಗೆ ನಿರ್ದೇಶನ ನೀಡುವಂತೆ ಮನವಿ ಸಲ್ಲಿಸಲಾಗಿದ್ದು ಮಾನ್ಯ ಮುಖ್ಯಮಂತ್ರಿಗಳು ಇದನ್ನು ಪರಿಗಣಿಸಿ ಅನುಮೋದನೆ ನೀಡಬೇಕೆಂದು ವಿನಂತಿಸಿದರು.

## ನವೆಂಬರ್ 12ರಂದು ನಡೆಯಬೇಕಿದ್ದ ವಕೀಲರ ಕಾರ್ಯಕ್ರಮಗಳು ಮುಂದೂಡಿಕೆ

**ದಾವಣಗೆರೆ.ನ.6:** ನವೆಂಬರ್ 12ರಂದು ನಡೆಯಬೇಕಿದ್ದ ದಾವಣಗೆರೆ ಎಸ್‌ಸಿ ಮತ್ತು ಎಸ್‌ಟಿ ವಕೀಲರ ಸಹಕಾರ ಸಂಘದ ಉದ್ಘಾಟನೆ ಹಾಗೂ ಅಹಿಂದ ವಕೀಲರ ಸಮಾವೇಶ ಕಾರಣಾಂತರಗಳಿಂದ ಮುಂದೂಡಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಸಹಕಾರ ಸಂಘದ ಅಧ್ಯಕ್ಷ ಬಿ. ಎಂ.ಹನುಮಂತಪ್ಪ ಮಾತನಾಡಿ, ನವಂಬರ್ 12ರಂದು ನಗರದ ಪಿಬಿ ರಸ್ತೆಯಲ್ಲಿರುವ ಡಿಸಿ ಕಚೇರಿ ಸಮೀಪದ ಎಕೆಎಸ್ ಕನ್ವೆನ್ಷನ್ ಹಾಲ್‌ನಲ್ಲಿ ದಾವಣಗೆರೆ ಎಸ್‌ಸಿ ಮತ್ತು ಎಸ್‌ಟಿ ವಕೀಲರ ಸಹಕಾರ ಸಂಘದ ಉದ್ಘಾಟನೆ ಹಾಗೂ ಅಹಿಂದ ವಕೀಲರ ಸಮಾವೇಶ ನಡೆಯಬೇಕಿತ್ತು ಆದರೆ, ಮುಖ್ಯಮಂತ್ರಿಗಳು ಬಾರದೆ ಇರುವ ಕಾರಣ ಉಭಯ ಸಂಘಟನೆಗಳ ಉದ್ಘಾಟನಾ ಸಮಾರಂಭವನ್ನು ಮುಂದೂಡಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಎನ್.ಎಂ.ಆಂಜನೇಯ, ವಿ.ಗೋಪಾಲ, ಎಸ್. ರಾಜಪ್ಪ, ಎಲ್.ಶ್ಯಾಮ್, ಹಲಗೇರಿ ಮಂಜಪ್ಪ ಇದ್ದರು.

# ಜೆಪಿಕೆ ಇಂಡಸ್ಟ್ರೀಸ್ ಸ್ವಾವಲಂಬಿ ಬದುಕಿಗೆ ನೆರವಾಗಿದೆ : ಸಿ.ಟಿ ರವಿ

**ಚಿಕ್ಕಮಗಳೂರು:** ಬಡತನ ಮುಕ್ತ, ನಿರುದ್ಯೋಗ ಮುಕ್ತ ಸ್ವಾವಲಂಬಿ–ಸ್ವಾಭಿಮಾನಿ, ಆತ್ಮನಿರ್ಭರ ಭಾರತವಾಗಬೇಕೆಂಬುದು ಪ್ರಧಾನಿ ನರೇಂದ್ರ ಮೋದಿಯವರ ಕನಸಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಹೇಳಿದರು.

ಅವರು ಇಂದು ನಗರದ ಆರ್‌ಜಿ ರಸ್ತೆಯಲ್ಲಿರುವ ಜೋಳ್‌ದಾಳ್ ನಿಲಯದ ಆವರಣದಲ್ಲಿ "ಜೆಪಿಕೆ ಇಂಡಸ್ಟ್ರೀಸ್" ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಜೆಪಿಕೆ ಇಂಡಸ್ಟ್ರೀಸ್‌ನಲ್ಲಿ ಆಧುನಿಕ ತಂತ್ರಜ್ಞಾನದ ಬಳಕೆಯ ಜೊತೆಗೆ ತರಬೇತಿ ನೀಡಿ ಉದ್ಯೋಗ ನೀಡಲು ಯೋಜನೆ ರೂಪಿಸಲಾಗಿದ್ದು, ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ನೆರವಾಗುತ್ತದೆ. ಪ್ರತಿಯೊಬ್ಬ ಭಾರತೀಯನೂ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಚಿಂತನೆ ನಡೆದಿರುವ ಈ ಸಂದರ್ಭದಲ್ಲಿ ಇದು ಯಶಸ್ವಿಯಾದರೆ ಆತ್ಮನಿರ್ಭರ ಭಾರತ ಆಗಲು ಸಾಧ್ಯ ಎಂದರು.

ಜೆಪಿಕೆ ಇಂಡಸ್ಟ್ರೀಸ್ ಸಾವಿರಾರು ಯುವಕರಿಗೆ ಉದ್ಯೋಗ ನೀಡುವ ಉದ್ದಿಮೆಯಾಗಿ ಬೆಳೆಯಲಿ, ಜಿಲ್ಲೆಯ ನಿರುದ್ಯೋಗ ಸಮಸ್ಯೆಗೆ ಪರಿಹಾರ ರೂಪಿಸುವ ಕಾರ್ಯ ಮಾಡಲಿ ಎಂದು ಶುಭ ಹಾರೈಸಿದರು.

ಆಶಾಕಿರಣ ಚಾರಿಟಬಲ್ ಟ್ರಸ್ಟ್‌ನ ಮುಖ್ಯ ಟ್ರಸ್ಟಿ ಡಾ. ಜೆ.ಪಿ ಕೃಷ್ಣೇಗೌಡ ಮಾತನಾಡಿ, ಜಿಲ್ಲೆಯಲ್ಲಿ ಈ ರೀತಿಯ ಇಂಡಸ್ಟ್ರೀಸ್ ಇಲ್ಲ, ಆದಿಚುಂಚನಗಿರಿ ಪೀಠದ ಪರಮಪೂಜ್ಯ ಶ್ರೀಶ್ರೀಶ್ರೀ ನಿರ್ಮಲಾನಂದನಾಥ ಮಹಾಸ್ವಾಮಿಗಳು ಉದ್ಘಾಟಿಸಿ ಎಲ್ಲರಿಗೂ ಶುಭವಾಗಲಿ ಎಂದು ಆಶೀವರ್ದಿಸಿದ್ದಾರೆ ಎಂದರು.

ಜೆಪಿಕೆ ಇಂಡಸ್ಟ್ರೀಸ್ ನನ್ನ ಪುತ್ರಿಯ



ಕನಸಾಗಿತ್ತು, ನೂರು ಜನ ಸಂದರ್ಶನಕ್ಕೆ ಹಾಜರಾಗಿದ್ದರು. ಈಗ 15 ಜನರಿಗೆ ಉದ್ಯೋಗ ನೀಡಿದ್ದೇವೆ. ಅಗತ್ಯವಿದ್ದರೆ ಮುಂದೆ ನೋಡಿಕೊಂಡು ವಿಸ್ತರಿಸುತ್ತೇವೆ. ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಮನವಿ ಮಾಡಿದರು.

ಆಶ್ರಯ ಫೌಂಡೇಶನ್ ಉಪಾಧ್ಯಕ್ಷೆ ಡಾ. ವರ್ಷ ಅಭಿಷೇಕ್ ಮಾತನಾಡಿ, ಜೆಪಿಕೆ ಇಂಡಸ್ಟ್ರೀಸ್ ಚಿಕ್ಕಮಗಳೂರಿನಲ್ಲಿ ಮೊದಲ ಬಾರಿಗೆ ಚಿಕ್ಕದಾಗಿ ಆರಂಭಿಸಿದ್ದೇವೆ. ಮುಂದೆ ದೊಡ್ಡ ಉದ್ಯಮವಾಗಿ ಬೆಳೆಸಬೇಕೆಂದು ಕನಸು ಇದ್ದು, ಜಿಲ್ಲೆಯ ಜನರಿಗೆ ಶಕ್ತಿ ತುಂಬಿ ಸಬಲೀಕರಣ ಮಾಡಲು ಗುರಿಹೊಂದಲಾಗಿದೆ ಎಂದು ಹೇಳಿದರು.

ಎಲ್ಲರ ಸಹಕಾರದೊಂದಿಗೆ ಪ್ರಾರಂಭಿಸಿರುವ ಈ ಇಂಡಸ್ಟ್ರೀಸ್‌ನಲ್ಲಿ ಮುಂದೆ ಸಾವಿರಾರು ಮಹಿಳೆಯರು ಮತ್ತು ಪುರುಷರಿಗೆ ಉದ್ಯೋಗ ನೀಡುವ ಬೃಹತ್ ಉದ್ದಿಮೆಯಾಗಿ ಬೆಳೆಯಲಿ ಎಂದು ಶುಭ ಹಾರೈಸಿದರು.

ಜೆಪಿಕೆ ಇಂಡಸ್ಟ್ರೀಸ್‌ನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದ ಆದಿಚುಂಚನಗಿರಿ ಪೀಠದ ಶ್ರೀ ಜಗದ್ಗುರು ಡಾ. ನಿರ್ಮಲಾನಂದನಾಥ ಸ್ವಾಮೀಜಿಯವರು ದಿವ್ಯಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಶೃಂಗೇರಿ ಶಾಖಾ ಮಠದ ಗುಣನಾಥ ಸ್ವಾಮೀಜಿ, ಶಾಸಕ ಟಿ.ಡಿ ರಾಜೇಗೌಡ, ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಟಿ.ರಾಜಶೇಖರ್, ಬಿಜೆಪಿ ಜಿಲ್ಲಾಧ್ಯಕ್ಷ ಎಂ.ಆರ್ ದೇವರಾಜ್‌ಶೆಟ್ಟಿ, ಮುಖಂಡರಾದ ದೀಪಕ್ ದೊಡ್ಡಯ್ಯ, ಮಹೇಶ್, ಡಾ. ಗೌರಿ ಮತ್ತಿತರರು ಉಪಸ್ಥಿತರಿದ್ದರು.

## ಮುಳ್ಳಯ್ಯನಗಿರಿ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ನಿರ್ಬಂಧ ಮತ್ತೆ ವಿಸ್ತರಣೆ

**ಚಿಕ್ಕಮಗಳೂರು, ನ.6:** ತಾಲ್ಲೂಕಿನ ಮುಳ್ಳಯ್ಯನಗಿರಿ ಪ್ರದೇಶದ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ವಸ್ತುಗಳನ್ನು ಬಳಸುವ, ಒಯ್ಯುವ ಮತ್ತು ಮಾರಾಟ ಮಾಡುವ ಕ್ರಮಕ್ಕೆ ನಿರ್ಬಂಧ ವಿಧಿಸಿದ್ದ ಜಿಲ್ಲಾ ದಂಡಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಈ ನಿರ್ಬಂಧವನ್ನು ಡಿಸೆಂಬರ್ 19 ರವರೆಗೆ ಅಥವಾ ಮುಂದಿನ ಆದೇಶದವರೆಗೆ ವಿಸ್ತರಿಸಿದ್ದಾರೆ.

ಮುಳ್ಳಯ್ಯನಗಿರಿ ಪ್ರದೇಶದಲ್ಲಿ ಪರಿಸರವನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಈ ಪ್ರದೇಶದಲ್ಲಿ ಪ್ಲಾಸ್ಟಿಕ್ ಬಳಕೆ ಮತ್ತು ಮಾರಾಟವನ್ನು ನಿರ್ಬಂಧಿಸಿ 2024 ರ ಏಪ್ರಿಲ್ 16 ರಂದು ಮೊದಲ್ಗೊಂಡು ಆದೇಶ ಹೊರಡಿಸಿದ್ದು, ಅನಂತರದಲ್ಲಿ ಈ ಆದೇಶವನ್ನು ಅಕ್ಟೋಬರ್ 21ರವರೆಗೆ ವಿಸ್ತರಿಸುತ್ತಾ ಬರಲಾಗಿತ್ತು.

ಈ ಆದೇಶದ ಪ್ರಕಾರ ಉಪಯೋಗಿಸಿ ಎಸೆಯುವ ಕುಡಿಯುವ ನೀರಿನ ಪ್ಲಾಸ್ಟಿಕ್ ಬಾಟಲಿಗಳು, ಪ್ಲಾಸ್ಟಿಕ್ ಚಿಪ್ಸ್ ಪ್ಯಾಕೇಟ್‌ಗಳು, ಗುಟ್ಕಾ ಪ್ಯಾಕೇಟ್‌ಗಳು ಹಾಗೂ ಇದೇ ರೀತಿಯ ತಿನ್ನಲು ಯೋಗ್ಯವೆಂದು ಪ್ಯಾಕ್ ಮಾಡಿರುವ ಇತರೆ ಪ್ಲಾಸ್ಟಿಕ್ ಪ್ಯಾಕೇಟ್‌ಗಳ ಕೊಂಡೊಯ್ಯುವಿಕೆ, ಬಳಕೆ ಮತ್ತು ಮಾರಾಟ ಮಾಡುವುದನ್ನು ನಿರ್ಬಂಧಿಸಲಾಗಿದೆ. ಈ ಅದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ವಿರುದ್ಧ ಬಿಎನ್‌ಎಸ್ 221 ಮತ್ತು ಅನ್ವಯಿಸಬಹುದಾದ ಇತರೆ ಕಾನೂನಿನ ಅನ್ವಯ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

## ಪಡಿತರ ಚೀಟಿದಾರರಿಗೆ ಅಕ್ಕಿ ವಿತರಣೆ

**ಚಿಕ್ಕಮಗಳೂರು, ನ.6:** ಸಾರ್ವಜನಿಕ ವಿತರಣಾ ಪದ್ಧತಿಯಡಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿ–ದಾರರಿಗೆ 2025ರ ನವೆಂಬರ್ ಮಾಹೆಗೆ ಈ ಕೆಳಗಿನಂತೆ ಅಕ್ಕಿ ವಿತರಿಸಲಾಗುತ್ತಿದೆ.

ಅಂತ್ಯೋದಯ (ಎಎವೈ) ಪ್ರತೀ ಪಡಿತರ ಚೀಟಿಗೆ ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ತಾಲ್ಲೂಕಿನವರಿಗೆ ಎನ್‌ಎಫ್‌ಎಸ್‌ಎ ಯೋಜನೆಯಲ್ಲಿ ಕೇಂದ್ರದ 14 ಕೆ.ಜಿ. ಅಕ್ಕಿ, 21 ಕೆ.ಜಿ. ರಾಗಿ, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್. ಆರ್.ಪುರ ತಾಲ್ಲೂಕಿನವರಿಗೆ ಕೇಂದ್ರದ 35 ಕೆ.ಜಿ. ಅಕ್ಕಿ, ಈ ಎಲ್ಲಾ ತಾಲ್ಲೂಕುಗಳಿಗೆ ಅನ್ನಭಾಗ್ಯ ಯೋಜನೆಯಡಿ 4 ಮತ್ತು 4ಕ್ಕಿಂತ ಹೆಚ್ಚು ಸದಸ್ಯರಿರುವ ಪಡಿತರ ಚೀಟಿಯ ಪ್ರತೀ ಸದಸ್ಯರಿಗೆ 5 ಕೆ.ಜಿ. ಅಕ್ಕಿ ವಿತರಿಸಲಾಗುವುದು. ಆದ್ಯತಾ (ಬಿಪಿಎಲ್) ಪಡಿತರ ಚೀಟಿ ಹೊಂದಿರುವ ಪ್ರತೀ ಸದಸ್ಯರಿಗೆ ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ತಾಲ್ಲೂಕಿನಲ್ಲಿ ಎನ್‌ಎಫ್‌ಸಿ ಯೋಜನೆಯಡಿ ಕೇಂದ್ರದಿಂದ 2 ಕೆ.ಜಿ. ಅಕ್ಕಿ, 3 ಕೆ.ಜಿ. ರಾಗಿ, ರಾಜ್ಯದಿಂದ 5 ಕೆ.ಜಿ. ಅಕ್ಕಿ, ಅನ್ನಭಾಗ್ಯ ಯೋಜನೆಯಡಿ ಕೇಂದ್ರ ಹಾಗೂ ರಾಜ್ಯದ ತಲಾ 5 ಕೆ.ಜಿ. ಅಕ್ಕಿ, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ ತಾಲ್ಲೂಕಿನವರಿಗೆ ಕೇಂದ್ರ ಹಾಗೂ ರಾಜ್ಯದಿಂದ 5 ಕೆ.ಜಿ. ಅಕ್ಕಿ, ಅನ್ನಭಾಗ್ಯ ಯೋಜನೆಯಡಿ 5 ಕೆ.ಜಿ. ಅಕ್ಕಿ ವಿತರಿಸಲಾಗುವುದು ಎಂದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಕ್ರೀಡಾ ಮನೋಭಾವನೆ ಬೆಳೆಸಿಕೊಳ್ಳಬೇಕು : ಡಾ.ಬಿ.ಜೆ ಅಮೃತೇಶ್ವರ್

**ಚನ್ನಗಿರಿ :** ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಕ್ರೀಡಾ ಮನೋಭಾವನೆ ಬೆಳೆಸಿಕೊಳ್ಳಬೇಕು ಮತ್ತು ಚನ್ನಗಿರಿಯಲ್ಲಿ ನಡೆಯುವಂತಹ ಈ ಬಾಲ್ ಬ್ಯಾಡ್ಮಿಂಟನ್‌ನಲ್ಲಿ ದಾವಣಗೆರೆ ವಿಶ್ವ ವಿದ್ಯಾಲಯದಿಂದ ಆಯ್ಕೆ ಸಹ ನಡೆಯಲಿದೆ ಎಂದು ಚನ್ನಗಿರಿ ಶ್ರೀ ಶಿವಲಿಂಗೇಶ್ವರ ಸರಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತ–ಕೋತ್ತರ ಕೇಂದ್ರದ ಪ್ರಾಚಾರ್ಯ ಡಾ.ಬಿ.ಜೆ ಅಮೃತೇಶ್ವರ್ ಹೇಳಿದರು.

ಗುರುವಾರ ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯ ,ಶ್ರೀ ಶಿವಲಿಂಗೇಶ್ವರ ಸರಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಐ.ಕ್ಯೂ.ಐ.ಸಿ, ದಾವಣಗೆರೆ ವಿಶ್ವವಿದ್ಯಾಲಯ ದೈಹಿಕ ಶಿಕ್ಷಣ ನಿರ್ದೇಶಕರ ಸಂಘ ದಾವಣಗೆರೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ದಾವಣಗೆರೆ ವಿ.ವಿ. ಪುರುಷರ ಅಂತರ್ ಕಾಲೇಜು ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿ ಮತ್ತು ದಾ.ವಿ.ವಿ. ಪುರುಷ ಮತ್ತು ಮಹಿಳಾ ತಂಡಗಳ ಆಯ್ಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ



ವಿದ್ಯಾರ್ಥಿಗಳು ತಮ್ಮ ಶಿಕ್ಷಣದ ಜೊತೆಯಲ್ಲಿ ಕ್ರೀಡಾಚಟುವಟಿಕೆಯನ್ನು ಸಹ ವೃದ್ದಿಸಿಕೊಂಡು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಉತ್ತಮ ಅವಕಾಶ ಇದಾಗಿದ್ದು ಕ್ರೀಡಾಪಟುಗಳು ಉತ್ತಮ ಪ್ರದರ್ಶನ ನೀಡಬೇಕು ಎಂದರು. ಪುರುಷರ ಕ್ರೀಡೆಗೆ ಸುಮಾರು 15 ತಂಡಗಳು ಬಂದಿವೆ, ದಾವಣಗೆರೆ ವಿ.ವಿ.ಯ ಎಲ್ಲಾ ಕೋಚ್‌ಗಳು ಬಂದಿದ್ದು ಇಲ್ಲಿ ತೀರ್ಪುಗಾರರ ಅಂತಿಮ ತೀರ್ಮಾನವಾಗಿದ್ದು ಎಲ್ಲರೂ ಪ್ರಶ್ನೆ ಮಾಡದೇ ಅನುಸರಿಸಬೇಕು ಎಂದರು. ಭಾರತ ದೇಶದಿಂದ ಮಹಿಳಾ ಕ್ರಿಕೆಟ್ ತಂಡದವರು ಸಾಧನೆ ಸಾಧಕರ ಸ್ವತ್ತು ಎಂದು ಸಾಧನೆ ಮಾಡಿ ತೋರಿಸಿದ್ದಾರೆ. ಕ್ರೀಡಾ ಸ್ಪರ್ಧೆಯಲ್ಲಿ ಬಾಗವಹಿಸುವುದು ಮುಖ್ಯವಾಗಿದ್ದು ಬದ್ದತೆ ಮತ್ತು ಪ್ರಾಮಾಣಿಕತೆಯಿಂದ ಆಟವಾಡಬೇಕು. ಇತ್ತೀಚಿನ ದಿನಗಳಲ್ಲಿ ಕ್ರೀಡೆ ಸೊರಗುತ್ತಿದ್ದು ಯುವಕರು ಹೆಚ್ಚು ಹೆಚ್ಚು ಬಾಗವಹಿಸಬೇಕು ಎಂದರು.

ಕಾಲೇಜು ಅಭಿವೃದ್ದಿ ಸಮಿತಿಯ ಉಪಾಧ್ಯಕ್ಷ ಸಿ.ವೈ. ರವಿಕುಮಾರ್ ಮಾತನಾಡಿ ಜಿಲ್ಲೆಯ ವಿವಿಧ ಬಾಗಗಳಿಂದ ಕ್ರೀಡಾಪಟುಗಳು ಆಗಮಿಸಿದ್ದು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ಅವಕಾಶವಿದೆ. ವಿದ್ಯಾರ್ಥಿಗಳು ಇತರೇ ವ್ಯಸನಗಳ ದಾಸರಾಗದೇ ಉತ್ತಮ ಕ್ರೀಡೆ ಪ್ರದರ್ಶನ ಮಾಡುವ ಮೂಲಕ ಉತ್ತಮ ಆರೋಗ್ಯವನ್ನು ಹೊಂದಬೇಕು ಎಂದರು. ಈ ಸಂದರ್ಭದಲ್ಲಿ ಡಾ.ಸಿ.ಕೆ. ರಮೇಶ್, ಐ.ಕ್ಯೂ.ಐ.ಸಿ. ಸಂಚಾಲಕ ಜಿ.ಎಸ್.ಸುರೇಶ್, ಕಾಲೇಜು ಅಭಿವೃದ್ದಿ ಸಮಿತಿ ಸದಸ್ಯರಾದ ಜ್ಯೋತಿ ಪ್ರಸಾದ್, ಎಂ.ಆರ್.ಶಿವರಾಜ್, ಜ್ಯೋತಿ ಕೋರಿ. ಕಾಲೇಜು ದೈಹಿಕ ಶಿಕ್ಷಣ ನಿರ್ದೇಶಕ ಎಸ್.ಜಿ. ಕಲ್ಲೇಶಪ್ಪ, ಕಾಲೇಜಿನ ಬೋಧಕ ಮತ್ತು ಬೋಧಕೇತರ ವರ್ಗದವರು ಹಾಜರಿದ್ದರು.

## ನವೆಂಬರ್ 8ರಂದು ಮಕ್ಕನ್ ಪುರ್ ವಲಿಗಳ ಗಂಧ ಪ್ರಾರಂಭ ಕಾರ್ಯಕ್ರಮ

**ದಾವಣಗೆರೆ.ನ.6:** ಅರಸಿಕೆರೆ ಹೋಬಳಿಯ ಉಚ್ಚಂಗಿದುರ್ಗ, ನೆನಗಾನಹಳ್ಳಿ ಕ್ರಾಸ್ಸಿನಲ್ಲಿ ಬರುವ ಮಕ್ಕನ್ ಪುರ್ ಜಾಹಿದಾ ಮದಾರ್ ಸೀಲ್ ಸಿಲಾದಲ್ಲಿ ನವೆಂಬರ್ 8ರಂದು ಶನಿವಾರ ಸಂಜೆ 4ರಿಂದ ಮಕ್ಕನ್ ಪುರ್ ವಲಿಗಳ ಗಂಧ ಪ್ರಾರಂಭ ಹಾಗೂ ರಾತ್ರಿ 7ರಿಂದ 11 ಗಂಟೆಯವರಿಗೂ ಊರ್ಸು ಚಾಲ್ತು ಇರುತ್ತದೆ ಎಂದು ಇಂಡಿಯನ್ ನ್ಯೂ ಐ.ಎನ್.ಸಿ.ಪಿ ಕಾಂಗ್ರೆಸ್ ಪಕ್ಷದ ಜಿಲ್ಲಾಧ್ಯಕ್ಷ ಮುದ್ದಾಪುರದ ರೆಹಮಾನ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾರ್ಯಕ್ರಮವು ಮಿಲ್ಲತ್ ಸೈಫುಲ್ಲಾ ಸಾಬ್ ಇವರ ನೇತೃತ್ವದಲ್ಲಿ ನಡೆಯಲಿದೆ. ಇದಲ್ಲದೇ 2ನೇ ವಾರ್ಷಿಕೋತ್ಸವ ನಡೆಯಲಿದೆ. ಮದಾರಿಯ ಷಾ ಮದರ್ ಸಾಬ್ ಇಲ್ಲಿನ ಗುರುಗಳಾಗಿದ್ದು, ಇವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದರು.

ಟ್ರಸ್ಟ್ ಮುಖ್ಯಸ್ಥ ಷಾ ಮದರ್ ಸಾಬ್, ಷಜದಾ, ನಸೀನ್, ಗಾಂಧಿ ನಸೀನ್ ಮಕ್ಬೋಲ್ ಸಾಬ್ ಇವರ ಸಾರಥ್ಯದಲ್ಲಿ ನಡೆಯಲಿದೆ. ಮುಖ್ಯ ಅತಿಥಿಗಳಾದ ಡಾ.ಇಬ್ರಾಹಿಂ ಸಾಬ್, ಡಾ.ಅಮಾವುಲ್ಲಾ ಖಾನ್, ಪೀರಲ ಗುಡ್ಡ ಖಲಂದರ್ ಸಾಬ್ ಗುರುಜೀ, ಇಮಾಯತ್ ಖಾನ್, ಜಬೀವುಲ್ಲಾ, ಹಾಜಿಸಾಬ್, ದಾದಾಪೀರ್, ಅರಸಿಕೆರೆ ಇಮಾಮ್ ಹುಸೇನ್ ಸಾಬ್, ಮುನ್ನಾವರ್ ಸಾಬ್, ಆಟೋ ರಾಜಸಾಬ್ ಇತರೆ ಗಣ್ಯರು ಆಗಮಿಸಲಿದ್ದಾರೆ.ಸುಮಾರು 450–500 ಜನಗಳಿಗೆ ಅನ್ನದಾಸೋಹ ಏರ್ಪಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ಕಾರಣ ಧಾರ್ಮಿಕ ಕೇಂದ್ರಕ್ಕೆ ಎಲ್ಲಾ ಜನಾಂಗದವರು, ಹಿರಿಯರು, ಮುಂಗಡರು, ಸಾರ್ವಜನಿಕರು ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಇವರು ಮನವಿ ಮಾಡಿದರು. ಸುದ್ದಿಗೋಷ್ಟಿಯಲ್ಲಿ ಷಾ ಮದರ್ ಸಾಬ್, ಮಹಮ್ಮದ್ ಇಬ್ರಾಹಿಂ ಸಾಬ್, ಕೆ.ಅರ್.ಇಮಾಯತ್ ಖಾನ್, ಸೈಯದ್ ಮಕ್ಬೂಲ್ ಸಾಬ್ ಇತರರು ಇದ್ದರು

# ಅಂಧರ ಒಕ್ಕೂಟದ ಸಮಾಜಮುಖಿ ಕಾರ್ಯ ಶ್ಲಾಘನೀಯ : ಸಚಿವ ಕೆ.ಜೆ ಜಾರ್ಜ್

**ಚಿಕ್ಕಮಗಳೂರು:** ಜನಸಾಮಾನ್ಯರಿಗೆ ಅನುಕೂಲವಾಗುವಂತೆ ವಸತಿ ಯೋಜನೆಯಡಿ ಹಲವಾರು ಕಾರ್ಯಕ್ರಮಗಳನ್ನು ಕೊಡುವ ಮೂಲಕ ರಾಜ್ಯಸರ್ಕಾರ ದೊಡ್ಡ ಕ್ರಾಂತಿ ಮಾಡುತ್ತಿದೆ ಎಂದು ರಾಜ್ಯ ಇಂಧನ ಖಾತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ ಜಾರ್ಜ್ ತಿಳಿಸಿದರು.

ಅವರು ಇಂದು ಕೆಂಪನಹಳ್ಳಿಯ ಆಶಾಕಿರಣ ಅಂಧಮಕ್ಕಳ ಶಾಲಾವರಣದಲ್ಲಿ ಇಂಧನ ಇಲಾಖೆ, ಜಿಲ್ಲಾಡಳಿತ, ಜಿ.ಪಂ, ಕರ್ನಾಟಕ ಅಂಧರ ಒಕ್ಕೂಟ, ಆಶಾಕಿರಣ ಚಾರಿಟಬಲ್ ಟ್ರಸ್ಟ್, ಆಶ್ರಯ ಫೌಂಡೇಶನ್, ಆಶಾಕಿರಣ ಅಂಧಮಕ್ಕಳ ವಸತಿಯುತ ಪಾಠಶಾಲೆ ಇವರುಗಳ ಸಂಯುಕ್ತಾಶ್ರಯದಲ್ಲಿ ಕೆಪಿಟಿಸಿಎಲ್‌ನ ಸಿಎಸ್‌ಆರ್ ನಿಧಿಯಲ್ಲಿ ಸುಮಾರು 51 ಲಕ್ಷ ರೂ ವೆಚ್ಚದಲ್ಲಿ ಅಂಧಮಕ್ಕಳ ಸಿಬ್ಬಂದಿಗಳಿಗೆ ನಿರ್ಮಿಸಿರುವ ಕೃಷ್ಣ ಮತ್ತು ಕಾವೇರಿ ವಸತಿ ಗೃಹಗಳನ್ನು ಉದ್ಘಾಟಿಸಿ ಮಾತನಾಡಿದರು.


ಕಳೆದ ಹಲವಾರು ವರ್ಷಗಳಿಂದ ಆಶಾಕಿರಣ ಅಂಧಮಕ್ಕಳ ಟ್ರಸ್ಟ್



ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿದೆ ಎಂದು ಶ್ಲಾಘಿಸಿದ ಅವರು, ರಾಜ್ಯಾದ್ಯಂತ ಅಂಧರ ಕೌಶಲ್ಯಕ್ಕೆ ತಕ್ಕಂತೆ ಸೌಲಭ್ಯಗಳನ್ನು ನೀಡಿ ಸಮಾಜದ ಮುನ್ನಲೆಗೆ ತರುವ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಅಂಧರಿಗೆ ಕೇವಲ ಭಾಷಣದಲ್ಲಿ ಸಿಂಪತಿ ತೋರದೆ ಶಕ್ತಿ ತುಂಬುವ ಅಗತ್ಯ ಇದೆ. ಇದು ಜಾರಿಯಾದಾಗ ರಾಜ್ಯ, ದೇಶ ಅವರನ್ನು ಕಾಣುವ ಮನಸ್ಥಿತಿ ಬದಲಾಗುತ್ತದೆ ಎಂದು ತಿಳಿಸಿದರು.

## ಸಿ.ಟಿ. ರವಿಯ ಹಿಂದುತ್ವದ ಮುಖವಾಡ ಕಳಚಿದೆ: ರೂಬೆನ್ ಮೊಸಸ್



**ಚಿಕ್ಕಮಗಳೂರು :** ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿಯ ನಕಲಿ ಹಿಂದುತ್ವದ ಸತ್ಯ ಹೊರಗೆ ಬಂದಿದೆ, ಅವರ ಹೃದಯದಲ್ಲಿ ಇರುವುದೇ ಬಾಯಿಯಲ್ಲಿ ಹೊರಹಾಕಿದ್ದಾರೆ ಎಂದು ಕಾಂಗ್ರೆಸ್ ವಕ್ತಾರ ರೂಬೆನ್ ಮೊಸಸ್ ಆರೋಪಿಸಿದ್ದಾರೆ.

ಕಳೆದ ದಿನ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಸವಿತಾ ಸಮಾಜದ ವೃತ್ತಿ ಧರ್ಮದ ಬಗ್ಗೆ ಬಹಳ ಕೀಳಾಗಿ ಮಾತನಾಡಿರುವುದು ಅವರ ನಿಜವಾದ ಹಿಂದುತ್ವದ ಪ್ರೀತಿ ಸಮಾಜಕ್ಕೆ ತಿಳಿದುಬಂದಿದೆ ಒಬ್ಬ ಜವಾಬ್ದಾರಿಯುತ ವ್ಯಕ್ತಿ ಈ ರೀತಿ ಮಾತನಾಡಿರುವುದು ಬಿಜೆಪಿಯ ನಿಜವಾದ ಹಿಂದುತ್ವ ಬಟ್ಟಬಯಲಾಗಿದೆ ಎಂದಿದ್ದಾರೆ.


ಸವಿತಾ ಸಮಾಜದವರು ತಮ್ಮ ಜೀವಿತ ಕಾಲವೆಲ್ಲ ಈ ಸಮಾಜದ ಎಲ್ಲಾ ಧರ್ಮದವರಿಗೂ ತಮ್ಮ ವೃತ್ತಿ ಸೇವೆ ಮಾಡುತ್ತಾ ಬಂದಿರುತ್ತಾರೆ, ಅವರಿಲ್ಲದಿರುತ್ತಿದ್ದರೆ ಮಾನವ ಕಾಡುಪ್ರಾಣಿಗಳ ಹಾಗೆ ವಿಚಿತ್ರವಾಗಿರಬೇಕಿತ್ತು.

# ಜ್ಞಾನ ಕ್ರಿಯಾತ್ಮಕ ಧರ್ಮ ಪರಿಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯ : ರಂಭಾಪುರಿ ಶ್ರೀ

**ಮಾನ್ವಿ:** ಬಹು ಜನ್ಮದ ಪುಣ್ಯ ಫಲದಿಂದ ಮಾನವ ಜೀವನ ಪ್ರಾಪ್ತವಾಗಿದೆ. ಅರಿವು ಆದರ್ಶಗಳಿಂದ ಬದುಕು ಸಮೃದ್ಧಗೊಳ್ಳಬೇಕು. ಜ್ಞಾನ ಕ್ರಿಯಾತ್ಮಕ ಧರ್ಮ ಪರಿಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಕರೇಗುಡ್ಡ ಮಹಾಂತೇಶ್ವರ ಮಠದ ಮಹಾಲಿಂಗ ಶಿವಾಚಾರ್ಯ ಸ್ವಾಮಿಗಳ ಪಟ್ಟಾಧಿಕಾರದ ರಜತ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವ ಜೀವನದಲ್ಲಿ ಗುರಿ ಮತ್ತು ಗುರುವಿನ ಅವಶ್ಯಕತೆ ಬಹಳಷ್ಟಿದೆ. ಶಿವಜ್ಞಾನದ ಅರಿವು ಉಂಟುಮಾಡಿ ಭವ ಬಂಧನ ಕಳೆಯುವ ಶಕ್ತಿ ಶ್ರೀ ಗುರುವಿನಲ್ಲಿದೆ. ಹಣತೆ ತನಗಾಗಿ ಉರಿಯುವುದಿಲ್ಲ. ಜಗಕೆ ಬೆಳಕು ನೀಡಲು ತನ್ನನ್ನು ತಾನು ಸುಟ್ಟುಕೊಳ್ಳುತ್ತದೆ.



ಬೆಳೆದು ನಿಂತ ಮರ ಹರಿಯುವ ನೀರು ಬೀಸುವ ಗಾಳಿ ಹೊತ್ತ ಭೂಮಿ ತ್ಯಾಗದ ಹಿರಿಮೆಯನ್ನು ಪರೋಪಕಾರವನ್ನು ಎತ್ತಿ ತೋರಿಸುತ್ತವೆ. ಮಠಗಳು ಸಂಸ್ಕಾರ ಕೊಡುವ ಕೇಂದ್ರಗಳಾಗಿವೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ವೀರಶೈವ ಧರ್ಮ ಸಂಹಿತೆಯಲ್ಲಿ ದಶವಿಧ ಧರ್ಮಸೂತ್ರಗಳನ್ನು ಬೋಧಿಸಿ ಉದ್ಧರಿಸಿದ್ದಾರೆ. ಸರಳ ಮತ್ತು ಸಾತ್ವಿಕತೆಗೆ ಹೆಸರಾದ ಕರೇಗುಡ್ಡದ ಮಹಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಸದಾ ಕ್ರಿಯಾಶೀಲರಾಗಿ ಧರ್ಮ ಮತ್ತು ಸಮಾಜ ಕಟ್ಟುವ ಕಾರ್ಯ ಮಾಡುತ್ತಿದ್ದಾರೆ. ಅವರಿಂದ ಈ ಭಾಗದಲ್ಲಿ ಇನ್ನಷ್ಟು ಮತ್ತಷ್ಟು ಧರ್ಮ ಸಂಸ್ಕೃತಿ ಪರಂಪರೆ ಮತ್ತು ಆದರ್ಶ ಚಿಂತನೆಗಳು ಬೆಳೆದುಬರಲೆಂದು ಆಶಿಸಿ ಶ್ರೀಗಳವರಿಗೆ ರೇಷ್ಮೆಮಡಿ ಸ್ಮರಣಿಕೆ ಫಲಪುಷ್ಪವಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ನೇತೃತ್ವ ವಹಿಸಿದ ಕರೇಗುಡ್ಡದ ಮಹಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಬಹು ದಿನಗಳ ಸಂಕಲ್ಪ ಸಾಕಾರಗೊಂಡ ಸುದಿನ ಇಂದು. ಪೂರ್ವಾಚಾರ್ಯರ ಕೃಪಾ ಕಾರುಣ್ಯದಿಂದ ಇಂಥ ಅಪೂರ್ವ ಪ್ರಸಂಗ ಒದಗಿ ಬಂದಿದೆ. ಪಟ್ಟಾಧಿಕಾರವಾಗಿ 25 ವರುಷ ತುಂಬಿದ ಹಿನ್ನೆಲೆಯಲ್ಲಿ ಈ ಭಾಗದ ಧರ್ಮಾಭಿಮಾನಿಗಳು ಸೇರಿ ಒಗ್ಗಟ್ಟಿನಿಂದ ಈ ಕಾರ್ಯ ಮಾಡುತ್ತಿರುವುದು ತಮಗೆ ಅತ್ಯಂತ ಸಂತೋಷ ತಂದಿದೆ. ಶ್ರೀ ರಂಭಾಪುರಿ ಜಗದ್ಗುರುಗಳು ಆಗಮಿಸಿ ನಮ್ಮೆಲ್ಲರಿಗೂ ಆಶೀರ್ವದಿಸಿರುವುದು ಅಂತ:ಕರಣದ ಗುರು ಕಾರುಣ್ಯವೆಂದು ಭಾವಿಸುತ್ತೇವೆ ಎಂದರು.

ಮ್ಮಿಗನೂರು ವಾಮದೇವ ಮಹಾಂತ ಶಿವಾಚಾರ್ಯ ಸ್ವಾಮಿಗಳು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ನೀಲಗಲ್ಲು, ದೇವದುರ್ಗ, ರಾಯಚೂರು ಮಂಗಳವಾರಪೇಟೆ ಹಿರೇಮಠ, ಮಾನ್ವಿ ಕಲ್ಮಠ, ಸಿಂಧನೂರು, ಮಸ್ಕಿ, ಸಂತೆಕಲ್ಲೂರು, ಹೆಡಗಾಪುರ, ರಾಯಚೂರು ಕಿಲ್ಲೇಬೃಹನ್ಮಠ ಶ್ರೀಗಳವರು ಪಾಲ್ಗೊಂಡಿದ್ದರು.

ಮುಖ್ಯ ಅತಿಥಿಗಳಾಗಿ ಮಾನ್ವಿ ಶಾಸಕ ಬಿ.ಹಂಪಯ್ಯ, ಮಾಜಿ ಶಾಸಕರಾದ ಬಸನಗೌಡ ಬ್ಯಾಗವಾಟ, ರಾಜಾ ವೆಂಕಟಪ್ಪನಾಯಕ, ಕಾಂಗ್ರೆಸ್ ಧುರೀಣ ರವಿ ಭೋಸರಾಜು ಪಾಲ್ಗೊಂಡಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**